ಸಂಪುಟ: 04 ಸಂಚಿಕೆ: 166 ಪುಟಗಳು: 08 ಬುಧವಾರ 28 ಆಗಸ್ಟ್ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

ಮುಂಜಾನೆ ಮಾತು

ವೈಯಕ್ತಿಕವಾಗಿ ಯಾರೊಬ್ಬರನ್ನು ಪ್ರೀತಿಸುವುದು ಬಂಧನ, ಎಲ್ಲಾರನ್ನೂ ಸಮಾನವಾಗಿ ಪ್ರೀತಿಸಿ, ಆಗ ಎಲ್ಲಾ ಆಸೆಗಳು ಬಿದ್ದು ಹೋಗುತ್ತವೆ..

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಆರೋಪಿ ನಟ ದರ್ಶನ್ ಸಮರ್ಥಿಸಿ ಕೊಂಡ 'ಮಾಜಿ ಸಂಸದೆ ಸುಮಲತಾ

• ಉದಯವಾಹಿನಿ, ಬೆಂಗಳೂರು

ಪರಪ್ಪನ ಅಗ್ರಹಾರ ಜೈಲಿನಲ್ಲಿ ನಟ ದರ್ಶನ್ ಅವರಿಗೆ ರಾಜಾತಿಥ್ಯ ವಿಚಾರ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಇದರ ನಡುವೆ ಮಾಜಿ ಸಂಸದೆ ಸುಮಲತಾ ಅಂಬರೀಶ್ ಅವರು ಆರೋಪಿ ನಟ ದರ್ಶನ್ ಅವರನ್ನು ಸಮರ್ಥಿಸಿಕೊಂಡಿದ್ದಾರೆ. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದಂತ ಅವರು, ವಿಲ್ಸನ್ ಗಾರ್ಡನ್ ನಾಗ ಜೊತೆಗೆ ದರ್ಶನ್ ಕಾಣಿಸಿಕೊಂಡಿರುವ ವಿಚಾರವಾಗಿ ಪ್ರತಿಕ್ರಿಯಿಸಿದರು. ಜೈಲಲ್ಲಿ ಯಾರು ಇರ್ತಾರೆ? ಜೈಲಲ್ಲಿ ಇರೋದೇ ಕ್ರಿಮಿನಲ್ಸ್ ಅಲ್ವ ಎಂದು ಪ್ರಶ್ನಿಸಿದರು. ಜೈಲಿನಲ್ಲಿ ಓಡಾಡುವುದಕ್ಕೆ ಯಾರು ಸಿಗುತ್ತಾರೆ. ತಪ್ಪು ಮಾಡಿದವರೇ ಅಲ್ಲವೇ ಜೈಲಿಗೆ ಹೋಗುವುದು. ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳನ್ನೇ ಕೇಳಬೇಕು. ದರ್ಶನ್ ಆರೋಪಿ ಸ್ಥಾನದಲ್ಲಿ ಇದ್ದಾರೆ ಎಂಬುದಾಗಿ ಹೇಳಿದರು.

ಈ ಘಟನೆಯ ಬಗ್ಗೆ ಉಳಿದವರನ್ನು ಬಿಟ್ಟು ದರ್ಶನ್ ಹೈಲೈಟ್ ಮಾಡುತ್ತಿದ್ದಾರೆ. ದರ್ಶನ್ ಹಾಗೆ ಕುಳಿತು ಮಾತನಾಡಿದ್ದು ಖಂಡಿತವಾಗಿ ತಪ್ಪೇ, ಆ ತಪ್ಪಿಗೆ ಜೈಲು ಅಧಿಕಾರಿಗಳು ಅಮಾನತು ಮಾಡಿದ್ದಾರೆ. ದರ್ಶನ್ ಬಳ್ಳಾರಿ ಜೈಲಿಗೆ ಶಿಫ್ಟ್ ಮಾಡುವುದರ ಬಗ್ಗೆ ಗೊತ್ತಿಲ್ಲ ಎಂದರು.

ಸಿದ್ದರಾಮಯ್ಯ ಯಾವ ಕ್ಷಣದಲ್ಲಾದರೂ ರಾಜೀನಾಮೆ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಯಾವ ಕ್ಷಣದಲ್ಲಾದರೂ ರಾಜೀನಾಮೆ ನೀಡಬಹುದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಯಾವ ಕ್ಷಣದಲ್ಲಾದರೂ ರಾಜೀನಾಮೆ ನೀಡಬಹುದು. ಬಿಜೆಪಿ ಹಾಗೂ ಜೆಡಿಎಸ್ ನೇತೃತ್ವದಲ್ಲಿ ನಡೆದ ಮೈಸೂರು ಚಲೋ ಪಾದಯಾತ್ರೆಯ ಯಶಸ್ಸು ಕಂಡು ಕಾಂಗ್ರೇಸ್ ನಾಯಕರು ಗಾಬರಿಗೊಂಡಿದ್ದಾರೆ ಎಂದು ಹೇಳಿದ್ದಾರೆ. ರಾಜ್ಯದ ಜನರ ವಿಶ್ವಾಸವನ್ನು ಕಳೆದುಕೊಂಡಿರುವ ಮುಖ್ಯಮಂತ್ರಿಗಳು ಅಭಿವೃದ್ಧಿ ಕಾರ್ಯಗಳನ್ನು ಕೈಬಿಟ್ಟು ಕಾಲಹರಣ ಮಾಡುತ್ತಿದ್ದಾರೆ. ವಾಲ್ಮೀಕಿ ನಿಗಮದ ಹಗರಣ ಒಪ್ಪಿಕೊಂಡಂತೆ ಮುಡಾ ಹಗರಣವನ್ನೂ ಒಪ್ಪಿಕೊಂಡು ನ್ಯಾಯಾಲಯದ ಆದೇಶಕ್ಕೂ ಮುನ್ನ ಭಂಡತನ ಬಿಟ್ಟು ರಾಜೀನಾಮೆ ನೀಡಿ ಎಂದು ಆಗ್ರಹಿಸಿದ್ದಾರೆ.

'ವೈಟ್ನರ್' ಹಚ್ಚಿದ್ದಕ್ಕೆ ನಾನಾರ್ಥ ಬಿಜೆಪಿ – ಜೆಡಿಎಸ್ ಲೆಕ್ಕಾಚಾರ ಉಲ್ಟಾ

• ಉದಯವಾಹಿನಿ, ಬೆಂಗಳೂರು

ವೈಟ್ನರ್ ಹಚ್ಚಿದ್ದಕ್ಕೆ ನಾನಾರ್ಥ ಕಲ್ಪಿಸಿದ ಬಿಜೆಪಿ–ಜೆಡಿಎಸ್ ಲೆಕ್ಕಾಚಾರ ಈಗ ಉಲ್ಟಾ ಆಗಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.ಈ ಬಗ್ಗೆ ಟ್ವೀಟ್ ಮಾಡಿದ ಸಿಎಂ ಸಿದ್ದರಾಮಯ್ಯ ಮುಡಾಗೆ ಬದಲಿ ಭೂಮಿ ನೀಡುವಂತೆ ನೀಡಿದ ಅರ್ಜಿಯಲ್ಲಿ ವೈಟ್ನರ್ ಹಚ್ಚಿರುವುದಕ್ಕೆ ನಾನಾರ್ಥ ಕಲ್ಪಿಸಿ, ನನ್ನ ವಿರುದ್ಧ ಮುಗಿಬಿದ್ದಿದ್ದ ಬಿಜೆಪಿ – ಜೆಡಿಎಸ್ ಸ್ವಯಂಘೋಷಿತ ಕಾನೂನು ಪಂಡಿತರ ಲೆಕ್ಕಾಚಾರ ಈಗ ತಲೆಕೆಳಗಾಗಿದೆ. ಜಟ್ಟಿ ನೆಲಕ್ಕೆ ಬಿದ್ದರೂ ಮೀಸೆ ಮಣ್ಣಾಗಲಿಲ್ಲ ಎಂಬಂತೆ ಕೆಲವರು, ''ಟಾರ್ಚ್ ಹಿಡಿದವರು ಯಾರು? ವೀಡಿಯೋ ಮಾಡಿದ್ದು ಯಾರು?'' ಎಂಬ ತಲೆಬುಡವಿಲ್ಲದ ಪ್ರಶ್ನೆ ಕೇಳುತ್ತಾ ತಮ್ಮನ್ನು ತಾವೇ ಸಮಾಧಾನಪಡಿಸಿಕೊಳ್ಳುತ್ತಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಸಿದ್ದರಾಮಯ್ಯ ಬೆಂಬಲಿಸಿ ಹಿಂದುಳಿದ ಸಂಘಟನೆಗಳ ರಾಜಭವನ ಚಲೋ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಅಭಿಯೋಜನೆಗೆ ಅನುಮತಿ ನೀಡಿದ್ದನ್ನು ವಿರೋಧಿಸಿ ಶೋಷಿತ ಹಿಂದುಳಿದ ಸಂಘಟನೆಗಳ ಒಕ್ಕೂಟ ನಗರದಲ್ಲಿಂದು ರಾಜಭವನ ಚಲೋ ನಡೆಸಿದವು.

ಮುಖ್ಯಮಂತ್ರಿ ಸಿದ್ದರಾಮಯ್ಯನವರ ತೇಜೋವಧೆ ಮಾಡಲಾಗುತ್ತಿದೆ. ಬಿಜೆಪಿ–ಜೆಡಿಎಸ್ ಪಕ್ಷಗಳು ಜನರಿಂದ ಚುನಾಯಿತವಾದ ಕಾಂಗ್ರೇಸ್ ಸರ್ಕಾರವನ್ನು ಅಸ್ಥಿರಗೊಳಿಸಲು ಕುತಂತ್ರ ಮಾಡುತ್ತಿವೆ ಎಂದು ಸಂಘಟನೆಗಳ ಮುಖಂಡರು ಆರೋಪಿಸಿದರು. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಬಿಜೆಪಿಯ ಹಾಗೂ ಕೇಂದ್ರ ಸರ್ಕಾರದ ಕೈಗೊಂಬೆಯಂತೆ ವರ್ತಿಸುತ್ತಿದ್ದಾರೆ. ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರ ವಿರುದ್ಧ ಬಾಕಿ ಇರುವ ಪ್ರಕರಣವನ್ನು ಕಡೆಗಣಿಸಲಾಗಿದೆ.ಬಿಜೆಪಿಯ ಶಶಿಕಲಾ ಜೊಲ್ಲೆ, ಮುರುಗೇಶ್ ನಿರಾಣಿ, ಜನಾರ್ದನ ರೆಡ್ಡಿ ಅವರುಗಳ ವಿರುದ್ಧದ ಪ್ರಕರಣಗಳಲ್ಲಿ ತೀರ್ಮಾನ ತೆಗೆದುಕೊಳ್ಳಲು ವಿಳಂಬ ಮಾಡಲಾಗಿದೆ. ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಕರಣದಲ್ಲಿ 10 ಗಂಟೆಗಳಲ್ಲೇ ಪ್ರಕ್ರಿಯೆಗಳು ಆರಂಭವಾಗಿದೆ. ಇದು ದುರದ್ದೇಶಪೂರಿತ ಕ್ರಮ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ನಗರದ ಫ್ರೀಡಂಪಾರ್ಕ್‌ನಿಂದ ರಾಜಭವನದತ್ತ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು. ಪೊಲೀಸರು ಅರ್ಧ ದಾರಿಯಲ್ಲಿ ಪ್ರತಿಭಟನಾಕಾರರನ್ನು ತಡೆಹಿಡಿದರು.

ಮನಮೋಹನ್ ಸಿಂಗ್ ವರದಿ ಮಂಡನೆ

ರಾಜಾತಿಥ್ಯ ತನಿಖೆಗೆ 3 ತಂಡ ರಚನೆ

ಜೈಲು ಸುಧಾರಣೆಗೆ ಐಪಿಎಸ್ ಅಧಿಕಾರಿಗಳ ನೇತೃತ್ವದಲ್ಲಿ ಸಮಿತಿ ರಚನೆ

• ಉದಯವಾಹಿನಿ, ಬೆಂಗಳೂರು

ನಟ ದರ್ಶನ್ , ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಸೇರಿದಂತೆ ಹಲವರಿಗೆ ಜೈಲಿನಲ್ಲಿ ರಾಜಾತಿಥ್ಯ ನೀಡುತ್ತಿರುವ ಹಿನ್ನಲೆ ಜೈಲಿನ ಸಮಗ್ರ ಸುಧಾರಣೆಗೆ ಐಪಿಎಸ್ ಅಧಿಕಾರಿಗಳ ನೇತೃತ್ವದಲ್ಲಿ ಸಮಿತಿ ರಚನೆ ಮಾಡುವುದಾಗಿ ಗೃಹಸಚಿವ ಪರಮೇಶ್ವರ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎರಡುಮೂರು ದಿನಗಳ ಒಳಗಾಗಿ ಈ ಕುರಿತು ಸಮಿತಿಯೊಂದನ್ನು ಪ್ರಕಟಿಸಲಾಗುವುದು. ಜೊತೆಗೆ ಈ ಹಿಂದೆ ಸಚಿವ ಎಚ್.ಕೆ.ಪಾಟೀಲ್ ಅವರ ಸಮಿತಿ ಜೈಲಿನ ಸುಧಾರಣೆಗೆ ನೀಡಿದ್ದ ವರದಿ ಪರಿಗಣಿಸಲಾಗುವುದು.

ಈವರೆಗೂ ಅದು ತಮ ಗಮನಕ್ಕೆ ಬಂದಿರಲಿಲ್ಲ ಎಂದು ಹೇಳಿದರು. ಪರಪ್ಪನ ಅಗ್ರಹಾರದಲ್ಲಿ ನಟ ದರ್ಶನ್ ,ಇತರ ಕೈದಿಗಳನ್ನು ಒಂದು ಬ್ಯಾರೆಕ್ನಿಂದ ಮತ್ತೊಂದು ಬ್ಯಾರೆಕ್ಗೆ ಸುಲಭವಾಗಿ ತಿರುಗಾಡಲು ಅವಕಾಶ ಮಾಡಿಕೊಟ್ಟಿದ್ದು ಸಿಸಿಟಿವಿಯಲ್ಲಿ ದಾಖಲಾಗಿದೆ. ಇದು ಒಂದು ಜೈಲಿನ ವಿಚಾರವಲ್ಲ, ಬೆಳಗಾವಿ ಹಿಂಡಲಗ ಸೇರಿದಂತೆ ರಾಜ್ಯಾದ್ಯಂತ ಜೈಲುಗಳಲ್ಲಿ ಲೋಪಗಳು ಕಂಡುಬಂದಿವೆ. ಹಿರಿಯ ಅಧಿಕಾರಿಗಳ ನೇತೃತ್ವದಲ್ಲಿ, ದರ್ಶನ್ ಗುಂಪಿಗೆ ಸಹಾಯ ಮಾಡಿದವರ ವಿರುದ್ಧ ತನಿಖೆ ನಡೆಸಲಾಗುವುದು. ಈಗಾಗಲೇ 9 ಮಂದಿ ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿದ್ದು, ತನಿಖೆ ಮುಂದುವರೆದಿದೆ ಎಂದರು. ಜೈಲಿನ ಸುಧಾರಣೆಗೆ ರಾಷ್ಟ್ರಮಟ್ಟದಲ್ಲೂ ಮನಮೋಹನ್ ಸಿಂಗ್ ಕಾಲದಲ್ಲಿ ವರದಿಯೊಂದು ಮಂಡನೆಯಾಗಿರುವ ಬಗ್ಗೆ ಮಾಹಿತಿ ಇದೆ. ಅದನ್ನು ಪರಿಶೀಲಿಸಲಾಗುವುದು. ದರ್ಶನ್ ವಿಚಾರ ಒಂದೇ ಅಲ್ಲ ಒಟ್ಟಾರೆ ಜೈಲಿನ ವ್ಯವಸ್ಥೆಗಳನ್ನೇ ಪುನರ್ ಪರಿಶೀಲಿಸಿ ಸರಿಪಡಿಸಲಾಗುವುದು ಎಂದು ಹೇಳಿದರು.

ಪರಪ್ಪನ ಅಗ್ರಹಾರ ಕಾರಾಗೃಹವನ್ನು ಮೂರು ವಿಭಾಗಗಳನ್ನಾಗಿ ಮಾಡಲು ಅವಕಾಶವಿಲ್ಲ. ಆಂತರಿಕವಾಗಿ ಸಣ್ಣಪ್ಪಟ್ಟ ಹೊಂದಾಣಿಕೆಗಳನ್ನು ಮಾಡಿಕೊಳ್ಳಬಹುದು. ಶಿಕ್ಷಾಧೀನ ಕೈದಿಗಳು, ವಿಚಾರಣಾಧೀನ ಕೈದಿಗಳು, ಮಹಿಳಾ ಕೈದಿಗಳು ಎಂದು ಪ್ರತ್ಯೇಕ ಮಾಡಬಹುದು. ಆದರೆ ಅದರ ಹೊರತಾಗಿ ಘಟಕಗಳವಾರು ವಿಭಜಿಸಲು ಸಾಧ್ಯವಿಲ್ಲ ಎಂದರು. ಶಿವಮೊಗ್ಗ, ಬಳ್ಳಾರಿ, ಮಂಗಳೂರು ಸೇರಿದಂತೆ ಹಲವು ಜೈಲುಗಳ ವ್ಯವಸ್ಥೆಗಳನ್ನು ಪರಿಶೀಲಿಸಲಾಗುತ್ತಿದೆ ಎಂದು ಅವರು ತಿಳಿಸಿದರು.

ದರ್ಶನ್ ಪ್ರಕರಣದಲ್ಲಿ ರಾಜಕೀಯ ಲಾಭ ಪಡೆದುಕೊಳ್ಳುವ ಅಗತ್ಯವಿಲ್ಲ. ಇದರಲ್ಲಿ ನಾವು ಯಾವುದನ್ನೂ ಮುಚ್ಚಿಡುತ್ತಿಲ್ಲ. ಸಾಕ್ಷಿಗಳನ್ನು ಬೆದರಿಸುವ ಅಗತ್ಯವೂ ನಮಗಿಲ್ಲ ಎಂದರು.



ಸಿಸಿ ಟಿವಿ ದುರಸ್ತಿಗೆ ಸೂಚನೆ ನೀಡಿದ್ದ ಸಮಿತಿ

ಇನ್ನು ಸಮಿತಿಯ ಪರಿಶೀಲನೆಯ ವೇಳೆ ಕೆಲವು ಜೈಲುಗಳಲ್ಲಿ ಸಿಸಿ ಟಿವಿ ಕ್ಯಾಮೆರಾಗಳು, ಎಕ್ಸ್‌ರೇ ಬ್ಯಾಗೇಜ್ ಉಪಕರಣಗಳು ಹಾಗೂ ಡೀಪ್ ಸರ್ಚ್ ಉಪಕರಣಗಳು ಕೆಟ್ಟು ಹೋಗಿರುವ ಬಗ್ಗೆಯೂ ಗಮನಕ್ಕೆ ಬಂದಿತ್ತು. ಇದನ್ನು ಶೀಘ್ರದಲ್ಲಿ ದುರಸ್ತಿ ಪಡಿಸುವಂತೆ ಶಿಫಾರಸು ಮಾಡಿತ್ತು.

ಜೈಲು ಗೋಡೆಗಳ ಎತ್ತರ ಹೆಚ್ಚಿಸಲು ಸೂಚನೆ

ಇನ್ನು ನಿಷೇಧಿತ ವಸ್ತುಗಳು ಜೈಲಿಗೆ ಪ್ರವೇಶಿಸದಂತೆ ತಡೆಯುವ ನಿಟ್ಟಿನಲ್ಲಿ ಜೈಲಿನ ವೀಕ್ಷಣಾ ಗೋಪುರಗಳಿಗೆ ಅಗತ್ಯವಿರುವ ಸರ್ಚ್ ಲೈಟ್, ಬೈನಾಕ್ಯುಲರ್ ಖರೀದಿಸಲು ಸಮಿತಿ ಶಿಫಾರಸು ಮಾಡಿತ್ತು. ಅಷ್ಟೇ ಅಲ್ಲದೆ, ಜೈಲು ಭದ್ರತೆ ದೃಷ್ಟಿಯಿಂದ ಗೋಡೆಗಳಿಗೆ ವಿದ್ಯುತ್ ಬೇಲಿಯನ್ನು ಅಳವಡಿಸುವಂತೆ ಶಿಫಾರಸು ಮಾಡಿತ್ತು. ಇದರ ಜೊತೆಗೆ ಕೆಲವು ಸಂದರ್ಭದಲ್ಲಿ ಅನಿರೀಕ್ಷಿತವಾಗಿ ತಪಾಸಣೆಯನ್ನು ನಡೆಸುವುದನ್ನು ಕಡ್ಡಾಯವಾಗಿ ಮಾಡುವಂತೆಯೂ ಸೂಚಿಸಲಾಗಿತ್ತು. ಈ ವೇಳೆ ಶ್ವಾನದಳವನ್ನು ಬಳಕೆ ಮಾಡಬೇಕು ಎಂದು ಸಮಿತಿ ಶಿಫಾರಸು ಮಾಡಿತ್ತು. ಕೇಂದ್ರ ಸರ್ಕಾರ ಜೈಲಿನಲ್ಲಿರುವ ಮಾದಕ ವ್ಯಸನಿಗಳನ್ನು ಮತ್ತು ಮಾದಕ ವಸ್ತುಗಳನ್ನು ಪತ್ತೆ ಹಚ್ಚಲು 2010ರಲ್ಲೇ ಸೂಚನೆ ನೀಡಿತ್ತು. ಆದರೆ ಇಲಾಖೆ ಈ ಸೂಚನೆಯನ್ನು ಪಾಲನೆ ಮಾಡದೆ ಇರುವುದಕ್ಕೆ ಸಮಿತಿ ತೀವ್ರ ಅಸಮಾಧಾನ ವ್ಯಕ್ತಪಡಿಸಿತ್ತು. ಅಲ್ಲದೆ ಏಕಕಾಲದಲ್ಲಿ ರಾಜ್ಯದ ವಿವಿಧ ಜೈಲುಗಳಲ್ಲಿ ದಿಢೀರ್ ತಪಾಸಣೆಯನ್ನು ನಡೆಸುವಂತೆ ಶಿಫಾರಸು ಮಾಡಿತ್ತು.

ಇನ್ನಷ್ಟು ಅಧಿಕಾರಿಗಳ ಅಮಾನತು

ಕೊಲೆ ಆರೋಪದಲ್ಲಿ ಜೈಲು ಸೇರಿರುವ ನಟ ದರ್ಶನ್ ಗೆ ಜೈಲಿನಲ್ಲಿ ವಿಶೇಷ ಸೌಲಭ್ಯ ನೀಡಿರುವ ಆರೋಪಕ್ಕೆ ಸಂಬಂಧಿಸಿದಂತೆ ಈಗಾಗಲೇ 9 ಜನರನ್ನು ಅಮಾನತು ಮಾಡಲಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ಕೈಗೊಂಡಿದ್ದು, ವರದಿ ಆಧಾರದ ಮೇಲೆ ತಪ್ಪೆಸಗಿರುವ ಇನ್ನಷ್ಟು ಅಧಿಕಾರಿಗಳನ್ನು ಅಮಾನತು ಮಾಡಲಾಗುವುದು ಎಂದರು.

1. ಪರಪ್ಪನ ಅಗ್ರಹಾರ ಜೈಲಿನಲ್ಲಿ ನಟ ದರ್ಶನ್ ಗೆ ರಾಜಾತಿಥ್ಯ ದೊರೆತ ಹಿನ್ನೆಲೆಯಲ್ಲಿ ಎಚ್ ಕೆ ಪಾಟೀಲ್ ವರದಿ ಮುನ್ನಲೆಗೆ
2. 2020ರಲ್ಲಿ ಸಾರ್ವಜನಿಕ ಲೆಕ್ಕ ಪತ್ರ ಸಮಿತಿಯ ಅಧ್ಯಕ್ಷರಾಗಿದ್ದ ವೇಳೆ ಜೈಲು ಸುಧಾರಣೆ ಬಗ್ಗೆ ವರದಿ ನೀಡಿದ್ದ ಎಚ್ ಕೆ ಪಾಟೀಲ್
3. ಮಾದಕ ವಸ್ತು, ಮೊಬೈಲ್ ಸೇರಿದಂತೆ ಜೈಲಿನೊಳಗೆ ನಿಷಿದ್ಧವಿರುವ ವಸ್ತುಗಳು ಕೈದಿಗಳಿಗೆ ಸಿಗುವಂತೆ ಮಾಡುತ್ತಿರುವ ಸಿಬ್ಬಂದಿ ವಿರುದ್ಧ ಕ್ರಮಕ್ಕೆ ಶಿಫಾರಸು

ನ್ಯಾಯಾಂಗ ತನಿಖೆಗೆ ರೇಣುಕಾಸ್ವಾಮಿ ತಂದೆ ಒತ್ತಾಯ

ದರ್ಶನ್‌ಗೆ ರಾಜಾತಿಥ್ಯ ಸಿಗುತ್ತಿರುವುದರ ಬಗ್ಗೆ ಹಾಲಿ ನ್ಯಾಯಾಧೀಶರಿಂದ ನ್ಯಾಯಾಂಗ ತನಿಖೆ ನಡೆಸಬೇಕು. ಈ ಘಟನೆಯಿಂದ ನಮಗೆ ನೋವಾಗಿದೆ. ನಾವು ಸರಕಾರ, ಪೊಲೀಸರ ಅಧಿಕಾರಿಗಳನ್ನು ನಂಬಿದ್ದೇವೆ. ಹಾಲಿ ನ್ಯಾಯಮೂರ್ತಿಗಳಿಂದ ನ್ಯಾಯಾಂಗ ತನಿಖೆ ಮಾಡಬೇಕು' ಎಂದು ಮೃತ ರೇಣುಕಾಸ್ವಾಮಿ ತಂದೆ ಕಾಶಿನಾಥಯ್ಯ ಆಗ್ರಹಿಸಿದ್ದಾರೆ

ದರ್ಶನ್ ಅವರನ್ನು ಬೇರೆ ಜೈಲಿಗೆ ವರ್ಗಾವಣೆ ಮಾಡುವ ಬಗ್ಗೆ ಬಂಧೀಖಾನೆಯ ಅಧಿಕಾರಿಗಳ ಸಮಿತಿ ನಿರ್ಧಾರ ತೆಗೆದುಕೊಳ್ಳುತ್ತದೆ. ಪರಿಸ್ಥಿತಿಯನ್ನು ನ್ಯಾಯಾಲಯದ ಗಮನಕ್ಕೆ ತಂದು ನಂತರ ಕ್ರಮ ಕೈಗೊಳ್ಳಬಹುದು. ಈ ವಿಚಾರದಲ್ಲಿ ಸರ್ಕಾರ ನಿರ್ಧಾರ ತೆಗೆದುಕೊಳ್ಳಲು ಸಾಧ್ಯವಿಲ್ಲ. ಜೈಲಿನ ಅಧಿಕಾರಿಗಳೇ ಎರಡು ಮೂರು ದಿನಗಳಲ್ಲಿ ಸೂಕ್ತ ನಿರ್ಣಯ ತೆಗೆದುಕೊಳ್ಳಲಿದ್ದಾರೆ.

-ಜಿ. ಪರಮೇಶ್ವರ್, ಗೃಹ ಸಚಿವ

ಬಜೆಟ್‌ನಲ್ಲಿ ಘೋಷಿಸಿದ ಎಲ್ಲಾ ಕಾರ್ಯಕ್ರಮ ಜಾರಿಗೆ ಸಿಎಂ ಸೂಚನೆ

• ಉದಯವಾಹಿನಿ, ಬೆಂಗಳೂರು

ಬಜೆಟ್‌ನಲ್ಲಿ ಘೋಷಿಸಿರುವ ಎಲ್ಲಾ ಕಾರ್ಯಕ್ರಮಗಳನ್ನು ಜವಾಬ್ದಾರಿಯಿಂದ ಜಾರಿ ಮಾಡಿ ಎಂದು ಆರೋಗ್ಯ ಇಲಾಖೆ ಪ್ರಧಾನ ಕಾರ್ಯದರ್ಶಿ ಹರ್ಷಗುಪ್ತ ಅವರಿಗೆ ವೇದಿಕೆಯಿಂದಲೇ ಸೂಚನೆಯನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ನೀಡಿದರು. ಗಾಂಧಿನಗರ ವಿಧಾನಸಭಾ ಕ್ಷೇತ್ರದ ಕೆ.ಸಿ.ಜನರಲ್ ಆಸ್ಪತ್ರೆ ಆವರಣದಲ್ಲಿ ನೂತನ ತಾಯಿ–ಮಕ್ಕಳ ಆಸ್ಪತ್ರೆ, ಬೋಧನಾ ಕಟ್ಟಡ, ಶವಾಗಾರ ಕಟ್ಟಡ, ನೂತನ ಮಾದರಿ ಅಡುಗೆ ಮನೆ, ಲಾಂಡ್ರಿ ಕಟ್ಟಡ, ವೈದ್ಯಕೀಯ ಘನ ತ್ಯಾಜ್ಯ ಘಟಕದ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮುಂದಿಟ್ಟ ಬೇಡಿಕೆಗಳನ್ನು ಅನುಮೋದಿಸಿ ಹಣ ಬಿಡುಗಡೆ ಮಾಡಿದ್ದೇನೆ. ನೂತನ ಆಸ್ಪತ್ರೆ ಕಟ್ಟಡವನ್ನೂ ನಾನೇ ಉದ್ಘಾಟಿಸುತ್ತೇನೆ. ಬೇಗ ಕೆಲಸ ಮುಗಿಸಿ ಎಂದು ಸಚಿವರಿಗೆ ಸೂಚನೆ ನೀಡಿದರು. ರೋಗಿಗಳ ಸಮಸ್ಯೆಗಳನ್ನು ಸಂಯಮದಿಂದ ಕೇಳಿಸಿಕೊಂಡರೆ ಅರ್ಧ ಕಾಯಿಲೆ ಗುಣಮುಖವಾಗುತ್ತದೆ ಎಂದರು. ಕಾರ್ಯಕ್ರಮದ ವೇದಿಕೆಯಲ್ಲೇ ಜಯದೇವ ನಿರ್ದೇಶಕರನ್ನು ದೂರವಾಣಿ ಮೂಲಕ ಸಂಪರ್ಕಿಸಿದ ಮುಖ್ಯಮಂತ್ರಿಗಳು, ಇನ್ನು ಮುಂದೆ ದಿನದ 24 ಗಂಟೆ ಜಯದೇವದಲ್ಲಿ ಎಲ್ಲಾ ರೀತಿಯ ಆರೋಗ್ಯ ಸೇವೆ ಒದಗಿಸಬೇಕು. ಇದಕ್ಕೆ ತಕ್ಕ ಸಿದ್ಧತೆಗಳನ್ನು ಮಾಡಿಕೊಳ್ಳಿ ಎನ್ನುವ ಸೂಚನೆ ನೀಡಿದರು. ಸರ್ಕಾರಿ ಆಸ್ಪತ್ರೆ ವೈದ್ಯರು ಖಾಸಗಿ ಆಸ್ಪತ್ರೆ ವೈದ್ಯರಿಗಿಂತ ಯಾವುದರಲ್ಲೂ ಕಡಿಮೆ ಇಲ್ಲ. ಸರ್ಕಾರಿ ಆಸ್ಪತ್ರೆಗಳೂ ಖಾಸಗಿ ಆಸ್ಪತ್ರೆಗಳ ಗುಣಮಟ್ಟದಲ್ಲಿರಬೇಕು ಎನ್ನುವುದು ಸರ್ಕಾರದ ಗುರಿ ಎಂದು ನುಡಿದರು.

ಜಯದೇವ ಆಸ್ಪತ್ರೆಯಲ್ಲಿರುವ ಗುಣಮಟ್ಟ ಮತ್ತು ಶುಚಿತ್ವ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲೂ ಬರಬೇಕು. ಆಗ ಮಾತ್ರ ಸರ್ಕಾರ ಕೊಡುವ ಅನುದಾನಕ್ಕೆ ಅರ್ಥ ಬರುತ್ತದೆ ಎಂದರು. ನಾನು ಸೇರಿ ಮಂತ್ರಿಗಳು, ರಾಜಕಾರಣಿಗಳು ಸರ್ಕಾರಿ ಆಸ್ಪತ್ರೆಗಳಿಗೆ ಹೋಗುವುದಿಲ್ಲ. ಇದರಲ್ಲಿ ನಮ್ಮಗಳ ತಪ್ಪು ಕೂಡ ಇದೆ. ಆದರೆ ಖಾಸಗಿ ಆಸ್ಪತ್ರೆಗಳ ಗುಣಮಟ್ಟ ಮತ್ತು ಶುಚಿತ್ವ ಸರ್ಕಾರಿ ಆಸ್ಪತ್ರೆಗಳಲ್ಲೂ ಇರುವಂತೆ ನೋಡಿಕೊಳ್ಳಲು ಅಗತ್ಯ ಅನುದಾನ ಕೊಡುತ್ತಲೇ ಇದ್ದೇವೆ. ಆಸ್ಪತ್ರೆಯ ಆಡಳಿತ ಪಾರದರ್ಶಕವಾಗಿ, ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಿ, ಸೇವೆ ಸಲ್ಲಿಸಿದರೆ ಇದು ಸಾಧ್ಯವಿದೆ ಎಂದರು. ಅಪಘಾತ ವಲಯಗಳ ಹತ್ತಿರದಲ್ಲೇ ಟ್ರಾಮಾ ಸೆಂಟರ್ ಗಳನ್ನು ತೆರೆಯಲು ಸರ್ಕಾರ ಮುಂದ

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ಅಖಿಳೇಶನೆನಿಪನಾವಿಶ್ವನು

ನಿಜಗುಣರ ಪರಮಾನುಭವ ಬೋಧೆಯ ಮಾತು. ವಿಶ್ವಜೀವನ ವರ್ಣನೆ. ಸ್ಥೂಲ ಶರೀರ ಬಳಸಿ ವ್ಯವಹರಿಸುವ ಜೀವ ಚೈತನ್ಯ ವಿಶ್ವಜೀವ. ತೋರುವ ಶರೀರವುಳ್ಳವನು, ಇರುವಿಕೆ ಹುಟ್ಟುವಿಕೆ ಮುಂತಾದ ಆರು ವಿಕಾರವುಳ್ಳವನು, ಮನಸ್ಸು ಇಂದ್ರಿಯ ಶಬ್ದಾದಿ ವಿಷಯ ಎಂಬ ಮೂರು ಲೋಕಗಳಲ್ಲಿ ಸಂಚರಿಸುವವನು, ಸತ್ತ್ವಗುಣಪ್ರಧಾನವಾದ ವೈಕಾರಿಕ ಅಹಂಕಾರವುಳ್ಳವನು, ಮದುವೆ ಸಂತಾನ ಮುಂತಾದ ಸುಂದರ ಸಂಸಾರವುಳ್ಳವನು, ಅಜ್ಞಾನವನ್ನು ಆಶ್ರಯಿಸಿದವನು, ವಿಷಯಗಳ ಬೆನ್ನ ಹತ್ತುವವನು, ಇಂದ್ರಿಯ ಹಾಗೂ ವಿಷಯಗಳ ಸಂಪರ್ಕದಿಂದ ಉಂಟಾಗುವ ಅನೇಕ ವ್ಯಾಪಾರ ಮಾಡುವವನು ವಿಶ್ವಜೀವ. ಕಣ್ಣು ಮುಂತಾದ ಪಂಚ ಜ್ಞಾನೇಂದ್ರಿಯಗಳಿಗೆ, ಕೈ ಮುಂತಾದ ಪಂಚ ಕರ್ಮೇಂದ್ರಿಯಗಳಿಗೆ ಈತನೇ ಒಡೆಯ. ಮನಸ್ಸಿನ ಮೂಲಕ ಎಲ್ಲೆಡೆಗೂ ಹೋಗುವವ, ಮೂಲಾತ್ಮರೂಪದಿಂದ ಎಲ್ಲರೊಳಗೂ ಹುದುಗಿರುವವ, ಮನದ ಸಹಕಾರದಿಂದ ಇಂದ್ರಿಯಗಳ ಮೂಲಕ ಎಲ್ಲ ಕಾರ್ಯಗಳನ್ನು ಮಾಡುವವ, ಬುದ್ಧಿಯ ಮೂಲಕ ಎಲ್ಲವನ್ನು ಅರಿಯುವವ, ಎಲ್ಲ ತತ್ತ್ವಗಳಿಗೆ ಅಸ್ತಿತ್ವ ಒದಗಿಸುವವ, ಹೊಸ ಲೋಕವನ್ನೇ ಸೃಷ್ಟಿಸುವ ಸಕಲ ಶಕ್ತಿಯುಳ್ಳವ, ಜಗತ್ತನ್ನೇ ಆಳುವವ ಈ ವಿಶ್ವಜೀವ. ಮಾನವನ ವೈಜ್ಞಾನಿಕ ಕ್ರಾಂತಿ ಇದಕ್ಕೆ ನಿದರ್ಶನ!!

ಬೆಳಗಾವಿಯಲ್ಲಿ ಪ್ರಶ್ನೆ ಪತ್ರಿಕೆ ಲೀಕ್ ಆಗಿದೆ ಎಂದು ಪರೀಕ್ಷಾರ್ಥಿಗಳ ಪ್ರತಿಭಟನೆ

• ಉದಯವಾಹಿನಿ ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗದ ಗೆಜೆಟೆಡ್ ಪ್ರೊಬೇಷನರ್ಸ್ 384 ಹುದ್ದೆಗಳ ನೇಮಕಾತಿ ಪೂರ್ವಭಾವಿ ಪರೀಕ್ಷೆ ಇಂದು ನಡೆಯುತ್ತಿದೆ. ಪ್ರಶ್ನೆ ಪತ್ರಿಕೆ ಸೋರಿಕೆ ಆಗಿದೆ ಎಂದು ಆರೋಪಿಸಿ ಅಭ್ಯರ್ಥಿಗಳು ಪ್ರತಿಭಟನೆ ನಡೆಸಿರುವ ಘಟನೆ ಬೆಳಗಾವಿಯಲ್ಲಿ ನಡೆದಿದೆ. ಬೆಳಗಾವಿಯ ಅಂಜುಮನ್ ಕಾಲೇಜಿನಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ ಅಲ್ಲದೇ ಪ್ರಶ್ನೆ ಪತ್ರಿಕೆ ಕೊಡಲು 15 ನಿಮಿಷ ತಡ ಮಾಡಲಾಗಿದೆ. ಒಎಂಆರ್ ಶೀಟ್ ಕೂಡ ಅದಲು ಬದಲಾಗಿದೆ ಎಂದು ಅಭ್ಯರ್ಥಿಗಳು ಪ್ರತಿಭಟನೆ ನಡೆಸಿರುವ ಘಟನೆ ನಡೆದಿದೆ. ವಿಚಾರ ತಿಳಿದ ಕೂಡಲೇ ಬೆಳಗಾವಿ ಜಿಲ್ಲಾಧಿಕಾರಿ ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದು, ಪರೀಕ್ಷೆ ಬರೆಯಲು ಹೆಚ್ಚುವರಿ ಸಮಯ ಕೊಡುತ್ತೇವೆ ಎಂದು ಹೇಳಿದ ಬಳಿಕ ಪರೀಕ್ಷೆ ಆರಂಭವಾಗಿದೆ.

ಬೆಳ್ಳಂಬೆಳಗ್ಗೆ ರೌಡಿಶೀಟರ್‌ಗಳ ಮನೆ ಮೇಲೆ ಪೊಲೀಸರ ದಾಳಿ : ಹಲವರು ವಶಕ್ಕೆ

• ಉದಯವಾಹಿನಿ ಬೆಂಗಳೂರು

ಬೆಂಗಳೂರಿನ ಹಲವಡೆ ಬೆಳ್ಳಂಬೆಳಗ್ಗೆ ಪೊಲೀಸರು ರೌಡಿಶೀಟರ್ ಶೀಟರ್ ಗಳ ಮನೆ ಮೇಲೆ ದಾಳಿ ನಡೆಸಿದ್ದು, ಹಲವರನ್ನು ವಶಕ್ಕೆ ಪಡೆದಿದ್ದಾರೆ.ಮುಂಜಾನೆ ಬೆಂಗಳೂರಿನ ವಿದ್ಯಾರಣ್ಯಪುರ ಸೇರಿದಂತೆ ಹಲವು ಕಡೆ ರೌಡಿಶೀಟರ್ ಗಳ ಮನೆ ಪೊಲೀಸರು ದಾಳಿ ನಡೆಸಿ ಹಲವರನ್ನು ವಶಕ್ಕೆ ಪಡೆದುಕೊಂಡಿದ್ದಾರೆ ಎಂದು ತಿಳಿದುಬಂದಿದೆ. ಬೆಳಗ್ಗೆ 5 ಗಂಟೆಯಿಂದಲೂ ಪೊಲೀಸರು ರೌಡಿಶೀಟರ್ ಗಳ ಮನೆ ಮೇಲೆ ದಾಳಿ ನಡೆಸಿ ಹಲವರನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಪೊಲೀಸರ ದಾಳಿ ವೇಳೆ ರೌಡಿಶೀಟರ್‌ಗಳ ಮನೆಯಲ್ಲಿ ಲಾಂಗ್ ಪತ್ತೆಯಾಗಿದ್ದು, ಪೊಲೀಸರು ವಿಚಾರಣೆ ನಡೆಸಿದ್ದಾರೆ.

35 ಡಿವೈಎಸ್ಪಿ 88 ಇನ್ಸ್‌ಪೆಕ್ಟರ್‌ಗಳ ವರ್ಗಾವಣೆ ಮಾಡಿ ಆದೇಶ

• ಉದಯವಾಹಿನಿ ಬೆಂಗಳೂರು

ಸರ್ಕಾರವು ಆಡಳಿತ ಯಂತ್ರಕ್ಕೆ ಮತ್ತೆ ಮೇಜರ್ ಸರ್ಜರಿ ಮಾಡಲಾಗಿದ್ದು, ಒಟ್ಟು 35 ಡಿವೈಎಸ್ಪಿ, 88 ಇನ್ಸ್‌ಪೆಕ್ಟರ್‌ಗಳನ್ನು ವರ್ಗಾವಣೆ ಮಾಡಿ ಆದೇಶ ಹೊರಡಿಸಲಾಗಿದೆ. 2 ವರ್ಷಗಳ ಕಾಲಾವಧಿ ನಿಯಮ ಜಾರಿಯಾದ ನಂತರ ಮೊದಲ ಬಾರಿಗೆ 35 ಡಿವೈಎಸ್ಪಿ, 88 ಇನ್ಸ್‌ಪೆಕ್ಟರ್‌ಗಳನ್ನು ಪೊಲೀಸ್ ಇಲಾಖೆ ವರ್ಗಾವಣೆ ಮಾಡಿದೆ. ಇನ್ಸ್‌ಪೆಕ್ಟರ್‌ಮೇಲ್ಪಟ್ಟದ ಅಧಿಕಾರಿಗಳ ಕಾರ್ಯ ನಿರ್ವಹಣೆಗೆ ರಾಜ್ಯ ಸರ್ಕಾರ 2 ವರ್ಷಗಳ ಕಾಲಾವಧಿ ನಿಗದಿಗೊಳಿಸಿ ನಿಯಮ ಜಾರಿ ಮಾಡಿದೆ. ಈ ಬೆಳವಣಿಗೆ ಬೆನ್ನಲ್ಲೇ ಇನ್ಸ್‌ಪೆಕ್ಟರ್ ಮೇಲ್ಮಟ್ಟದ ಅಧಿಕಾರಿಗಳ ಕಾರ್ಯ ನಿರ್ವಹಣೆಗೆ ಎರಡು ವರ್ಷಗಳ ಕಾಲಾವಧಿ ಹೊಸ ನೀತಿ ಅನುಸಾರ ವರ್ಗಾವಣೆಗೆ ಚಾಲನೆ ನೀಡಲಾಗಿದೆ. ಮೊದಲ ಹಂತದಲ್ಲಿ 35 ಡಿವೈಎಸ್ಪಿ, 88 ಇನ್ಸ್‌ಪೆಕ್ಟರ್‌ಗಳನ್ನು ಪೊಲೀಸ್ ಇಲಾಖೆಯಲ್ಲಿ ವರ್ಗಾವಣೆ ಮಾಡಿ ಆದೇಶ ಹೊರಡಿಸಲಾಗಿದೆ.

ಗ್ರಾಮೀಣ ಜೀವನ ಶೈಲಿ ಅರಿಯಲು ಶಿಬಿರ

• ಉದಯವಾಹಿನಿ ದೇವನಹಳ್ಳಿ

ಸಮುದಾಯ ಜೀವನ ಶಿಬಿರ ಆಯೋಜಿಸುವುದರಿಂದ ವಿದ್ಯಾರ್ಥಿಗಳಿಗೆ ಗ್ರಾಮೀಣ ಜೀವನ ಶೈಲಿ ಅರಿವಿಗೆ ಬರಲಿದೆ ತಹಶೀಲ್ದಾರ್ ಎಚ್.ಬಾಲಕೃಷ್ಣ ತಿಳಿಸಿದರು. ತಾಲ್ಲೂಕಿನ ಕೋಡಗುರ್ಕಿ ಬಳಿ ಇರುವ ಕತ್ತಿಮಾರಮ್ಮ ದೇವಾಲಯದ ಸಮುದಾಯ ಭವನದಲ್ಲಿ ನಳಂದ ಶಿಕ್ಷಣ ಮಹಾವಿದ್ಯಾಲದಿಂದ ಹಮ್ಮಿಕೊಂಡಿದ್ದ ಸಮುದಾಯ ಜೀವನ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು. ಯುವ ಪೀಳಿಗೆ ಪಟ್ಟಣದ ವಾತಾವರಣಕ್ಕೆ ಹೊಂದಿಕೊಂಡಿದ್ದು ಹಳ್ಳಿ ವಾತಾವರಣವನ್ನೇ ಮರೆಯುತ್ತಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು. ವಾತಾವರಣ, ಶುಚಿತ್ವ, ಶಿಕ್ಷಣ ಸೇರಿದಂತೆ ಅನೇಕ ವಿಷಯ ಕಲಿಯುವುದರ ಜತೆಗೆ ನಿತ್ಯ ಸ್ವಚ್ಛತಾ ಕಾರ್ಯ ಮಾಡುವುದರಿಂದ ವಿದ್ಯಾರ್ಥಿಗಳು ದೈಹಿಕ, ಮಾನಸಿಕವಾಗಿ ಆರೋಗ್ಯವಂತರಾಗಿರುತ್ತಾರೆ ಎಂದರು. ಚಿಕ್ಕಬಳ್ಳಾಪುರ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಡಾ.ಕೊಡಿರಂಗಪ್ಪ ಮಾತನಾಡಿ, ಶಿಬಿರದಲ್ಲಿ ಭಾಗವಹಿಸಿರುವ ಪ್ರತಿಕ್ಷಣಾರ್ಥಿಗಳೇ ಮುಂದೆ ಶಿಕ್ಷಕರಾಗಲಿದ್ದಾರೆ. ಹಳ್ಳಿಯ ಜೀವನ ಶೈಲಿ ಕುರಿತು ತಿಳಿದುಕೊಳ್ಳುವುದರಿಂದ ಮುಂದೆ ಮಕ್ಕಳಿಗೆ ಮೌಲ್ಯಯುತ ಶಿಕ್ಷಣ ನೀಡಲು ಸಾಧ್ಯವಾಗಲಿದೆ ಎಂದರು.

ಕೋರ್ಟ್ ಅನುಮತಿ ಪಡೆದು ಕೈದಿಗಳಿರುವ ಹಿಂಡಲಗಾ ಜೈಲಿಗೆ ನಟ ದರ್ಶನ್ ಶಿಫ್ಟ್

• ಉದಯವಾಹಿನಿ ಬೆಂಗಳೂರು

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲುಪಾಲಾಗಿರುವ ದರ್ಶನ್‌ಗೆ ಪರಪ್ಪನ ಅಗ್ರಹಾರ ಜೈಲಿನಲ್ಲಿ ರಾಜಾತಿಥ್ಯ ನೀಡುತ್ತಿರುವ ಆರೋಪದ ಬೆನ್ನಲ್ಲೆ ದರ್ಶನ್ ಸೇರಿದಂತೆ ಹಲವರನ್ನು ಹಿಂಡಲಗಾ ಜೈಲಿಗೆ ಶಿಫ್ಟ್ ಮಾಡಲು ಜೈಲು ಅಧಿಕಾರಿಗಳು ಸಿದ್ಧತೆ ನಡೆಸಿದ್ದಾರೆ. ದರ್ಶನ್‌ರನ್ನು ಬೆಳಗಾವಿಯ ಹಿಂಡಲಗಾ ಜೈಲಿಗೆ ಶಿಫ್ಟ್ ಮಾಡುವ ಕುರಿತಂತೆ ಈಗಾಗಲೇ ಜೈಲು ಅಧಿಕಾರಿಗಳು ಸಿದ್ಧತೆ ನಡೆಸಿದ್ದು, ಕೋರ್ಟ್ ಅನುಮತಿಗಾಗಿ ಕಾಯುತ್ತಿದ್ದಾರೆ.

ಕೋರ್ಟ್ ಅನುಮತಿ ಕೊಟ್ಟರೆ ಡಿ ಗ್ಯಾಂಗ್ ಬೆಳಗಾವಿಯ ಹಿಂಡಲಗಾ ಜೈಲಿಗೆ ಶಿಫ್ಟ್ ಆಗಲಿದೆ. ನಟ ದರ್ಶನ್ ಸೇರಿ ಹಲವರನ್ನು ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಿಂದ ಬೆಳಗಾವಿಯ ಹಿಂಡಲಗಾ ಜೈಲಿಗೆ ಶಿಫ್ಟ್ ಮಾಡುವ ಸಂಬಂಧ ಅಧಿಕೃತ ಆದೇಶಕ್ಕೆ ಜೈಲು ಅಧಿಕಾರಿಗಳು ಕಾಯುತ್ತಿದ್ದಾರೆ. ಈಗಾಗಲೇ ಹಿಂಡಲಗಾ ಜೈಲಿನಲ್ಲಿ ಅಂದೇರಿ ಸೆಲ್ ಗುರುತಿಸಿದ್ದಾರೆ ಎಂದು ಹೇಳಲಾಗಿದೆ. ನಟೋರಿಯಸ್ ಕೈದಿಗಳನ್ನು ಇಡಲು 36 ಕತ್ತಲು ಕೋಣೆಯ ವ್ಯವಸ್ಥೆ ಬೆಳಗಾವಿ ಜೈಲಿನಲ್ಲಿದೆ. ಅದರಲ್ಲಿ 15 ಕೋಣೆಗಳು ಖಾಲಿ ಇದೆ. ಹೀಗಾಗಿ ಬೆಳಗಾವಿ ಹಿಂಡಲಗಾ ಜೈಲಿನ ಬಂದೋಬಸ್ತ್ ವ್ಯವಸ್ಥೆ ಕುರಿತು ಹಿರಿಯ ಅಧಿಕಾರಿಗಳು ಮಾಹಿತಿ ಸಂಗ್ರಹಿಸಿದ್ದಾರೆ.

ರಾಜ್ಯಪಾಲರ ವಿರುದ್ಧ ಶೋಷಿತರ ಬೃಹತ್ ಪ್ರತಿಭಟನೆ

■ ಪ್ರಜಾಪ್ರಭುತ್ವದ ರಕ್ಷಣೆಗಾಗಿ ರಾಜಭವನ ಚಲೋ ಪ್ರತಿಭಟನೆ ■ ಸಿದ್ದರಾಮಯ್ಯನವರ ಮೇಲೆ ಪ್ರಾಸಿಕ್ಯೂಷನ್‌ಗೆ ಅನುಮತಿ

• ಉದಯವಾಹಿನಿ ಬೆಂಗಳೂರು

ಸ್ವಾತಂತ್ರ್ಯ ಉದ್ಯಾನವನ ಅವರಣದಲ್ಲಿ ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟ ಮತ್ತು ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟಗಳ ಸಂಘಟನೆಯಿಂದ ಮುಖ್ಯಮಂತ್ರಿಯವರಾದ ಸಿದ್ದರಾಮಯ್ಯ ಅವರ ತೇಜೋವಧೆ ಖಂಡಿಸಿ, ರಾಜ್ಯ ಕಾಂಗ್ರೇಸ್ ಸರ್ಕಾರವನ್ನು ಅಸ್ಥಿರಗೊಳಿಸುತ್ತಿರುವ ಬಿಜೆಪಿ – ಜೆಡಿಎಸ್ ಕುತಂತ್ರಗಳನ್ನು ವಿರೋಧಿಸಿ, ಪ್ರಜಾಪ್ರಭುತ್ವದ ರಕ್ಷಣೆಗಾಗಿ ರಾಜಭವನ ಚಲೋ ಪ್ರತಿಭಟನೆ

ಒಕ್ಕೂಟ ಅಧ್ಯಕ್ಷರಾದ ರಾಮಚಂದ್ರ, ರಾಮ್ ಮನೋಹರ್ ಲೋಹಿಯ ವಿಚಾರ ವೇದಿಕೆ ರಾಜ್ಯಾಧ್ಯಕ್ಷರಾದ ಬಿ.ಎಸ್. ಶಿವಣ್ಣ, ದಲಿತ ಸಂಘರ್ಷ ಸಮಿತಿ ಅಧ್ಯಕ್ಷರಾದ ಮಾವಳ್ಳಿ ಶಂಕರ್, ವಿಧಾನಪರಿಷತ್ ಸದಸ್ಯರಾದ ನಾಗರಾಜ್ ಯಾದವ್, ಮಾಜಿ ಮಹಾಪೌರರಾದ ಜೆ.ಹುಚ್ಚಪ್ಪ, ಮಂಜುನಾಥ್ ರೆಡ್ಡಿ, ಮಾಜಿ ಉಪಮಹಾಪೌರರಾದ ಎಲ್. ಶ್ರೀನಿವಾಸ್, ಮಾಜಿ ಆಡಳಿತ ಪಕ್ಷದ ನಾಯಕರುಗಳಾದ ಎಮ್.ಶಿವರಾಜು, ಉದಯಶಂಕರ್, ಸತ್ಯನಾರಾಯಣ್, ಜಯನಗರ ವಿಧಾನಸಭಾ ಕ್ಷೇತ್ರದ ಗ್ಯಾರೆಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಎನ್.ನಾಗರಾಜು, ನಿಕಟಪೂರ್ವ ಬಿಬಿಎಂಪಿ ಸದಸ್ಯರಾದ ಜಿ.ಕೃಷ್ಣಮೂರ್ತಿ, ಶಾಂತಿನಗರ ಬ್ಲಾಕ್ ಕಾಂಗ್ರೇಸ್ ಸಮಿತಿ ಅಧ್ಯಕ್ಷರಾದ ಶಿವಕುಮಾರ್, ರಾಜಾಜಿನಗರ ಬ್ಲಾಕ್ ಕಾಂಗ್ರೇಸ್ ಸಮಿತಿ ಅಧ್ಯಕ್ಷರಾದ ಎನ್.ವೆಂಕಟೇಶ್, ರಾಜಾಜಿನಗರ ವಿಧಾನ ಸಭಾ ಬ್ಲಾಕ್ ಕಾಂಗ್ರೇಸ್ ಸಮಿತಿ ಅಧ್ಯಕ್ಷರಾದ ರಾಧಕೃಷ್ಣ, ರವರು, ಸಂಗೊಳ್ಳಿ ರಾಯಣ್ಣ ಅಭಿಮಾನಿಗಳ ಬಳಗ ಅಧ್ಯಕ್ಷರಾದ ಮಂಜುನಾಥ್ ವಿ.ರಾಮಮೂರ್ತಿರವರು ರವರು ರಾಜ್ಯಾದ್ಯಂತ ಸಿದ್ದರಾಮಯ್ಯರವರ ಅಭಿಮಾನಿಗಳು ಕಾಂಗ್ರೇಸ್ ಪಕ್ಷದ ಮುಖಂಡರುಗಳು ಭಾಗವಹಿಸಿದ್ದರು ರಾಜ್ಯಪಾಲರು ಬಿಜೆಪಿ-ಜೆಡಿಎಸ್ ಪಕ್ಷಗಳ ತಾಳಕ್ಕೆ ಕುಣಿಯುತ್ತಿರುವುದಷ್ಟೆ ಅಲ್ಲ ತೀವ್ರ

ಉದಯವಾಹಿನಿ ಚಿತ್ರ

ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಲ್ಲೋಟ್ ಅವರು ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯನವರ ಮೇಲೆ ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಡುವಾಗ ಸಂವಿಧಾನದ ಮೂಲ ತತ್ವಗಳನ್ನು ಹಾಗೂ ಪ್ರಜಾಪ್ರಭುತ್ವದ ಆಶಯಗಳನ್ನು ಸಂಪೂರ್ಣವಾಗಿ ಗಾಳಿಗೆ ತೂರಿದ್ದಾರೆ. ರಾಜಭವನವನ್ನು ಕೋಮುವಾದಿ ರಾಜಕಾರಣ ಮಾಡುತ್ತಿರುವ ಬಿಜೆಪಿ ಮತ್ತು ಪ್ಯೂಡಲ್ ವಾದಿ ರಾಜಕಾರಣ ಮಾಡುತ್ತಿರುವ ಜೆಡಿಎಸ್ ಪಕ್ಷಗಳ ಕಛೇರಿಯನ್ನಾಗಿ ಪರಿವರ್ತಿಸಿಕೊಂಡಿದ್ದಾರೆ.

ಪಕ್ಷಪಾತಿ ಧೋರಣೆಯನ್ನು ತಾಳಿದ್ದಾರೆ. ಜನರಿಂದ ಆಯ್ಕೆಯಾದ ಸರ್ಕಾರದ ಮುಖ್ಯಸ್ಥರಾಗಿರುವ ಮುಖ್ಯಮಂತ್ರಿಗಳ ವಿರುದ್ಧ ನಡೆಯುತ್ತಿರುವ ಪಿತೂರಿ-ಪಡ್ಯಂತ್ರಗಳ ಭಾಗವಾಗಿದ್ದಾರೆ. ಆ ಮೂಲಕ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ರಚಿಸಿರುವ ಸಂವಿಧಾನವನ್ನು ದುಷ್ಟರು, ಭ್ರಷ್ಟರೂ ಆದ ಬಿಜೆಪಿ-ಜೆಡಿಎಸ್ ಪಕ್ಷಗಳ ಹಿತಾಸಕ್ತಿಗೆ ಅಡ ಇಟ್ಟಿದ್ದಾರೆ. ಕರ್ನಾಟಕ ಲೋಕಾಯುಕ್ತ, ಎಸ್‌ಐಟಿ ಮುಂತಾದ ತನಿಖಾ ಸಂಸ್ಥೆಗಳು ಪ್ರಾಥಮಿಕ ತನಿಖೆಯಲ್ಲಿ ತಪ್ಪಿತಸ್ಥರು ಎಂದು ಸಾಬೀತಾದ ಪ್ರಮುಖ ಕುಮಾರಸ್ವಾಮಿಯವರ ಗಣಿ ಹಗರಣ, ಶಶಿಕಲಾ ಜೊಲ್ಲೆಯವರ ಮೊಟ್ಟೆ ಹಗರಣ, ಜನಾರ್ಧನ ರೆಡ್ಡಿಯವರ ಆದಾಯಕ್ಕೂ ಮಿತಿ ಮೀರಿದ ಆಸ್ತಿ

ರಾಜ್ಯದ ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯನವರು ಮುಡಾ ವಿಚಾರದಲ್ಲಿ ಒಂದು ಸೂಜಿ ಮೊನೆಯಷ್ಟೂ ತಪ್ಪು ಮಾಡಿಲ್ಲವೆಂದು ಇಡೀ ರಾಜ್ಯದ ಜನರು ಹೇಳುತ್ತಿದ್ದಾರೆ ಹಾಗೂ ಸರ್ಕಾರಿ ದಾಖಲೆ ಹೇಳುತ್ತಿದೆ.

ರಾಜಭವನ ಚಲೋ ಪ್ರತಿಭಟನೆ

ಗಳಿಕೆ, ನಿರಾಣಿಯವರ ಭ್ರಷ್ಟಾಚಾರಗಳ ಕುರಿತು ಪ್ರಾಸಿಕ್ಯೂಷನ್ ಗೆ ಅನುಮತಿ ಕೊಡಿ ಎಂದು ರಾಜಭವನಕ್ಕೆ ಕೋರಿಕೆ ಸಲ್ಲಿಸಿ ವರ್ಷಗಳಾದರೂ ರಾಜ್ಯಪಾಲರು ಕೋರಿಕೆಗಳನ್ನು ಕಸದ ಬುಟ್ಟಿಗೆ ಎಸೆದು ಪಕ್ಷಪಾತ ಮಾಡಿದ್ದಾರೆ. ಇದುವರೆಗೆ ಒಬ್ಬರ ಮೇಲೂ ವಿಚಾರಣೆಗೆ ಅನುಮತಿ ನೀಡಿಲ್ಲ. ಆದರೆ ಬ್ಲಾಕ್ ಮೇಲರುಗಳು, ಕ್ರಿಮಿನಲ್ ಕೇಸುಗಳು ಬಾಕಿ ಇರುವ ಆರೋಪಿಗಳು ಕೊಟ್ಟ ದೂರು-ಅರ್ಜಿಗಳನ್ನು ಸರಿಯಾಗಿ ಪರಿಶೀಲನೆ ಕೂಡ ಮಾಡದೆ ದೂರರ್ಜಿ ಸ್ವೀಕರಿಸಿದ ದಿನವೇ ಕೆಲವೇ ಗಂಟೆಗಳಲ್ಲಿ ಮಾನ್ಯ ಮುಖ್ಯಮಂತ್ರಿಗಳಿಗೆ ಕಾರಣ ಕೇಳುವ ನೋಟೀಸು ನೀಡಿರುತ್ತಾರೆ. ದೂರದಾರರ ಅರ್ಜಿ ಬರೀ ಸುಳ್ಳುಗಳಿಂದ ಕೂಡಿದೆ. ರಾಜ್ಯಪಾಲರು ನೀಡಿರುವ ನೋಟಿಸ್ ದೋಷಪೂರಿತ ಎಂದು ಇಡೀ ಸಚಿವ ಸಂಪುಟ ಚರ್ಚೆ ಮಾಡಿ ನೋಟೀಸನ್ನು ಕೂಡಲೆ ಹಿಂಪಡೆಯುವಂತೆ ನಿರ್ಣಯ ಮಾಡಿ ರಾಜಭವನಕ್ಕೆ ಕಳುಹಿಸಿ ಕೊಟ್ಟಿದ್ದಾರೆ. ಮಾನ್ಯ ಮುಖ್ಯಮಂತ್ರಿಗಳು ಸಹ ದೀರ್ಘವಾದ ಪ್ರತಿಕ್ರಿಯೆಯನ್ನು ಕಳುಹಿಸಿ ಕೊಟ್ಟಿದ್ದಾರೆ. ಇದ್ಯಾವುದನ್ನೂ ಪರಿಗಣಿಸದ ಈ ರಾಜ್ಯಪಾಲರು ಮಾನ್ಯ ಮುಖ್ಯಮಂತ್ರಿ ಶ್ರೀಯುತ ಶ್ರೀ ಸಿದ್ದರಾಮಯ್ಯನವರಿಗೆ ಕಿರುಕುಳ ನೀಡಬೇಕೆಂದು ತೀರ್ಮಾನಿಸಿದ್ದಾರೆ. ಆದರೆ ರಾಜಕೀಯ ದುರುದ್ದೇಶದಿಂದ ಬಿಜೆಪಿ-ಜೆಡಿಎಸ್‌ಗಳು ಮಾನ್ಯ ಶ್ರೀ ಸಿದ್ದರಾಮಯ್ಯನವರನ್ನು ತೇಜೋವಧೆ ಮಾಡುತ್ತಲೇ ಹೊರಟಿದ್ದಾರೆ. ಇತ್ತೀಚೆಗೆ ಪ್ರಕರಣದ ವಿಚಾರಣೆ ಯಾಗಿ ಉಚ್ಚ ನ್ಯಾಯಾಲಯದ ಗೌರವಾನ್ವಿತ ನ್ಯಾಯಾಧೀಶರು, ಮುಖ್ಯಮಂತ್ರಿಗಳು ತಪ್ಪು ಮಾಡಿದ್ದಾರಾ? ಯಾವುದಾದರೂ ದಾಖಲೆಗಳು ಇವೆಯಾ ಎಂದು ಕೇಳಿದಾಗ ವಿರೋಧಿಗಳ ಬಳಿ ಉತ್ತರವೇ ಇರಲಿಲ್ಲ. ಉಚ್ಚನ್ಯಾಯಾಲಯವು ನೀಡಿರುವ ಮಧ್ಯಂತರ ತೀರ್ಪಿನಲ್ಲಿ ರಾಜ್ಯಪಾಲರು ನೀಡಿರುವ ಪ್ರಾಸಿಕ್ಯೂಷನ್‌ಗೆ ಅನುಮತಿಯು "Impugned sanction"ಎಂದು ನಮೂದಿಸಲಾಗಿದೆ. ಅಷ್ಟರ ಮಟ್ಟಿಗೆ ರಾಜ್ಯಪಾಲರಿಗೆ ಮುಖಭಂಗವಾಗಿದೆ ಅಲ್ಲವೇ ಬಿಜೆಪಿ-ಜೆಡಿಎಸ್ ಮತ್ತು ಕೋಮುವಾದಿ, ಜಾತಿವಾದಿ ದುಷ್ಟರೆಲ್ಲಾ ಸೇರಿಕೊಂಡು ಶೋಷಿತ ಸಮುದಾಯಗಳ ಚೈತನ್ಯವನ್ನು ತುಳಿದು ಹಾಕಬೇಕೆಂದು ನಿರ್ಧಾರ ಮಾಡಿವೆ. ಇವರು ಬಡವರ ಪರ ಗ್ಯಾರಂಟಿ ಯೋಜನೆಗಳ ವಿರುದ್ಧ ಇದ್ದಾರೆ. ಆಪರೇಷನ್ ಕಮಲ ಮಾಡಲು ಪ್ರಯತ್ನಿಸಿ ಸೋತು ಹಿಂಬಾಗಿಲ ಮೂಲಕ ಸರ್ಕಾರವನ್ನು ಉರುಳಿಸಲು ಪ್ರಯತ್ನಿಸುತ್ತಿದ್ದಾರೆ.

ಅದರ ಭಾಗವಾಗಿಯೆ ನಮ್ಮ ಮಾನ್ಯ ಮುಖ್ಯಮಂತ್ರಿಗಳ ಮೇಲೆ ದಾಳಿ ಪ್ರಾರಂಭಿಸಿದ್ದಾರೆ. ಕೇಂದ್ರ ಸರ್ಕಾರ ರಾಜಭವನವನ್ನು ದುರ್ಬಳಕೆ ಮಾಡಿ ಬಹುಮತದ ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸುವ ಕೆಲಸವನ್ನು ಈ ತಕ್ಷಣವೇ ನಿಲ್ಲಿಸಬೇಕು. ಸಂವಿಧಾನ ಮತ್ತು ಒಕ್ಕೂಟ ತತ್ವದ ವಿರೋಧಿಯಾದ ರಾಜ್ಯಪಾಲರನ್ನು ಮೋದಿ ಸರ್ಕಾರ ಕೂಡಲೆ ವಾಪಸ್ಸು ಕರೆಸಿಕೊಳ್ಳಬೇಕು. ಮಾನ್ಯ ಶ್ರೀ ಸಿದ್ದರಾಮಯ್ಯರವರ ಪ್ರಾಸಿಕ್ಯೂಷನ್ ಅನುಮತಿ ಹಿಂಪಡೆಯಬೇಕು, ಪ್ರಜಾಪ್ರಭುತ್ವ ಒಕ್ಕೂಟದ ವ್ಯವಸ್ಥೆ ಮತ್ತು ರಾಜ್ಯ ಸರ್ಕಾರದ ಸಾರ್ವಭೌಮತೆಯನ್ನು ಸಂರಕ್ಷಿಸಬೇಕು. ಕನ್ನಡ ನಾಡಿನ ಘನತೆಯನ್ನು ಕಾಪಾಡಬೇಕೆಂದು ಆಗ್ರಹಿಸಿ ಸಂವಿಧಾನ, ಸಾಮಾಜಿಕ ನ್ಯಾಯ, ಸಹಬಾಳ್ವೆ, ಸ್ವಾಭಿಮಾನದ ಸಂರಕ್ಷಣೆಗಾಗಿ ಹೋರಾಟ.

ನಮ್ಮ

ಕಟ್ಟಕಡೆ ಗ್ರಾಮದಲ್ಲಿ ಸೌಲಭ್ಯ ಮರೀಚಿಕೆ: ನೀರಿಗಾಗಿ 6 ಕಿಮೀ ಅಲೆದಾಟ

ಚರಂಡಿ ವ್ಯವಸ್ಥೆ, ಅಂಗನವಾಡಿ, ವಸತಿ ಸಮಸ್ಯೆ ಸೇರಿದಂತೆ ಇನ್ನಿತರ ಸಮಸ್ಯೆಗಳು ಜನರನ್ನು ಪ್ರತಿನಿತ್ಯವೂ ಬಾಧಿಸುತ್ತಿವೆ

• ಉದಯವಾಹಿನಿ ಮುಳಬಾಗಿಲು

ತಾಲ್ಲೂಕಿನ ಕಟ್ಟಕಡೆಯ ಹಾಗೂ ನೆರೆಯ ಆಂಧ್ರಪ್ರದೇಶಕ್ಕೆ ಹೊಂದಿಕೊಂಡಿರುವ ಎನ್.ಯಲುವಹಳ್ಳಿ ಗ್ರಾಮದಲ್ಲಿ ಕುಡಿಯುವ ನೀರು, ಸಿ.ಸಿ. ರಸ್ತೆಗಳು ಸೇರಿದಂತೆ ಇನ್ನಿತರ ಮೂಲ ಸೌಕರ್ಯಗಳು ಮರೀಚಿಕೆಯಾಗಿವೆ. ಇದರಿಂದಾಗಿ ಇಲ್ಲಿನ ನಿವಾಸಿಗಳು ಪ್ರತಿನಿತ್ಯವೂ ಪರದಾಡುವಂತಾಗಿದೆ.

ನಂಗಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎನ್.ಯಲುವಹಳ್ಳಿ ಗ್ರಾಮವು ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಂತೆ ಇದೆ. ಆದಾಗ್ಯೂ, ಗ್ರಾಮದಲ್ಲಿ ಕುಡಿಯುವ ನೀರು, ಸಿ.ಸಿ ರಸ್ತೆಗಳು, ಚರಂಡಿ ವ್ಯವಸ್ಥೆ, ಅಂಗನವಾಡಿ, ವಸತಿ ಸಮಸ್ಯೆ ಸೇರಿದಂತೆ ಇನ್ನಿತರ ಸಮಸ್ಯೆಗಳು ಜನರನ್ನು ಪ್ರತಿನಿತ್ಯವೂ ಬಾಧಿಸುತ್ತಿವೆ.

ಹತ್ತಾರು ವರ್ಷಗಳಿಂದ ಇಲ್ಲಿನ ರಸ್ತೆಗಳಿಗೆ ಡಾಂಬರೀಕರಣ ಅಥವಾ ಕಾಂಕ್ರೀಟ್ ಹಾಕದ ಕಾರಣಕ್ಕೆ ರಸ್ತೆಗಳು ಬೇಸಿಗೆಯಲ್ಲಿ ದೂಳಿನಿಂದ ಆವೃತವಾದರೆ, ಮಳೆಗಾಲದಲ್ಲಿ ಕೆಸರು ಗದ್ದೆಯಂತಾಗುತ್ತವೆ ಎಂದು ಸ್ಥಳೀಯರು ಬೇಸರ ವ್ಯಕ್ತಪಡಿಸುತ್ತಾರೆ.

140 ಮನೆಗಳಿರುವ ಈ ಗ್ರಾಮದಲ್ಲಿ 600 ಮಂದಿ ವಾಸಿಸುತ್ತಿದ್ದಾರೆ. ಗ್ರಾಮದ ಮುಖ್ಯ ಬೀದಿ ಅರ್ಧದಷ್ಟು ಮಾತ್ರ ಚೆನ್ನಾಗಿದ್ದು, ಉಳಿದ ರಸ್ತೆಯು ಸಂಪೂರ್ಣವಾಗಿ ಹದಗೆಟ್ಟಿದೆ. ಜೊತೆಗೆ ಚರಂಡಿ ವ್ಯವಸ್ಥೆಯೂ ಇಲ್ಲ. ಇದರಿಂದ ಮಳೆಗಾದಲ್ಲಿ ಬೀದಿಯ ನೀರು ಮನೆಗಳಿಗೆ ನುಗ್ಗುತ್ತದೆ. ಕೆಲವೆಡೆ ಮೊಣಕಾಲು ಉದ್ದದವರೆಗೆ ನೀರು ನಿಂತಿರುತ್ತದೆ.

> ಗ್ರಾಮದಲ್ಲಿ ಈಚೆಗೆ ಚರಂಡಿಗಳನ್ನು ಸ್ವಚ್ಛಗೊಳಿಸಲಾಗಿದೆ. ಸ್ಮಶಾನಕ್ಕೆ ಸ್ಥಳ ಕಲ್ಪಿಸುವ ವಿಚಾರವು ಕಂದಾಯ ಇಲಾಖೆಗೆ ಸೇರಿದ್ದು, ಅಂಗನವಾಡಿ ಕಟ್ಟಡ ನಿರ್ಮಾಣ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ಸೇರಿದೆ. ನರೇಗಾದಲ್ಲಿ 1 ಕೋಟಿಗೆ ಕ್ರಿಯಾ ಯೋಜನೆ ಆದರೆ ಸಿ.ಸಿ ರಸ್ತೆಗಳ ನಿರ್ಮಾಣಕ್ಕೆ ಕೇವಲ ಶೇ 10 ಮಿಸಲಿಡಲಾಗುತ್ತದೆ. ಹೀಗಾಗಿ ಸಿಸಿ ರಸ್ತೆಗಳೆಲ್ಲವನ್ನೂ ನಿರ್ಮಿಸಲಾಗದು
– ಚಿಕ್ಕ ನರಸಿಂಹಯ್ಯ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ

ಇದರ ಪರಿಣಾಮ ಯಾವುದು ರಸ್ತೆ ಅಥವಾ ಯಾವುದು ಗುಂಡಿ ಎಂಬುದು ತಿಳಿಯದಂತಾಗುತ್ತದೆ ಎಂದು ಗ್ರಾಮಸ್ಥರು ತಿಳಿಸಿದರು. ಗ್ರಾಮದಲ್ಲಿರುವ ಚರಂಡಿಯಲ್ಲಿ ತ್ಯಾಜ್ಯ ತುಂಬಿದ್ದು, ಮಲಿನವಾದ ನೀರು ಚರಂಡಿಯಲ್ಲಿ ಸರಾಗವಾಗಿ ಹರಿಯದೆ ನಿಂತುಕೊಂಡಿದೆ. ಇದರಿಂದ ಚರಂಡಿಯು ದುರ್ನಾತ ಬೀರುತ್ತಿದ್ದು, ಜನರು ಮೂಗು ಮುಚ್ಚಿಕೊಂಡೇ ತಿರುಗಾಡುವ ಅನಿವಾರ್ಯತೆ ಎದುರಾಗಿದೆ.

ಉದಯವಾಹಿನಿ ಚಿತ್ರ

ನೀರಿಗಾಗಿ 6 ಕಿ. ಮೀ ಅಲೆದಾಟ

ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕವಿಲ್ಲ. ಹೀಗಾಗಿ ಶುದ್ಧ ಕುಡಿಯುವ ನೀರಿನ ಘಟಕ ಇರುವ 6 ಕಿ.ಮೀ ಹೋಗಿ ಬರಬೇಕಿದ್ದು, 5 ಕ್ಯಾನಿನ ನೀರಿಗಾಗಿ 50 ಪೆಟ್ರೋಲ್ ವ್ಯಯಿಸಬೇಕಾಗಿದೆ. ಇನ್ನು ದ್ವಿಚಕ್ರ ವಾಹನ ಇಲ್ಲದವರು ಕೊಳವೆ ಬಾವಿಯ ನೀರನ್ನೇ ಅವಲಂಬಿಸಿದ್ದು, ಸಾಂಕ್ರಾಮಿಕ ರೋಗಕ್ಕೆ ತುತ್ತಾಗುವ ಆತಂಕ ಎದುರಿಸುತ್ತಿದ್ದಾರೆ.

ಜೊತೆಗೆ ಸೊಳ್ಳೆಗಳ ಕಾಟ ಹೆಚ್ಚಾಗಿದ್ದು, ಮಲೇರಿಯಾ ಮತ್ತು ಸಾಂಕ್ರಾಮಿಕ ರೋಗಗಳು ವ್ಯಾಪಿಸುವ ಆತಂಕದಲ್ಲಿದ್ದಾರೆ ಗ್ರಾಮಸ್ಥರು ಹೀಗೆಂದು ಗ್ರಾಮಸ್ಥ ವೆಂಕಟಮುನಿ ರೆಡ್ಡಿ ತಿಳಿಸಿದರು.

ಬಾಡಿಗೆ ಕಟ್ಟಡದಲ್ಲಿ ಅಂಗನವಾಡಿ ಕೇಂದ್ರ: ಗ್ರಾಮದಲ್ಲಿ ಹಳೆಯ ಅಂಗನವಾಡಿ ಕಟ್ಟಡ ಇದೆ. ಅದರ ಗೋಡೆಗಳು ಬಿರುಕು ಬಿಟ್ಟುಕೊಂಡಿದ್ದು, ಚಪ್ಪಡಿ ಕಲ್ಲುಗಳ ಚಾವಣಿ ಬೀಳುವ ಸ್ಥಿತಿಯಲ್ಲಿ ಇದೆ. ಕಟ್ಟಡದ ಮೇಲೆ ಗಿಡಗಂಟಿಗಳು ಬೆಳೆದಿದ್ದು, ಚಪ್ಪಡಿಗಳ ಬಿರುಕುಗಳಲ್ಲಿ ಬೇರುಗಳು ಹರಡಿಕೊಂಡಿವೆ. ಈ ವಿಚಾರವಾಗಿ ಅನೇಕ ಬಾರಿ ಪಂಚಾಯಿತಿ, ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ಅರ್ಜಿ ನೀಡಿದ್ದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಗ್ರಾಮದ ಕೆಲವು ಮಹಿಳೆಯರು ದೂರಿದರು.

> ಗ್ರಾಮದಲ್ಲಿ ಕುಡಿಯುವ ನೀರಿನ ಶುದ್ಧ ಘಟಕ, ಸುಸಜ್ಜಿತ ಸಿ.ಸಿ ರಸ್ತೆಗಳು, ಹೆದ್ದಾರಿಯಿಂದ ಡಾಂಬರೀಕರಣ ಅಥವಾ ಸಿಮೆಂಟ್ ರಸ್ತೆ, ಸ್ಮಶಾನ, ಅಂಗನವಾಡಿ ಸೇರಿದಂತೆ ಇನ್ನಿತರ ಸೌಕರ್ಯಗಳೇ ಇಲ್ಲ. ಈ ಎಲ್ಲಾ ಸಮಸ್ಯೆಗಳಿಂದಾಗಿ ಜನರು ಪ್ರತಿನಿತ್ಯವು ಹೈರಾಣಾಗುತ್ತಿದ್ದಾರೆ. ಈ ಕುರಿತು ಅನೇಕ ಬಾರಿ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಹಾಗೂ ಪಂಚಾಯಿತಿ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದೇವೆ. ಆದರೆ, ಯಾವುದೇ ಪ್ರಯೋಜನವಾಗಿಲ್ಲ. ಇನ್ನಾದರೂ ಸಂಬಂಧಿಸಿದ ಅಧಿಕಾರಿಗಳು ಎಚ್ಚೆತ್ತುಕೊಂಡು ಮೂಲ ಸೌಕರ್ಯಗಳನ್ನು ಒದಗಿಸಬೇಕಿದೆ –ಜೆ.ಎಂ.ಆರ್.ಹರಿನಾಥ ರೆಡ್ಡಿ, ಗ್ರಾ.ಪಂ ಸದಸ್ಯ

ಮೂಲ ಸೌಕರ್ಯ ಮರೀಚಿಕೆ

ಶಿಥಿಲಾವಸ್ಥೆಯ ಹೆಂಚಿನ ಮನೆಗಳಲ್ಲೇ ಕೆಲವರ ವಾಸ: ಗ್ರಾಮದಲ್ಲಿ ವಸತಿ ಸಮಸ್ಯೆ ಇದ್ದು, ಆರು ಕುಟುಂಬಗಳು ಬಿಳುವ ಸ್ಥಿತಿಯಲ್ಲಿರುವ ಹೆಂಚಿನ ಮನೆಗಳಲ್ಲಿ ವಾಸಿಸುತ್ತಿದ್ದಾರೆ. ಇದರಿಂದ ಗ್ರಾಮಕ್ಕೆ ಸರ್ಕಾರ ಅಥವಾ ಪಂಚಾಯಿತಿ ಕನಿಷ್ಠ ಮನೆಗಳನ್ನು ಮಂಜೂರು ಮಾಡಿ ಎಲ್ಲಾರಿಗೂ ವಸತಿ ಸೌಕರ್ಯ ಕಲ್ಪಿಸಬೇಕು ಎಂದು ಹೆಂಚಿನ ಮನೆಗಳ ವಾಸಿಗಳು ಆಗ್ರಹಿಸಿದರು.

ಗ್ರಾಮಕ್ಕಿಲ್ಲ ಸ್ಮಶಾನ: ಕೆರೆಯೇ ಸ್ಮಶಾನ: ಗ್ರಾಮಕ್ಕೆ ಕಾಯಂ ಸ್ಮಶಾನ ಜಾಗವಿಲ್ಲ. ಹೀಗಾಗಿ ಗ್ರಾಮದ ಕೆರೆಯಲ್ಲೇ ಸತ್ತವರನ್ನು ಸಮಾಧಿ ಮಾಡಲಾಗುತ್ತಿದೆ. ಈ ಕುರಿತು ಸುಮಾರು ವರ್ಷಗಳಿಂದ ಅಧಿಕಾರಿಗಳಿಗೆ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ. ಆದರೆ, ಮಳೆಬಂದು ಕೆರೆ ತುಂಬಿದರೆ, ಸತ್ತವರನ್ನು ಅವರ ಜಮೀನಿನಲ್ಲೇ ಅಂತ್ಯ ಸಂಸ್ಕಾರ ಮಾಡಲಾಗುತ್ತದೆ. ಹಾಗಾದರೆ, ಜಮೀನು ಹೊಂದಿಲ್ಲದವರ ಸ್ಥಿತಿಯೇನು ಎಂಬುದು ಗ್ರಾಮಸ್ಥರ ವಾದ.

74 ವಿದ್ಯಾರ್ಥಿಗಳಿಗೆ ಸುಜ್ಞಾನ ನಿಧಿ ಶಿಷ್ಯ ವೇತನ ಮಂಜೂರಾತಿ ಪತ್ರ ವಿತರಣೆ

• ಉದಯವಾಹಿನಿ, ಶಿಡ್ಲಘಟ್ಟ

ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆಯು ಮಹಿಳೆಯರಿಗೆ, ಶಾಲಾ ವಿದ್ಯಾರ್ಥಿಗಳಿಗೆ, ಮಂದಿರ ಮತ್ತು ಕೆರೆಗಳ ಅಭಿವೃದ್ಧಿ ಕಾರ್ಯಗಳಿಗೆ ಆರ್ಥಿಕ ನೆರವು ನೀಡುವ ಕಾರ್ಯ ಶ್ಲಾಘನೀಯವಾಗಿದೆ ಎಂದು ದಲಿತ ಸಂಘರ್ಷ ಸೇನೆಯ ಜಿಲ್ಲಾ ಕಾರ್ಯದರ್ಶಿ ನಾಗನರಸಿಂಹ ಹೇಳಿದರು.

ನಗರದ ಕಾಳಿಕಾಂಬ ಸಭಾಂಗಣದಲ್ಲಿ ಮಂಗಳವಾರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ಆಶ್ರಯದಲ್ಲಿ ನಡೆದ ಸುಜ್ಞಾನ ನಿಧಿ ಶಿಷ್ಯವೇತನ ಮಂಜೂರಾತಿ ಪತ್ರ ವಿತರಣೆ ಸಮಾರಂಭಕ್ಕೆ ಚಾಲನೆ ನೀಡಿ ಮಾತನಾಡಿದರು. ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಪ್ರಶಾಂತ್ ಸಿ ಎಸ್ ಧರ್ಮಸ್ಥಳ ಗ್ರಾಮಾಭಿವೃದ್ಧಿಯೋಜನೆ ಸ್ಥಾಪನೆಯಾಗಿ 25 ವರ್ಷ ಪೂರ್ಣಗೊಳಿಸಿದ ಬೆಳ್ಳಿಹಬ್ಬದ ಸವಿನೆನಪಿಗಾಗಿ ಪೂಜ್ಯ ಡಾ. ಡಿ ವೀರೇಂದ್ರ ಕಡೆಯವರು ಈ ಸುಜ್ಞಾನಿಧಿ ಶಿಷ್ಯವೇತನ ಕಾರ್ಯಕ್ರಮವನ್ನು ಪ್ರಾರಂಭ ಮಾಡಿದರು. ಸಮಾಜದ ಎಲ್ಲಾ ವರ್ಗದ ಕುಟುಂಬಗಳ ಮಕ್ಕಳು ಉನ್ನತ ಶಿಕ್ಷಣವನ್ನು ಪಡೆಯುವ ಮೂಲಕ ಸಮಾಜದಲ್ಲಿ ಸೇವೆ ಸಲ್ಲಿಸುವಂಥಾಗಲಿ ಎಂಬ ಉದ್ದೇಶದೊಂದಿಗೆ ಪೂಜ್ಯರು

ಉದಯವಾಹಿನಿ ಚಿತ್ರ

ಈ ಕಾರ್ಯಕ್ರಮವನ್ನು ಆರಂಭ ಮಾಡಿದ್ದಾರೆ ಎಂದು ತಿಳಿಸಿದರು. ರಾಜ್ಯಾದ್ಯಂತ ಇದುವರೆಗೂ ಒಟ್ಟು 96894 ವಿದ್ಯಾರ್ಥಿಗಳಿಗೆ ಒಟ್ಟು ರೂ.114 ಕೋಟಿ 50ಲಕ್ಷ ಗಳಷ್ಟು ಶಿಷ್ಯವೇತನ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಇದುವರೆಗೂ ಒಟ್ಟು 1193 ವಿದ್ಯಾರ್ಥಿಗಳಿಗೆ ಒಟ್ಟು 1ಕೋಟಿ 65ಲಕ್ಷ ರೂ. ಶಿಷ್ಯವೇತನ ಹಾಗೂ ಶಿಡ್ಲಘಟ್ಟ ತಾಲ್ಲೂಕಿನಲ್ಲಿ ಒಟ್ಟು 289 ವಿದ್ಯಾರ್ಥಿಗಳಿಗೆ ಒಟ್ಟು ರೂ. 47.38 ಲಕ್ಷ ಶಿಷ್ಯವೇತನ ಪಾವತಿಸಲಾಗಿದೆ, ಈ ಸುಜ್ಞಾನಿಧಿ ಶಿಷ್ಯವೇತನ ಮೊತ್ತವನ್ನು ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸಕ್ಕಾಗಿ ಮಾತ್ರ ಉಪಯೋಗಿಸಬೇಕೆಂದು ತಿಳಿಸಿದರು. ಅಲ್ಲದೆ ವಿದ್ಯಾಭ್ಯಾಸ ಮುಗಿಸಿ ಉನ್ನತ ಹುದ್ದೆಗೆ ಹೋಗಿ ತಮ್ಮ ತಂದೆ–ತಾಯಿಯರನ್ನು ಪೋಷಿಸಬೇಕೆಂದು ಕಿವಿ ಮಾತು ಹೇಳಿದರು.

ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯ ತ್ಯಾಗರಾಜ್ ಮಾತನಾಡಿ, ಧರ್ಮಸ್ಥಳ ಯೋಜನೆಯ ಇಂತಹ ಅನೇಕ ಸಮಾಜಮುಖಿ ಕಾರ್ಯಕ್ರಮಗಳು ಸಮಾಜದ ಎಲ್ಲಾ ವರ್ಗದ ಕುಟುಂಬಗಳಿಗೂ ತಲುಪುತ್ತಿರುವುದು ಶ್ಲಾಘನೀಯ ಎಂದರು. ಅಲ್ಲದೆ ಇಂತಹ ಕಾರ್ಯಕ್ರಮಗಳ ಸರಿಯಾದ ಉಪಯೋಗ ಪಡೆದುಕೊಂಡು ಆರ್ಥಿಕ ಸಾಮಾಜಿಕ ಶೈಕ್ಷಣಿಕ ಅಭಿವೃದ್ಧಿ ಹೊಂದುವಂತೆ ತಿಳಿಸಿದರು.

> ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮೂಲಕ ಪೂಜ್ಯರು ಬಡವರ ಮಕ್ಕಳು ಸಹ ಉನ್ನತ ಹುದ್ದೆ ಮಾಡಲು ಅನುಕೂಲ ಮಾಡಿಕೊಟ್ಟಿದ್ದಾರೆ, ಇದರಿಂದ ಎಷ್ಟೋ ಮಕ್ಕಳ ಹಾಗೂ ಪೋಷಕರ ಕನಸು ನನಸು ಮಾಡಿಕೊಳ್ಳಲು ಸಹಕಾರಿಯಾಗಿದೆ ಎಂದು ತಿಳಿಸಿ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು
–ನಾಗನರಸಿಂಹ, ದಲಿತ ಸಂಘರ್ಷ ಸೇನೆಯ ಜಿಲ್ಲಾ ಕಾರ್ಯದರ್ಶಿ

ಕಾರ್ಯಕ್ರಮದಲ್ಲಿ ತಾಲ್ಲೂಕಿನ ಯೋಜನಾಧಿಕಾರಿ ಸುರೇಶ್ ಗೌಡ, ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯ ಸುರೇಶ್, ವೆಂಕಟಸ್ವಾಮಿ ರೆಡ್ಡಿ, ವಿದ್ಯಾರ್ಥಿಗಳು ಹಾಗೂ ಪೋಷಕರು ಉಪಸ್ಥಿತರಿದ್ದರು.

ಕಾಂಗ್ರೆಸ್ ಶಾಸಕರಿಗೆ ಆಫರ್: ಬಿಜೆಪಿಯಿಂದ ದೂರು

• ಉದಯವಾಹಿನಿ, ಮಂಡ್ಯ

ಕಾಂಗ್ರೆಸ್ ಶಾಸಕರಿಗೆ ಪಕ್ಷ ಬಿಟ್ಟು ಬರಲು ಬಿಜೆಪಿಯ ಕೇಂದ್ರ ನಾಯಕರು 100 ಕೋಟಿ ಆಫರ್ ಮಾಡುತ್ತಿದ್ದಾರೆ ಎಂದು ಆಧಾರರಹಿತ ಮತ್ತು ದುರುದ್ದೇಶಪೂರ್ವಕ ಆರೋಪ ಮಾಡಿರುವ ಮಂಡ್ಯ ಶಾಸಕ ಪಿ.ರವಿಕುಮಾರ್ (ರವಿ ಗಣಿಗ) ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಬೇಕು' ಎಂದು ಬಿಜೆಪಿ ರಾಜ್ಯ ಘಟಕದ ವಕ್ತಾರ ಅಶ್ವತ್ಥನಾರಾಯಣ ಮತ್ತು ಜಿಲ್ಲಾ ಘಟಕದ ವಕ್ತಾರ ಸಿ.ಟಿ.ಮಂಜುನಾಥ್ ನೇತೃತ್ವದಲ್ಲಿ ಪಕ್ಷದ ಮುಖಂಡರು ಇಲ್ಲಿನ ಪಶ್ಚಿಮ ಪೊಲೀಸ್ ಠಾಣೆಗೆ ಸೋಮವಾರ ದೂರು ಸಲ್ಲಿಸಿದರು.

ಕಾಂಗ್ರೆಸ್ ಸರ್ಕಾರ ಪತನಗೊಳಿಸಲು ಆಪರೇಷನ್ ಕಮಲ ನಡೆಸುತ್ತಿದ್ದಾರೆ ಎಂದು ಬಿಜೆಪಿಯ ಕೇಂದ್ರ ನಾಯಕರ ವಿರುದ್ಧ ಸುಳ್ಳು ಹೇಳಿಕೆ ನೀಡಲಾಗಿದೆ. ಇದರಿಂದ ಬಿಜೆಪಿ ವರ್ಚಸ್ಸಿಗೆ ಧಕ್ಕೆಯಾಗುವ ಸಂಭವವಿದೆ. ನಾಯಕರ ವಿರುದ್ಧ ಕೆಟ್ಟ ಅಭಿಪ್ರಾಯ ಮೂಡಿಸಲು ಯತ್ನಿಸಿದ್ದಾರೆ. ಈ ಕಾರಣದಿಂದ ಶಾಸಕರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು' ಎಂದು ದೂರಿನಲ್ಲಿ ಒತ್ತಾಯಿಸಿದ್ದಾರೆ.

ಉದಯವಾಹಿನಿ ಚಿತ್ರ

ಬಿಜೆಪಿ ವರ್ಚಸ್ಸಿಗೆ ಧಕ್ಕೆ

ನನ್ನ ಬಳಿ ದಾಖಲೆಗಳಿವೆ: ಬಿಜೆಪಿಯವರು ನೀಡಿದ ದೂರಿನ ಬಗ್ಗೆ ಪ್ರತಿಕ್ರಿಯಿಸಿದ ಶಾಸಕ ರವಿಕುಮಾರ್, ಬಿಜೆಪಿಯವರು ಪ್ರಜಾಪ್ರಭುತ್ವವನ್ನು ಹಾಳು ಮಾಡುತ್ತಿದ್ದಾರೆ. 2 ಸಾವಿರ ಕೋಟಿ ಆರೋಪ ಮಾಡಿದ್ದ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರ ವಿರುದ್ಧ ಬಿಜೆಪಿ ದೂರು ಕೊಡಲಿ. ಶ್ರೀನಿವಾಸಗೌಡ ವಿರುದ್ಧವೂ ದೂರು ಕೊಡಬೇಕು' ಎಂದು ತಿರುಗೇಟು ನೀಡಿದರು.

ಕಾಂಗ್ರೆಸ್ ಶಾಸಕರಿಗೆ ಆಫರ್ ಮಾಡಿರುವ ಬಗ್ಗೆ ನನ್ನ ಬಳಿ ದಾಖಲೆಗಳಿವೆ. ಅದನ್ನು ಮುಖ್ಯಮಂತ್ರಿ ಮತ್ತು ಗೃಹ ಸಚಿವರಿಗೆ ಕೊಡುತ್ತೇನೆ. ಯಾವ ಹೋಟೆಲ್‌ನಲ್ಲಿ ಕುಳಿತು ಮಾತನಾಡಿದ್ದಾರೆ ಎಂಬ ದಾಖಲೆಯನ್ನೂ ಕೊಡುತ್ತೇನೆ' ಎಂದು ಸವಾಲು ಹಾಕಿದರು.

ಸಂಸ್ಕೃತಿಯನ್ನು ಉಳಿಸುವ ಜವಾಬ್ದಾರಿ ಮಕ್ಕಳಲ್ಲಿ ಬೆಳೆಸಬೇಕು

• ಉದಯವಾಹಿನಿ, ಶಿಡ್ಲಘಟ್ಟ

ವಸುದೈವ ಕುಟುಂಬಕಂ ಎಂಬ ವಾಕ್ಯವನ್ನು ಹೇಳಿದ ಶ್ರೀಕೃಷ್ಣ ಪರಮಾತ್ಮನ ಜನ್ಮದಿನವನ್ನು ನಮ್ಮ ಶಾಲೆಯಲ್ಲಿ ಆಚರಿಸುತ್ತಿದ್ದೇವೆ ಎಂದು ಗರುಡಾದ್ರಿ ಶಾಲೆಯ ಪ್ರಾಂಶುಪಾಲರಾದ ರೂಪ ರಮೇಶ್ ಹೇಳಿದರು. ನಗರದ ಒಂದನೇ ವಾರ್ಡ್ ಕನಕನಗರ ಗರುಡಾದ್ರಿ ಶಾಲೆಯಲ್ಲಿ ಆಯೋಜಿಸಿದ್ದ ಶ್ರೀಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮದಲ್ಲಿ ಪೋಷಕರನ್ನು ಉದ್ದೇಶಿಸಿ ಮಾತನಾಡಿದ ಅವರು ನಮ್ಮ ಶಾಲೆಯಲ್ಲಿ ಕಳೆದ ಎರಡು ವರ್ಷಗಳಿಂದ ಶ್ರೀ ಕೃಷ್ಣ ಜನ್ಮದಿನವನ್ನು ಆಚರಣೆ ಮಾಡುತ್ತಿದ್ದೇವೆ.

ವಸುದೈವ ಕುಟುಂಬಕಂ ಎಂದರೆ ವಿಶ್ವವೇ ಒಂದು ಕುಟುಂಬ ಎಂದು ಹೇಳುವ ಕೃಷ್ಣ ಎಲ್ಲರಿಗೂ ಪ್ರಿಯ. ಆತನ ಚರಿತ್ರೆಯ ಆದರ್ಶನಗಳನ್ನು ಪಾಲಿಸಲು ಪ್ರಯತ್ನಿಸಿದಾಗಲೇ ಶ್ರೀ ಕೃಷ್ಣ ಜನ್ಮಾಷ್ಟಮಿ ಹಬ್ಬ ಸಾರ್ಥಕವಾಗುತ್ತದೆ ಎಂದರು. ಪೋಷಕರು ಮಕ್ಕಳಿಗೆ ಸನ್ಮಾರ್ಗದ ಮೌಲ್ಯಗಳನ್ನು ಮೈಗೂಡಿಸಿಕೊಳ್ಳಲು ವಿದ್ಯೆಯ ಜೊತೆ ಶಿಸ್ತು, ಸಂಸ್ಕಾರ ಹಾಗೂ ಸಂಸ್ಕೃತಿಯನ್ನು ಉಳಿಸುವ ಜವಾಬ್ದಾರಿ ಮಕ್ಕಳಲ್ಲಿ ಬೆಳೆಸಬೇಕು ಅದಕ್ಕೆ ನೀವು ನಮಗೆ ಸಹಕರಿಸಬೇಕು ಎಂದರು. ನರ್ಸರಿ ಹಾಗೂ ಪ್ರಾಥಮಿಕ ತರಗತಿಯ ವಿದ್ಯಾರ್ಥಿಗಳು ಶ್ರೀ ಕೃಷ್ಣ ಜನ್ಮಾಷ್ಟಮಿಯ ಪ್ರಯುಕ್ತ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು.

ವಿಷ್ಣುವಿನ ಹತ್ತು ಅವತಾರಗಳನ್ನು ರೂಪಕದ ಮೂಲಕ ಅಭಿನಯಿಸಿದರು. ಪೋಷಕರು ನೋಡಿ ಸಂತೋಷಪಟ್ಟರು.

ಉದಯವಾಹಿನಿ ಚಿತ್ರ

> ನಾವುಗಳು ಪಾಶ್ಚಿಮಾತ್ಯ ಸಂಸ್ಕೃತಿಗೆ ಮಾರುಹೋಗುತ್ತಿರುವಂತಹ ಸನ್ನಿವೇಶದಲ್ಲಿ ನಮ್ಮ ಗರುಡಾದ್ರಿ ಆಂಗ್ಲ ಮಾಧ್ಯಮ ಶಾಲೆಯವರು ಗೋಕುಲಾಷ್ಟಮಿ ಹಬ್ಬವನ್ನು ಆಚರಣೆ ಮಾಡುವ ಮೂಲಕ ನಮ್ಮ ಸನಾತನ ಧರ್ಮ, ಆಚಾರ ವಿಚಾರ ಮತ್ತು ಸಂಸ್ಕಾರಗಳನ್ನು ಮಕ್ಕಳಿಗೆ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳನ್ನು ಕಲಿಸುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ.
–ವಿಸ್ಡಂ ನಾಗರಾಜ್, ಖಾಸಗಿ ಶಾಲಾ ಆಡಳಿತ ಮಂಡಳಿಗಳ ಒಕ್ಕೂಟ ಅಧ್ಯಕ್ಷ

ಕಾರ್ಯಕ್ರಮದಲ್ಲಿ ಗರುಡಾದ್ರಿ ಶಾಲೆಯ ಕಾರ್ಯದರ್ಶಿ ಮಂಜುನಾಥ್ ಸೇರಿದಂತೆ ಶಿಕ್ಷಕ ವೃಂದದವರು, ಪೋಷಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಮಹಿಳೆಯ ಸುರಕ್ಷತೆಗೆ ಕ್ರಮ ಜಾರಿಗೊಳಿಸಿ: ಪ್ರತಿಭಟನೆ

• ಉದಯವಾಹಿನಿ, ಮಡಿಕೇರಿ

ಗ್ರಾಮಮಟ್ಟದಿಂದ ಕೇಂದ್ರಮಟ್ಟದವರೆಗೆ ಮಹಿಳೆಯ ಸುರಕ್ಷತೆಗೆ ಪರಿಣಾಮಕಾರಿ ಕ್ರಮಗಳನ್ನು ಜಾರಿಗೊಳಿಸಬೇಕು ಎಂದು ಇಲ್ಲಿ ಮಹಿಳೋದಯ ಮಹಿಳಾ ಒಕ್ಕೂಟದ ಸದಸ್ಯರು ಒತ್ತಾಯಿಸಿದರು.

ಇಲ್ಲಿನ ಜಿಲ್ಲಾಧಿಕಾರಿ ಕಚೇರಿ ಮುಂದೆ ಸೋಮವಾರ ಸೇರಿದ ಒಕ್ಕೂಟದ ಸುಮಾರು 30ಕ್ಕೂ ಅಧಿಕ ಸ್ವಸಹಾಯ ಸಂಘಗಳ ಪ್ರತಿನಿಧಿಗಳು ಪ್ರತಿಭಟನೆ ನಡೆಸಿದರು. ಅತ್ಯಾಚಾರಿಗಳು ಈ ದೇಶದಲ್ಲಿ

ಅಂತರಾಳದಿಂದ... EDITORIAL

ಲೈಂಗಿಕ ದೌರ್ಜನ್ಯ: ತಪ್ಪಿತಸ್ಥರಿಗೆ ತ್ವರಿತವಾಗಿ ಶಿಕ್ಷೆಯಾಗಲಿ

ಮಹಿಳೆಯರ ಮೇಲಿನ ದೌರ್ಜನ್ಯ ಕೃತ್ಯಗಳು ಕ್ರಮಿಸಲಾರದ ಪಾಪವಾಗಿದ್ದು, ತಪ್ಪಿತಸ್ಥರು ಶಿಕ್ಷೆಯಿಂದ ಪಾರಾಗಬಾರದು ಎಂದು ಪ್ರಧಾನಿ ಅಭಿಪ್ರಾಯಪಟ್ಟಿದ್ದಾರೆ. ಕೋಲ್ಕತ್ತದಲ್ಲಿ ವೈದ್ಯ ವಿದ್ಯಾರ್ಥಿನಿಯ ಅತ್ಯಾಚಾರ ಸೇರಿದಂತೆ ದೇಶದ ವಿವಿಧ ಭಾಗಗಳಿಂದ ಲೈಂಗಿಕ ದೌರ್ಜನ್ಯದ ಪ್ರಕರಣಗಳು ವ್ಯಾಪಕವಾಗಿ ವರದಿಯಾಗುತ್ತಿರುವ ವಿದ್ಯಮಾನಕ್ಕೆ ಪ್ರತಿಕ್ರಿಯೆ ರೂಪದಲ್ಲಿ ಪ್ರಧಾನಿಯವರ ಹೇಳಿಕೆಯನ್ನು ಗಮನಿಸಬಹುದು. ಅತ್ಯಾಚಾರಿಗಳ ಅಟ್ಟಹಾಸವನ್ನು ತಡೆಗಟ್ಟುವ ದಿಸೆಯಲ್ಲಿ ಕಠಿಣ ಕಾಯ್ದೆಗಳು ಆಗತ್ಯ ಎನ್ನುವುದು ಕೇಂದ್ರ ಸರ್ಕಾರಕ್ಕೆ ವಿಳಂಬವಾಗಿಯಾದರೂ ಮನವರಿಕೆಯಾದಂತಿರುವುದು ಸ್ವಾಗತಾರ್ಹ. 2012ರಲ್ಲಿ ದೆಹಲಿಯಲ್ಲಿ ಯುಪತಿಯೊಬ್ಬಳ ಮೇಲೆ ಚಲಿಸುವ ಬಸ್‌ನಲ್ಲಿ ನಡೆದ ಸಾಮೂಹಿಕ ಅತ್ಯಾಚಾರ ಹಾಗೂ ಕೊಲೆ 'ನಿರ್ಭಯಾ ಪ್ರಕರಣ'ದ ಹೆಸರಿನಲ್ಲಿ ವಿಶ್ವದ ಗಮನ ಸೆಳೆದಿತ್ತು, ಅತ್ಯಾಚಾರದ ವಿರುದ್ಧ ಮಹಿಳೆಯರ ಪ್ರತಿಭಟನೆ ಮತ್ತು ಜಾಗೃತಿಯ ರೂಪದಲ್ಲಿ ಗುರುತಿಸಲಾಗುತ್ತಿರುವ 'ನಿರ್ಭಯಾ ಪ್ರಕರಣ'ಕ್ಕೆ ಹನ್ನೆರಡು ವರ್ಷಗಳು ತುಂಬಿದರೂ ಅತ್ಯಾಚಾರ ಪ್ರಕರಣಗಳ ನಿಗ್ರಹದ ಉದ್ದೇಶವು ನಿರೀಕ್ಷಿತ ಮಟ್ಟವನ್ನು ಮುಟ್ಟಿಲ್ಲ ಎನ್ನುವುದು ಕಳವಳ ಹುಟ್ಟಿಸುವ ಸಂಗತಿ ಒಂದು ತಿಂಗಳ ಅವಧಿಯಲ್ಲಿ ದೇಶದ ವಿವಿಧ ಭಾಗಗಳಿಂದ ವರದಿಯಾಗಿರುವ ಅತ್ಯಾಚಾರದ ಪ್ರಕರಣಗಳು, ಭಾರತೀಯ ಮಹಿಳೆಯ ಸುರಕ್ಷತೆಯ ಬಗ್ಗೆ ಆತಂಕ ಮೂಡಿಸುವಂತಿವೆ. ಕೋಲ್ಕತ್ತದಲ್ಲಿ ಸ್ನಾತಕೋತ್ತರ ವೈದ್ಯ ವಿದ್ಯಾರ್ಥಿನಿಯ ಮೇಲೆ ಅತ್ಯಾಚಾರವಸಗಿ ಕೊಲೆ ಮಾಡಿರುವುದು. ಮಹಾರಾಷ್ಟ್ರದಲ್ಲಿ ಇಬ್ಬರು ಪುಟ್ಟ ಬಾಲಕಿಯರ ಮೇಲೆ ನಡೆದಿರುವ ಲೈಂಗಿಕ ಕಿರುಕುಳ, ಉತ್ತರಪ್ರದೇಶದಲ್ಲಿ ದಾದಿಯ ಮೇಲೆ ವೈದ್ಯನಿಂದಲೇ ನಡೆದಿದೆ ಎನ್ನಲಾದ ಅತ್ಯಾಚಾರ, ತಮಿಳುನಾಡಿನಲ್ಲಿ ವಿದ್ಯಾರ್ಥಿನಿಯ ಮೇಲೆ ಎನ್ ಸಿಸಿ ಶಿಬಿರದ ಸಂಯೋಜಕ ಅತ್ಯಾಚಾರ ಎಸಗಿದ್ದಾನೆ ಎಂಬ ಆರೋಪ, ಶಿವಮೊಗ್ಗ ಜಿಲ್ಲೆಯ ವಸತಿ ಶಾಲೆಯೊಂದರಲ್ಲಿ ವಿದ್ಯಾರ್ಥಿನಿಯರ ಮೇಲೆ ಶಿಕ್ಷಕ ಎಸಗಿದ್ದಾನೆ ಎನ್ನಲಾದ ಲೈಂಗಿಕ ದೌರ್ಜನ್ಯ, ಚಿಂತಾಮಣಿಯಲ್ಲಿ ಸಾರ್ವಜನಿಕ ಆಸ್ಪತ್ರೆಯ ಆವರಣದಲ್ಲಿ ಮಲಗಿದ್ದ ವೃದ್ಧೆಯ ಮೇಲೆ ನಡೆದಿರುವ ಅತ್ಯಾಚಾರ.. ಹೀಗೆ ಪಟ್ಟಿ ಮಾಡಿದಷ್ಟೂ ಮುಗಿಯದ ಅಮಾನುಷ ಲೈಂಗಿಕ ದೌರ್ಜನ್ಯಗಳು, ಹೆಣ್ಣುಮಕ್ಕಳ ಜಂಘಾಬಲವನ್ನೇ ಉಡುಗಿಸುವಂತಿವೆ ಹಾಗೂ ನಾಗರಿಕ ಸಮಾಜ ಲಜ್ಜೆಯಿಂದ ತಲೆ ತಗ್ಗಿಸಬೇಕಾದ ಕೃತ್ಯಗಳಾಗಿವೆ. ಪುಂಡು ಪೋಕರಿಗಳು ಮಾತ್ರವಲ್ಲ, ಧಾರ್ಮಿಕ ಗುರುಗಳು ಸೇರಿದಂತೆ ಸಮಾಜದಲ್ಲಿ ಗೌರವಾನ್ವಿತ ಪೋಷಾಕಿನಲ್ಲಿರುವವರೂ ಲೈಂಗಿಕ ದೌರ್ಜನ್ಯ ಕೃತ್ಯಗಳಲ್ಲಿ ಭಾಗಿಯಾಗಿದ್ದಾರೆ. 135 ಶಾಸಕರು ಹಾಗೂ 14 ಸಂಸದರು ಸೇರಿದಂತೆ ಒಟ್ಟು 151 ಜನಪ್ರತಿನಿಧಿಗಳು ಮಹಿಳೆಯರ ಮೇಲೆ ದೌರ್ಜನ್ಯವಸಗಿದ ಆರೋಪ ಎದುರಿಸುತ್ತಿದ್ದಾರೆ. ಅತ್ಯಾಚಾರ ಪ್ರಕರಣಗಳ ಸಂಖ್ಯೆ ಹೆಚ್ಚುತ್ತಿರುವ ಸಂದರ್ಭದಲ್ಲೇ, ತಪ್ಪಿತಸ್ಥರು ಕಾನೂನಿನ ಕುಣಿಕೆಯಿಂದ ಪಾರಾಗುತ್ತಿರುವುದು ಕಳವಳ ಹುಟ್ಟಿಸುವ ಸಂಗತಿ ಈ ವರ್ಷದ ಆರಂಭದ 7 ತಿಂಗಳಲ್ಲಿಯೇ 140 ಅತ್ಯಾಚಾರ ಪ್ರಕರಣಗಳು ರಾಜ್ಯದಲ್ಲಿ ವರದಿಯಾಗಿವೆ. 1,322ರಲ್ಲಿ ಈವರೆಗೆ 10 ಪ್ರಕರಣಗಳಲ್ಲಷ್ಟೇ ದಂಡನೆ ದೊರೆತಿದ್ದು, ಶಿಕ್ಷೆಯ ಪ್ರಮಾಣ ಕೇವಲ ಶೇ 6,76ರಷ್ಟಿದೆ. 713 ಪ್ರಕರಣಗಳ ವಿಚಾರಣೆ ನಡೆಯುತ್ತಿದ್ದರೆ, 230 ಪ್ರಕರಣಗಳು ತನಿಖಾ ಹಂತದಲ್ಲಿವೆ. 250 ಪ್ರಕರಣಗಳಲ್ಲಿ ಆರೋಪಿಗಳು ಖುಲಾಸೆಗೊಂಡಿದ್ದರೆ, 110 ಪ್ರಕರಣಗಳಲ್ಲಿ ಸಾಕ್ಷ್ಯಗಳಿಲ್ಲದೆ ಬಿ ರಿಪೋರ್ಟ್ ಸಲ್ಲಿಸಲಾಗಿದೆ. ಈ ಅಂಕಿಅಂಶಗಳು ಕಾನೂನು ಸುವ್ಯವಸ್ಥೆಯಲ್ಲಿನ ಲೋಪಗಳಿಗೆ ಕನ್ನಡಿ ಹಿಡಿಯುವಂತಿವೆ. ಅತ್ಯಾಚಾರ ಪ್ರಕರಣಗಳು ನ್ಯಾಯಾಲಯದಲ್ಲಿ ಗಟ್ಟಿಯಾಗಿ ನಿಲ್ಲದಿರಲು ಸಾಕ್ಷ ಕೊರತೆ ಮುಖ್ಯ ಕಾರಣವಾಗಿದೆ.

2023ರಲ್ಲಿ 537 ಅತ್ಯಾಚಾರ ಪ್ರಕರಣಗಳು ದಾಖಲಾಗಿದ್ದವು. ಇವುಗಳಲ್ಲಿ ಎಷ್ಟು ಪ್ರಕರಣಗಳಲ್ಲಿ ತಪ್ಪಿತಸ್ಥರಿಗೆ ಶಿಕ್ಷೆಯಾಗುತ್ತದೆಂದು ಹೇಳಲಾಗದು. ಅತ್ಯಾಚಾರ ಪ್ರಕರಣಗಳನ್ನು ನಮ್ಮ ವ್ಯವಸ್ಥೆ ಹೇಗೆ ನಿರ್ವಹಿಸುತ್ತಿದೆ ಎನ್ನುವುದಕ್ಕೆ ನಿದರ್ಶನವಾಗಿ, 2013ರಿಂದ 2023ರವರೆಗಿನ ಹತ್ತು ವರ್ಷಗಳ ಅವಧಿಯಲ್ಲಿ ಬೆಂಗಳೂರಿನಲ್ಲಿ ದಾಖಲಾದ 1.322 ಅತ್ಯಾಚಾರ ಪ್ರಕರಣಗಳಲ್ಲಿನ ಶಿಕ್ಷೆಯ ಅಂಕಿಅಂಶವನ್ನು ಗಮನಿಸಬಹುದು.

ಶ್ರೀ ಕೃಷ್ಣ ಜಯಂತಿ ಪ್ರಯುಕ್ತ ರಾಯರ ಸನ್ನಿಧಿಯಲ್ಲಿ ಶ್ರೀ ಕೃಷ್ಣಾರ್ಘ್ಯ

• ಉದಯವಾಹಿನಿ ಬೆಂಗಳೂರು

ಉದಯವಾಹಿನಿ ಚಿತ್ರ

ಜಯನಗರದ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಶ್ರೀ ಕೃಷ್ಣಾಷ್ಟಮಿ ಪ್ರಯುಕ್ತ ಸುವರ್ಣದ ತೊಟ್ಟಿಲನಲ್ಲಿ ನಂದಗೋಕುಲವನ್ನು ನಿರ್ಮಾಣ ಮಾಡಿ ರಾತ್ರಿ 11:58 ಕ್ಕೆ ಜನಿಸಿದ ಶ್ರೀ ಕೃಷ್ಣನಿಗಾಗಿ ಉಪವಾಸದಿಂದ ಇದ್ದುಕೊಂಡು ಲೋಕಕಲ್ಯಾಣಕ್ಕಾಗಿ ಭಕ್ತರಿಂದ ಶ್ರೀ ಮಠದ ಸಿಬ್ಬಂದಿಗಳಿಂದ ರಾತ್ರಿ 11-58 ನಿಮಿಷಕ್ಕೆ ಕೃಷ್ಣಾರ್ಘ್ಯ ಪ್ರಧಾನ ಮಾಡಲಾಯಿತು ಕೃಷ್ಣಾರ್ಘ್ಯದ ಪ್ರಯುಕ್ತ ದೇವರಿಗೆ ಚಕ್ಕುಲಿ ಹುಂಡಿ ಇತ್ಯಾದಿ ತಿನಿಸುಗಳನ್ನು ತಯಾರಿಸಿ ದೇವರ ನೈವೇದ್ಯಕ್ಕೆ ಇರಿಸಲಾಗಿ ನಂತರ ಚಾಮರ ಸೇವೆ, ಜೋಗುಳದ ಲಾಲಿ ಹಾಡನ್ನು ಹಾಡುತ್ತಾ ಮಹಾಮಂಗಳಾರತಿಯೊಂದಿಗೆ ಕಾರ್ಯಕ್ರಮವು ಅತ್ಯಂತ ವೈಭವದಿಂದ ನೆರವೇರಿತು, ಈ ಸಂದರ್ಭದಲ್ಲಿ ಆರ್, ಕೆ ವಾದಿಂದ್ರ ಆಚಾರ್ಯ ಮತ್ತು ಶ್ರೀ ನಂದಕಿಶೋರ್ ಆಚಾರ್ಯ, ಅರ್ಚಕ ವೃಂದದವರು ಭಕ್ತರು ಸಿಬ್ಬಂದಿಗಳು ಭಾಗವಹಿಸಿದ್ದರು.

• ಹಿಂದಿನ ಸಂಚಿಕೆಯಿಂದ

ಕುಡಿತದ ಅಮಲಿನಲ್ಲಿ, ವಿಧಿಪ್ರೇರಿತನಾಗಿ, ಮಾತಿನಲ್ಲಿ ಕುರುಕ್ಷೇತ್ರ ಯುದ್ಧದ ವಿಷಯವನ್ನೆತ್ತಿ, ಮಲಗಿರುವ ಶತ್ರುಗಳನ್ನು ಕೊಲ್ಲುವ, ಶತ್ರುವಿನ ಬಿಡದಿಗೆ ಕಳ್ಳನಂತೆ ಬೆಂಕಿ ಕೊಟ್ಟು ಪರಿಣಾಮ ಎದುರಿಸುವ ಧೈರ್ಯವಿಲ್ಲದೆ ತನ್ನ ದೇಶಕ್ಕೆ ಓಡಿಹೋಗುವ ಇನ್ನೊಬ್ಬ ಕ್ಷತ್ರಿಯನನ್ನು ನಾನು ಈವರಿಗೂ ಕಾಣಲಿಲ್ಲ ಎಂದನು. ಕೃತವರ್ಮನಿಗೆ ರೇಗಿಹೋಯಿತು. ಅವನೂ ಕಂಠಪೂರ್ತಿ ಕುಡಿದಿದ್ದನು. ಇವನು ಭೂರಿಶ್ರವಸ್ಸನ್ನು ಕೊಂದ ಸಂಗತಿಯನ್ನು ಎತ್ತಿ ಆಡುವುದಕ್ಕಾರಂಭಿಸಿದನು. ಕೆಲವರು ಇವನು ಕಡೆಗೂ ಕೆಲವರು ಅವನ ಕಡೆಗೂ ಸೇರಿಕೊಂಡು ವಾದ ಮಾಡಲಾರಂಭಿಸಿದರು. ಜನರಲ್ಲಿ ಎರಡು ಪಕ್ಷಗಳಾದವು. ವಾದ ಹೋಗಿ ಹೊಡೆದಾಟಕ್ಕೆ ಮೊದಲಾಯಿತು. ಅದೊಂದು ಕುಡಿದವರ ನಡುವಣ ಬೀದಿ ಜಗಳ. ಕೃಷ್ಣನನ್ನು ಹೆತ್ತ ಷ್ಣಿವಂಶದ ಈ ಮಟ್ಟಕ್ಕೆ ಇಳಿಯಿತು. ಕೃಷ್ಣನು ನೋಡುತ್ತಲೇ ಇದ್ದನು. ಅವನ ಮಗ ಪ್ರದ್ಯುಮ್ನ ಸಾತ್ಯಕಿಯ ಕಡೆ ಸೇರಿಕೊಂಡನು. ಸಾತ್ಯಕಿಯು ತವರ್ಮನ ಮೇಲೇರಿ ಹೋಗಿ, ಕುರುಕ್ಷೇತ್ರಯುದ್ಧದ ಮಹಾವೀರನಾದ ಷ್ಟದ್ಯುಮ್ನನ ಸಾವಿನ ಸೇಡನ್ನು ನಾನಿಂದು ತೀರಿಸಿಕೊಳ್ಳುವೆ ಎಂದವನೇ ತವರ್ಮನ ಕತ್ತನ್ನು ಕತ್ತರಿಸಿ ಹಾಕಿಬಿಟ್ಟನು. ಬೀದಿಜಗಳ ಹೋಗಿ ದೊಡ್ಡ ಹೋರಾಟಕ್ಕೇ ಇಟ್ಟುಕೊಂಡಿತು. ಎಲ್ಲರೂ ಒಬ್ಬರ ಮೇಲೆ ಒಬ್ಬರು ಬೀಳುತ್ತ, ಸಿಕ್ಕಿದ್ದನ್ನು ತೆಗೆದುಕೊಂಡು ಸಿಕ್ಕವರಿಗೆ ಸಿಕ್ಕ ಹಾಗೆ ಚಚ್ಚಲಾರಂಭಿಸಿದರು. ಆಯುಧಗಳು ಇಲ್ಲದ್ದರಿಂದ, ಸಮುದ್ರದ ದಡದಲ್ಲಿ ಬೆಳೆದಿದ್ದ ಪೊದೆಗಳನ್ನೆ ಕಿತ್ತು ಹೊಡೆಯಲು ಬಳಸತೊಡಗಿದರು. ಆ ಪೊದೆಗಳು ಬೆಳೆದಿದ್ದ ಜಾಗದಲ್ಲಿಯೇ ಬಲರಾಮನು ಸಾಂಬನ ಒನಕೆಯನ್ನು ಪುಡಿಮಾಡಿಸಿ ಚೆಲ್ಲಿಸಿದ್ದುದು. ಶಾಪದಂತೆ ಅವುಗಳ ಹೊಡೆತದಿಂದಲೇ ಜನರು ಸಾಯಲಾರಂಭಿಸಿದರು.

ಕೃಷ್ಣನ ಕಣ್ಣೆದುರಿಗೇ ಸಾತ್ಯಕಿ ಪ್ರದ್ಯುಮ್ನರು ಸತ್ತರು. ಇನ್ನೇನು ಉಳಿಯಿತು. ಇನ್ನೇಕೆ ಬದುಕಬೇಕು ಕೃಷ್ಣ ತಾನೂ ಕೆಲವು ಪೊದೆಗನ್ನು ಕಿತ್ತು ಜನರ ಮೇಲೆ ಎಸೆದನು. ಒಂದೊಂದು ಪೊದೆಯೂ ಒಂದೊಂದು ಮಾರಕಾಸ್ತ್ರವಾಯಿತು. ಪೊದೆಗಳು ಕಿತ್ತಷ್ಟೂ ಹೆಚ್ಚಿದವು. ಕೆಲವೇ ಕ್ಷಣಗಳಲ್ಲಿ ಒಬ್ಬರೂ ಉಳಿಯದಂತೆ ಎಲ್ಲರೂ ನಾಶವಾದರು. ಅದು ಆಗಿದ್ದು ಕೃಷ್ಣಪೊದೆಯನ್ನು ಎಸೆಯಲಾರಂಭಿಸಿದ ಮೇಲೆ. ಕೃಷ್ಣನ ಮುಖವು ಭೀಕರವಾಗಿದ್ದಿತು; ಸಾಕ್ಷಾತ್ ಮೃತ್ಯುದೇವತೆಯಂತಿದ್ದನು. ಬಲರಾಮ, ಕೃಷ್ಣ, ದಾರುಕ ಈ ಮೂವರನ್ನುಳಿದು ಉಳಿದವರೆಲ್ಲರೂ ಸತ್ತರು. ಬಲರಾಮನು ಅಲ್ಲಿ ಕಾಣಿಸಲಿಲ್ಲ, ದಾರುಕನೊಂದಿಗೆ ಕೃಷ್ಣನು ಅವನನ್ನು ಹುಡುಕಿಕೊಂಡು ಹೊರನು. ಸಮುದ್ರದ ದಡದಲ್ಲಿನ ಮರವೊಂದಕ್ಕೆ ಒರಗಿಕೊಡು ನಿಂತಿದ್ದ ಅವನನ್ನು ನೋಡಿದರು. ಜಗಳದ ಪ್ರಾರಂಭದಲ್ಲಿಯೇ ಜುಗುಪ್ಸೆಗೊಂಡ ಬಲರಾಮನು ಆಗಲೇ ಅಲ್ಲಿಗೆ ಬಂದಿದ್ದನು.

ಮುಂದುವರಿಯುವುದು...

• ಉದಯವಾಹಿನಿ, ವಿಶೇಷ

ಹೆಣ್ಣಿಗೆ ಹೆಣ್ಣೇ ಶತ್ರುವೇ?

ಹೆಣ್ಣಿದವು ಮನೆಯಲ್ಲಿ ಇರುವುದು ಆನಂದ ಕಣ್ಣವಳು ಆಗಿಹಳು ಬದುಕಿನಲಿಯೆ ಮಣ್ಣಿದುವೆ ಆಗುವುದು ಸಂಸಾರ ತಿಳಿಯುತಿರು ತಣ್ಣನೆಯ ಮನವಿರಲಿ ಲಕ್ಷ್ಮಿ ದೇವಿ.....

ಸಾಮಾಜಿಕ ಕಳಕಳಿ

ಹೆಚ್.ಎಸ್. ಪ್ರತಿಮಾ
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ ಶಿಕ್ಷಕಿ, ಹಾಸನ

ನಮ್ಮ ಸಮಾಜದಲ್ಲಿ ಹೆಣ್ಣಿಗೆ ವಿಶೇಷವಾದ ಸ್ಥಾನವಿರುವುದು ಪ್ರತಿಯೊಬ್ಬರಿಗೂ ತಿಳಿದಿದೆ. ಹೆಣ್ಣು ಮನೆಯಲ್ಲಿದ್ದರೆ ಅದು ಎಲ್ಲರಿಗೂ ಆನಂದವನ್ನು ತರುತ್ತದೆ. ಲಕ್ಷ್ಮಿ, ಸರಸ್ವತಿ,ಎಂದು ಇನ್ನೂ ಹಲವು ದೇವಿಯರ ಹೆಸರಿಗೆ ಹೋಲಿಸಿ ಕರೆಯುವು ದುಂಟು. ಮನೆಯಲ್ಲಿ ಆಕೆಯೂ ಎಲ್ಲರ ಕಣ್ಣಾಗಿರುತ್ತಾಳೆ. ಹೆಣ್ಣಿಗೆ ಒಳ್ಳೆಯ ಸಂಸ್ಕಾರಗಳನ್ನು ಕಲಿಸುತ್ತಾ ಜೀವನವನ್ನು ಮದುವೆ ಎಂಬ ಪವಿತ್ರ ಬಂಧನದಲ್ಲಿ ಹೇಗೆ ಉಳಿಸಿ ಬೆಳೆಸಿಕೊಂಡು ಹೋಗಬೇಕೆಂಬುದನ್ನು ತಿಳಿಸುತ್ತಾರೆ. ತನ್ನ ಕೈಯಿಂದ ತಾ ನೇ ಜೀವನದಲ್ಲಿ ಅವಳ ಸಂಸಾರವನ್ನು ಹಾಳು ಮಾಡಿಕೊಳ್ಳದೆ ಮಣ್ಣಿನಲ್ಲಿ ಬೆಳೆದ ಮರವಾಗಿ ಕಾಣುವಂತೆ ಮಾಡಬೇಕು.

ಅದು ತಣ್ಣನೆಯ ಮನಸ್ಸಿನಲ್ಲಿ ಶಾಂತವಾಗಿರಬೇಕು. ಆಗ ಮಾತ್ರ ನಮ್ಮ ಸಮಾಜದಲ್ಲಿ ಸುಖವಾಗಿ ಬಾಳನ್ನು ಸಾಗಿಸಲು ಸಾಧ್ಯ. ನಮ್ಮ ದೇಶದಲ್ಲಿ ಪ್ರಸ್ತುತ ದಿನಮಾನಗಳಲ್ಲಿ ಹಲವಾರು ಬದಲಾವಣೆಗಳನ್ನು ಕಾಣುತ್ತಿದ್ದೇವೆ. ಅಂತಹ ಬದಲಾವಣೆಗಳಲ್ಲಿ ಹೆಣ್ಣು ಮಕ್ಕಳ ಸ್ಥಾನ ಮಾನ ದಿನೇ ದಿನೇ ಬದಲಾಗುತ್ತಿರುವುದು ಕಾಣುತ್ತಿದ್ದೇವೆ. ಯಾರಿಗೂ ಏನು ಕಡಿಮೆ ಇಲ್ಲ ಎಂಬಂತೆ ಎಲ್ಲೆಡೆಯು ತನ್ನದೇ ಆದಂತಹ ಅಸ್ತಿತ್ವವನ್ನು ಉಳಿಸಿಕೊಳ್ಳುತ್ತಾ ಬೆಳೆಸಿ ಕೊಳ್ಳುತ್ತಾ ಹೋಗುತ್ತಿದ್ದಾರೆ. ಎಂತಹ ಕೆಲಸವನ್ನಾದರೂ ಗಂಡಿಗೆ ಸರಿಸಮಾನ ಎಂಬಂತೆ ಮಾಡುತ್ತಿದ್ದಾರೆ. ಇದು ಸಮಾನತೆಯ ಪ್ರತೀಕವಾಗಿದೆ.

ಇಂತಹ ಸಮಾಜದಲ್ಲಿ ಹೆಣ್ಣಿಗೆ ಹೆಣ್ಣೆ ಶತ್ರುವಾಗಿದ್ದಾಳೆಯೇ ಒಮ್ಮೆ ಯೋಚಿಸುತ್ತ ನೋಡಿ ಹೆಣ್ಣಿಗೆ ಹೆಣ್ಣೇ ಹೊಟ್ಟೆಕಿಚ್ಚುಕೊಡುವುದು, ಅವಾಚ್ಯ ಪದಗಳಿಂದ ಬೈಯುವುದು ಅಷ್ಟೇ ಅಲ್ಲದೆ ಯಾವುದಕ್ಕೂ ಅಂಜದೆ ವರ್ತಿಸುವುದು. ಸರಿ ಏನು ಉಚಿತ ಬಸ್ ಪ್ರಯಾಣಗಳಲ್ಲಿ ಹೆಂಗೆ ಹೆಣ್ಣೇ ಗಲಾಟೆ ಮಾಡಿಕೊಂಡು ಸುದ್ದಿಯಾಗುತ್ತಿರುವುದನ್ನು ನಾವು ದೂರದರ್ಶನದ ಹಲವಾರು ವಾರ್ತೆಗಳಲ್ಲಿ ನೋಡುತ್ತಿದ್ದೇವೆ. ಹೆಣ್ಣಿಗೆ ಹೆಣ್ಣು ಬಹಳಷ್ಟು ಈಶೆ ಪಡುತ್ತಾಳೆ. ಸ್ವಲ್ಪ ಚೆನ್ನಾಗಿ ಒಬ್ಬರಿಗಿಂತ ಒಬ್ಬರು ಇದ್ದರೂ, ಪ್ರಶಂಸೆಯನ್ನ ಒಬ್ಬರಿಂದ ಇನ್ನೊಬ್ಬರು ಮಾಡುತ್ತಿದ್ದರು, ಯಾವುದೇ ಕೆಲಸದಲ್ಲಿ ಮುಂದಾಗುತ್ತಿದ್ದರು, ಹಲವು ವಿಚಾರಗಳಲ್ಲಿ ಗಂಡಿಗಿಂತ ಹೆಣ್ಣಿಗೆ ಹೆಣ್ಣೇ ಶತ್ರು. ಅದನ್ನು ನಾವು ದಿನ ನಿತ್ಯದಲ್ಲಿ ಸಾಕ್ಷಿ ಸಮೇತವಾಗಿ ನೋಡುತ್ತಿದ್ದೇವೆ. ಒಬ್ಬರಿ ಗೊಬ್ಬರು ಕಾಲು ಎಳೆಯುವ ಕೆಲಸವನ್ನು ಮಾಡುವುದೇ ಹೆಣ್ಣಿಗೆ ಹೆಣ್ಣು ಮಕ್ಕಳೇ. ಅದು ಮೇಲ್ ಆಟಕ್ಕೆ ಇಲ್ಲ ಎಂದರು. ಕಟು ಸತ್ಯವೇ. ಅವಾಚ್ಯ ಪದಗಳನ್ನು ಹೇಳುವುದರಲ್ಲಿ ಮುಂದಿರುವವರು ಸಹ ಹೆಣ್ಣು ಮಕ್ಕಳೇ. ಪ್ರಸ್ತುತ ದಿನಮಾನಗಳಲ್ಲಂತೂ ನಾನು ಸಹ ಕಂಡ ಕೆಲವು ಘಟನೆಗಳ ಆಧಾರದ ಮೇಲೆ ಹೇಳುತ್ತಿದ್ದೇನೆ. ಯಾವುದೇ ಅಂಜಿಕೆ ಇಲ್ಲದಂತೆ ಬಸ್ಗಳಲ್ಲಿ, ರಸ್ತೆಗಳಲ್ಲಿ, ಹೆಣ್ಣು ಮಕ್ಕಳದೇ ಗಲಾಟೆ ಹೆಚ್ಚಿದೆ. ಎಲ್ಲಾ ಹೆಣ್ಣು ಮಕ್ಕಳು ಹಾಗೆ ಮಾಡುತ್ತಾರೆ ಎಂದು ಹೇಳುತ್ತಿಲ್ಲ. ಯಾರೋ ಕೆಲ ಹೆಣ್ಣು ಮಕ್ಕಳು ಮಾಡಿದ್ದಕ್ಕೆ ಹೆಣ್ಣು ಕುಲಕ್ಕೆ ಹೇಳುವಂತಾಗುತ್ತಿದೆ. ಜನರ ಜೀವನದಲ್ಲಿ ಗಂಡು ಹೆಣ್ಣಿಗೆ ವಿಶೇಷವಾದಂತಹ ಲಿಂಗದ ಬೇದದ ಸ್ಥಾನವಿತ್ತು. ಪ್ರಸ್ತುತ ದಿನಮಾನದಲ್ಲಿ ಅದು ಸರಿಸಮಾನವಾಗಿ ಹೋಗಬೇಕೆಂದು ಹೋಗುತ್ತಿರುವಾಗ ಅತಿಯಾದ ಕೆಲ ಹೆಣ್ಣು ಮಕ್ಕಳು ಗಟ್ಟಿತನವನ್ನು ತೋರುತ್ತಿರುವುದು ಗಂಡು ಕುಲವೇ ನಡುಗುವಂತಾಗುತ್ತಿದೆ. ಪೂಜಿಸಬೇಕಾದ ಕೆಲ ಹೆಣ್ಣು ಮಕ್ಕಳು. ಅಸಭ್ಯ ವರ್ತನೆಗಳಿಂದ ಹೆಣ್ಣು ಕುಲಕ್ಕೆ ಕೆಟ್ಟ ಹೆಸರು ತರುತ್ತಿದ್ದಾರೆ. ಇಂದಿನ ಪ್ರಸ್ತುತ ದಿನಮಾನಗಳಲ್ಲಿ ಜಾಲತಾಣಗಳಲ್ಲಂತೂ ಇದರದೇ ಚರ್ಚೆ. ಹೆಣ್ಣಿಗೆ ಹೆಣ್ಣೇ ಶತ್ರುವಾಗಿ ಹೇಳು ಹೆಣ್ಣು ಕುಲಕ್ಕೆ ಮಾರಕವಾಗುತ್ತಿದ್ದಾರೆಯೇ ಎಂಬ ವಿಚಾರಗಳಂತೂ ಹಲವೆಡೆ ಹರಿದಾಡುತ್ತಿದೆ. ನಮ್ಮ ಹೆಣ್ಣು ಮಕ್ಕಳು ಎಲ್ಲ ಸುಸಂಸ್ಕೃತ ಸಂಸ್ಕೃತಿಗೆ ಹೆಸರಾದವರು. ಅಂತಹ ನಮ್ಮ ಹೆಣ್ಣು ಮಕ್ಕಳ ನಡೆ-ನುಡಿ ಉಡುಗೆ -ತೊಡುಗೆ, ಆಹಾರ, ವಿಚಾರಗಳಲ್ಲಿ ಬದಲಾವಣೆಗಳು ಬಹಳವಾಗುತ್ತಿರುವುದು ಕಾರಣವೇ?

ಮುಂದುವರೆಯುವುದು ....

ಉದಯವಾಹಿನಿ ಚಿತ್ರ

■ ಮೈಸೂರು: ತಂದೆ ಮೊನಿಷ್ ತಾಯಿ ಮೇಘನಾ ದಂಪತಿಗಳ ಪುತ್ರ ಶ್ರೀ ಹಾನ್ ಮೊರ್ಯ 7 ತಿಂಗಳು ಶ್ರೀ ಕೃಷ್ಣನ ವೇಷದಲ್ಲಿ

ಉದಯವಾಹಿನಿ ಚಿತ್ರ

■ ಪೃತ್ವಿಕ್ ಬಿರಾದಾರ್, ವ :7 ತಿಂಗಳು, ತಂ/ಬಸವರಾಜ, ತಾಯಿ /ಸುಧಾ , ಸಾ/ಕೆಂಭಾವಿ

ಉದಯವಾಹಿನಿ ಚಿತ್ರ

■ ಹೆಸರು : ಮಿಥಿಲಾಗೌಡ, ಬಸನಗೌಡ ಪಾಟೀಲ್ ಕೆಂಭಾವಿ

ಖುಷಿ ನೀಡಿದ ಯೋಗ ಭಂಗಿಗಳ ಸುಮನೋಹರ ನೃತ್ಯಾರ್ಪಣೆ

ಕಲಾ ಸಾಹಿತ್ಯ

ವೈ.ಕೆ. ಸಂಧ್ಯಾಶರ್ಮ
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು

• ಉದಯವಾಹಿನಿ, ವಿಶೇಷ

ರವೀಂದ್ರ ಕಲಾಕ್ಷೇತ್ರದ ವಿಶಾಲ ವೇದಿಕೆಯ ಮೇಲೆ ಬಹು ಆತ್ಮ ವಿಶ್ವಾಸದಿಂದ ಹೆಜ್ಜೆ ಹಾಕಿದ ನಗುಮೊಗದ ನೃತ್ಯ ಕಲಾವಿದೆ ಖುಷಿ ದೇವರಾಜ್ ಪ್ರಸ್ತುತ ಪಡಿಸಿದ

ಅನಾನುಕೂಲವನ್ನೇ ಹೆಚ್ಚು ಮಾಡಿದರೆ ಸಹಿಸಲು ಸಾಧ್ಯವಿಲ್ಲ

ಗಣಿ ಕಂಪನಿಗಳ ಸಿಎಸ್‌ಆರ್ ನಿಧಿ: ಜಿಲ್ಲೆಯ ಗಣಿಬಾಧಿತ ಪ್ರದೇಶಾಭಿವೃದ್ಧಿಗೇ ಬಳಕೆಯಾಗಲಿ: ಸಂಸದ

• ಉದಯವಾಹಿನಿ, ಚಿತ್ರದುರ್ಗ

ಉದಯವಾಹಿನಿ ಚಿತ್ರ

ಸರ್ಕಾರ ಕಟ್ಟುನಿಟ್ಟಿನ ಸೂಚನೆ

ಜಿಲ್ಲೆಯಲ್ಲಿರುವ ಗಣಿ ಕಂಪನಿಗಳು ಸ್ಥಳೀಯ ಜನರಿಗೆ ಉದ್ಯೋಗ ಅವಕಾಶ ನೀಡುವ ಜೊತೆಗೆ ಜಿಲ್ಲೆಯಲ್ಲಿನ ಗಣಿಬಾಧಿತ ಪ್ರದೇಶಾಭಿವೃದ್ಧಿಗೆ ಕೊಡುಗೆ ನೀಡಬೇಕು. ಸಿಎಸ್‌ಆರ್ ನಿಧಿ ಜಿಲ್ಲೆಯ ಗಣಿಬಾಧಿತ ಪ್ರದೇಶಗಳಲ್ಲಿಯೇ ಖರ್ಚಾಗಬೇಕು ಎಂದು ಸಂಸದ ಗೋವಿಂದ ಎಂ ಕಾರಜೋಳ ಹೇಳಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಗಣಿ, ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು ಹಾಗೂ ಗಣಿ ಕಂಪನಿಗಳ ಪ್ರತಿನಿಧಿಗಳೊಂದಿಗೆ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ 7 ಖಾಸಗಿ ಗಣಿ ಕಂಪನಿಗಳು ಕಾರ್ಯನಿರ್ವಹಿಸುತ್ತಿದ್ದು, ಗಣಿ ಕಂಪನಿಗಳ ಸಿ.ಆರ್.ಆರ್ ನಿಧಿ ಜಿಲ್ಲೆಯ ಗಣಿಬಾಧಿತ ಪ್ರದೇಶಗಳಲ್ಲಿ ಬಳಕೆಯಾಗಬೇಕು. ಆದರೆ ಇದು ಆಗುತ್ತಿಲ್ಲ. ಗಣಿ ಕಂಪನಿಗಳು ತಮ್ಮ ವ್ಯಾಪ್ತಿಯ ಇತರೆ ರಾಜ್ಯಗಳಲ್ಲಿ ಸಿಎಸ್‌ಆರ್ ಹಣ ಖರ್ಚು ಮಾಡಿ, ಇಲ್ಲಿನ ಲೆಕ್ಕಕ್ಕೆ ತೋರಿಸುತ್ತಿರುವುದು ಹಾಗೂ ಕಂಪನಿಗಳೇ ಎನ್‌ಜಿಒ ಗಳನ್ನು ಸೃಷ್ಟಿಸಿ, ತಮಗೆ ಬೇಕಾದ ಏಜೆನ್ಸಿಗಳಿಗೆ ಹಣ ನೀಡುತ್ತಿರುವುದಾಗಿ ಸಾಕಷ್ಟು ದೂರುಗಳು ಬಂದಿದ್ದು, ರಸ್ತೆಗಳು ಹಾಳಾಗಿವೆ, ಮೈನ್ಸ್ ಲಾರಿಗಳ ಸಂಚಾರದಿಂದ ಮನೆಗಳಲ್ಲಿ ಧೂಳು ತುಂಬಿಕೊಂಡು ಬದುಕು ದುಸ್ತರವಾಗಿದೆ ಎಂದು ಸ್ಥಳೀಯರಿಂದ ರಸ್ತೆ ಬಂದ್ ಸಹ ಮಾಡಲಾಗಿದೆ. ಇದರ ಜೊತೆಗೆ ನೀರಿನ ಮೂಲಗಳಾದ ಕೆರೆ ಕಟ್ಟೆಗಳೂ ಕೂಡ ಮಲಿನವಾಗಿವೆ ಎಂದು ಜನರು ಅಳಲು ತೋಡಿಕೊಂಡಿದ್ದಾರೆ. ಇಲ್ಲಿನ ಸಂಪನ್ಮೂಲ ಬಳಕೆ ಮಾಡಿಕೊಂಡು, ಇಲ್ಲಿನ ಜನರಿಗೆ ಅನುಕೂಲ ಮಾಡಿಕೊಡದೆ ಅನಾನುಕೂಲವನ್ನೇ ಹೆಚ್ಚು ಮಾಡಿದರೆ ಸಹಿಸಲು ಸಾಧ್ಯವಿಲ್ಲ. ಹಾಗಾಗಿ ಗಣಿ ಕಂಪನಿಗಳು ಸ್ಥಳೀಯ ಜನರಿಗೆ ಮೂಲ ಸೌಕರ್ಯ ಒದಗಿಸುವ ಮೂಲಕ ಉತ್ತಮ ಕೆಲಸಕ್ಕೆ ಸಹಕಾರ ನೀಡಬೇಕು ಎಂದು ಹೇಳಿದರು. ಇದಕ್ಕೆ ದನಿಗೂಡಿಸಿದ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು, ಸಿಎಸ್‌ಆರ್ ನಿಧಿಯನ್ನು ಕಾರ್ಪೊರೇಟ್ ಕಂಪನಿಗಳು ತಮ್ಮ ಕಾರ್ಯಕ್ಷೇತ್ರದಲ್ಲಿನ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಹಾಗೂ ಪರಿಸರ ಸಂರಕ್ಷಣೆ ಕಾರ್ಯಗಳಿಗೆ ಕಡ್ಡಾಯವಾಗಿ ಸ್ಥಳೀಯವಾಗಿಯೇ ಖರ್ಚು ಮಾಡಬೇಕು ಎಂಬುದಾಗಿ ಸರ್ಕಾರ ಇತ್ತೀಚೆಗಷ್ಟೇ ಕಟ್ಟುನಿಟ್ಟಿನ ಸೂಚನೆ ನೀಡಿದೆ ಎಂದರು.

ಗಣಿ ಕಂಪನಿಗಳು ಜಿಲ್ಲೆಯ ಗಣಿಬಾಧಿತ ಪ್ರದೇಶಗಳಲ್ಲಿ ಶಾಲೆ, ಕಾಲೇಜು, ಅಂಗನವಾಡಿ, ಆಸ್ಪತ್ರೆ, ರಸ್ತೆಗಳು ಸೇರಿದಂತೆ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ, ಪರಿಸರ ಸಂರಕ್ಷಣೆಗೆ ಕ್ರಮ ವಹಿಸಬೇಕು ಎಂದು ಗಣಿ ಕಂಪನಿಗಳ ಪ್ರತಿನಿಧಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ ಅವರು, ಸಿ.ಎಸ್‌ಆರ್ ನಿಧಿಯಡಿಯಲ್ಲಿ ಇದುವರೆಗೂ ಯಾವ ಕಾರ್ಯಗಳಿಗೆ ಎಷ್ಟು ಖರ್ಚು ವೆಚ್ಚ ಮಾಡಲಾಗಿದೆ, ಪರಿಸರ ಸಂರಕ್ಷಣೆ ಹಾಗೂ ಸ್ಥಳಿಕರಿಗೆ ಉದ್ಯೋಗ ನೀಡಿರುವ ಬಗ್ಗೆಯೂ ಮಾಹಿತಿ ನೀಡಬೇಕು. ಇದರ ಜೊತೆಗೆ ಕಂಪನಿಗಳು ಸಿಎಸ್‌ಆರ್ ನಿಧಿಯಡಿ ಮುಂದೆ ಕೈಗೊಳ್ಳಲಾಗುವ ಕಾರ್ಯಗಳ ಕ್ರಿಯಾ ಯೋಜನೆ ಬಗ್ಗೆ ಮಾಹಿತಿ ನೀಡುವಂತೆ ಸೂಚಿಸಿದರು.

> 157 ಹಳ್ಳಿಗಳ ಸೇರ್ಪಡೆಗೆ ಪ್ರಸ್ತಾವನೆ ಜಿಲ್ಲೆಯಲ್ಲಿ ಗಣಿ ಬಾಧಿತ ಪ್ರದೇಶಗಳಲ್ಲಿ ಪೂರಕ ಅಭಿವೃದ್ಧಿ ಕಾರ್ಯಕ್ರಮಗಳನ್ನು ಡಿಎಂಎಫ್ ಹಾಗೂ ಕೆಎಂಇಆರ್‌ಸಿ ನಿಧಿಯಡಿ ಕೈಗೊಳ್ಳಲಾಗುತ್ತಿದೆ. ಜಿಲ್ಲೆಯಲ್ಲಿ ಈಗಾಗಲೆ 157 ಹಳ್ಳಿಗಳ ಪಟ್ಟಿಯನ್ನು ಮಾಡಿ, ಗಣಿಬಾಧಿತ ಪ್ರದೇಶ ವ್ಯಾಪ್ತಿಗೆ ಸೇರ್ಪಡೆಗೊಳಿಸುವ ಸಲುವಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ
–ಟಿ. ವೆಂಕಟೇಶ್, ಜಿಲ್ಲಾಧಿಕಾರಿ

ಗಣಿ ಕಂಪನಿಗಳು ಕೆಲವೆಡೆ ಅಂಗನವಾಡಿ, ಶಾಲಾ ಕಟ್ಟಡಗಳನ್ನು ನಿರ್ಮಾಣ ಮಾಡಿದ್ದಾರೆ, ಆದರೆ ಆ ಸ್ಥಳದಲ್ಲಿ ಅದರ ಅಗತ್ಯತೆ ಮತ್ತು ಉಪಯುಕ್ತತೆ ಬಗ್ಗೆ ಜಿಲ್ಲಾಡಳಿತದ ಗಮನಕ್ಕೆ ತಾರದೆ ಮಾಡಿರುವುದರಿಂದ ಕೆಲವೆಡೆ ಸಮಸ್ಯೆಯಾಗಿದೆ. ಹೀಗಾಗಿ ಕಂಪನಿಗಳು ಎಲ್ಲಿ, ಯಾವ ಕಾರ್ಯಗಳನ್ನು ಕೈಗೊಳ್ಳಬೇಕು ಎಂಬುದನ್ನು ಸಂಬಂಧಿಸಿದ ಇಲಾಖಾ ಅಧಿಕಾರಿಗಳ ಗಮನಕ್ಕೆ ತರಬೇಕು ಹಾಗೂ ಕಂಪನಿಗಳು ತಾವು ಸಿಎಸ್‌ಆರ್ ನಿಧಿಯಡಿ ಕೈಗೊಳ್ಳುವ ಕಾರ್ಯ ಚಟುವಟಿಕೆಗಳ ಬಗ್ಗೆ ಸಂಬಂಧಿಸಿದ ಕ್ಷೇತ್ರವ್ಯಾಪ್ತಿಯ ಶಾಸಕರು, ಸಂಸದರು, ಸಚಿವರುಗಳ ಗಮನಕ್ಕೆ ತರುವ ಕಾರ್ಯ ಮಾಡಬೇಕು ಎಂದು ಸೂಚನೆ ನೀಡಿದರು. 15 ಸಾವಿರ ಎಕರೆಯಷ್ಟು ಸೋಲಾರ್ ಪಾರ್ಕ್ ಇದೆ. 2016 ರಿಂದ ಸೋಲಾರ್ ಪಾರ್ಕ್‌ಗಳು ಪ್ರಾರಂಭ ಮಾಡಲಾಗಿದ್ದು, ಅಲ್ಲಿಯೂ ಕೂಡ ಸಿ.ಎಸ್.ಆರ್ ನಿಧಿ ಬಳಕೆಯಾಗಬೇಕಿದೆ. ಸುಮಾರು 36 ಕೋಟಿ ಸಿ.ಎಸ್.ಆರ್ ನಿಧಿ ಬರಬೇಕಿದ್ದು, ಅದನ್ನು ಆಯಾ ಪ್ರದೇಶ, ಊರುಗಳಲ್ಲಿ ಖರ್ಚು ಮಾಡಲು ಕ್ರಿಯಾಯೋಜನೆ ರೂಪಿಸಲಾಗುವುದು ಎಂದು ತಿಳಿಸಿದ ಅವರು, ಸಿ.ಎಸ್.ಆರ್.ನಿಧಿಯು ಹೆಚ್ಚಿನ ಜನರಿಗೆ ಉಪಯೋಗವಾಗುವ ನಿಟ್ಟಿನಲ್ಲಿ ಕ್ರಮವಹಿಸಲಾಗುವುದು ಎಂದು ಸಂಸದರು ತಿಳಿಸಿದರು. ಸಿ.ಎಸ್.ಆರ್. ನಿಧಿ ಬಳಕೆಗೆ ಮುನ್ನ ಕ್ರಿಯಾಯೋಜನೆ ರೂಪಿಸಿ, ಜಿಲ್ಲಾಧಿಕಾರಿಗಳಿಂದ ಅನುಮೋದನೆ ಪಡೆದು ನಂತರ ಸಿ.ಎಸ್.ಆರ್.ನಿಧಿ ಬಳಕೆ ಮಾಡುವುದು ಕಡ್ಡಾಯ ಎಂದು ಸಂಸದ ಗೋವಿಂದ ಎಂ ಕಾರಜೋಳ ತಿಳಿಸಿದರು. ಪ್ರಕೃತಿ ವಿಕೋಪದ ಸಂದರ್ಭದಲ್ಲಿ ಜಿಲ್ಲೆಯ ಗಣಿ ಕಂಪನಿಗಳು ನೆರವಿಗೆ ಧಾಮಿಸುವ ಮೂಲಕ ಅಗತ್ಯ ಸಹಕಾರ ನೀಡಬೇಕು. ಇತ್ತೀಚೆಗೆ ಓಬಣ್ಣನಹಳ್ಳಿ ಗ್ರಾಮದಲ್ಲಿ ಹೆಚ್ಚಿನ ಮಳೆಯಿಂದ ಜನರು ಸಂಕಷ್ಟಕ್ಕೆ ಸಿಲುಕಿದರು, ಇಂತಹ ಸಂದರ್ಭದಲ್ಲಿ ಗಣಿ ಕಂಪನಿಗಳು ವಿಶಾಲ ಮನಸ್ಸಿನಿಂದ ಮುಂದೆ ಬಂದು ಸಹಾಯ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ. ಟಿ.ಕುಮಾರಸ್ವಾಮಿ, ಗಣಿ, ಭೂ ವಿಜ್ಞಾನ ಇಲಾಖೆ ಉಪ ನಿರ್ದೇಶಕ ಡಾ.ಎಂ. ಜೆ.ಮಹೇಶ್, ಉಪ ಅರಣ್ಯ ಸಂರಕ್ಷಣಾಧಿಕಾರಿ ರಾಜಣ್ಣ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಡಿವೈಎಸ್‌ಪಿ ದಿನಕರ್, ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಎಂ ಕಾಳೇಸಿಂಘೆ ಸೇರಿದಂತೆ ಗಣಿ ಕಂಪನಿಗಳ ಪ್ರತಿನಿಧಿಗಳು ಇದ್ದರು.

ಏಕಲವ್ಯ ಶಾಲೆ ಹಾಗೂ ವಿಜ್ಞಾನ ಕೇಂದ್ರ ಮಂಜೂರಾತಿ

ಜಿಲ್ಲೆಯಲ್ಲಿ ಏಕಲವ್ಯ ಶಾಲೆ ಸ್ಥಾಪನೆಗಾಗಿ ಭಾರತ ಸರ್ಕಾರ ಪರಿಶಿಷ್ಟ ವರ್ಗಗಳ ಮಂತ್ರಾಲಯವು ಮುಂದಾಗಿದ್ದು, ಇದಕ್ಕಾಗಿ ತುರ್ತಾಗಿ 15 ಎಕರೆ ಜಮೀನು ಮಂಜೂರಾತಿ ಆದಷ್ಟು ಬೇಗ ವ್ಯವಸ್ಥೆ ಮಾಡಬೇಕು. ಇದರ ಜೊತೆಗೆ ಚಿತ್ರದುರ್ಗ ಜಿಲ್ಲಾ ಕೇಂದ್ರದಲ್ಲಿ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರವನ್ನು ಕೆಎಂಇಆರ್‌ಸಿ ನಿಧಿಯಡಿ ಸುಮಾರು 15 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುತ್ತಿದ್ದು, ಇದಕ್ಕಾಗಿ ಕನಿಷ್ಟ 2 ರಿಂದ 5 ಎಕರೆ ಜಾಗ ಗುರುತಿಸಿ, ಮಂಜೂರಾತಿ ನೀಡಲು ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರಿಗೆ ಸಂಸದ ಗೋವಿಂದ ಎಂ ಕಾರಜೋಳ ಸೂಚನೆ ನೀಡಿದರು.

ಮೂಲಭೂತ ಹಕ್ಕುಗಳು, ಕರ್ತವ್ಯಗಳ ಕುರಿತು ಕಾನೂನು ವಿದ್ಯಾ ಪ್ರಸಾರ

• ಉದಯವಾಹಿನಿ, ಕುಷ್ಟಗಿ

ಉದಯವಾಹಿನಿ ಚಿತ್ರ

ಗೌರವಾನ್ವಿತ ಸನ್ಮಾನ್ಯ ಶ್ರೀ ಮಂಜುನಾಥ. ಆರ್. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಅಧ್ಯಕ್ಷರು ತಾಲ್ಲೂಕ್ ಕಾನೂನು ಸೇವಾ ಸಮಿತಿ ಕುಷ್ಟಗಿ, ಇವರು ಕಾರ್ಯಕ್ರಮವನ್ನ ಉದ್ಘಾಟಿಸಿ ಸಮಾಜದಲ್ಲಿ ಮನುಷ್ಯನು ನಾಗರಿಕ ಜೀವನ ನಡೆಸಲು ಮೂಲಭೂತ ಹಕ್ಕುಗಳು ಅತ್ಯವಶ್ಯಕವಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು, ವಿದ್ಯಾರ್ಥಿಗಳಿಗೆ 6 ಮೂಲಭೂತ ಹಕ್ಕುಗಳು ಹಾಗೂ ಹನ್ನೊಂದು ಕರ್ತವ್ಯಗಳ ಬಗ್ಗೆ ಸವಿವರವಾಗಿ ತಿಳಿಸಿದರು.

ಶ್ರೀ ಎಸ್, ಜಿ, ಪಾಟೀಲ್ ಅಧ್ಯಕ್ಷರು, ವಕೀಲರ ಸಂಘ ಕುಷ್ಟಗಿ, ಶ್ರೀ ರಾಯನಗೌಡ ಸರ್ಕಾರಿ ಅಭಿಯೋಜಕರು ಕುಷ್ಟಗಿ, ಶ್ರೀ ಪರಸಪ್ಪ ಗುಜಮಾಗಡಿ ಶ್ರೀ ಆನಂದ್ ಡೊಳ್ಳಿನ ವಕೀಲರು ವಕೀಲರು, ಶ್ರೀ ಗೋಪಾಲ್ ರಾವ್ ವಕೀಲರ ಕುಷ್ಟಗಿ, ಹಾಗೂ ವಕೀಲರು ಉಪಸ್ಥಿತರಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀ ಶಿವಪ್ಪ. ವೈ.ಬಿ. ಉಪ ಪ್ರಾಂಶುಪಾಲರು ಬಾಲಕಿಯರ ಸರ್ಕಾರಿ ಪ್ರೌಢಶಾಲೆ ಕುಷ್ಟಗಿ ವಹಿಸಿದ್ದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಗೌರವಾನ್ವಿತ ಸನ್ಮಾನ್ಯ ಶ್ರೀ ಮಂಜುನಾಥ್ ಆರ್ ಹಿರಿಯ ಸಿವಿಲ್ ನ್ಯಾಯಾಧೀಶರು , ಮೂಲಭೂತ ಹಕ್ಕುಗಳು, ಕರ್ತವ್ಯಗಳು ಕುರಿತು ಸವಿಸ್ತಾರವಾಗಿ ಮಾಹಿತಿಯನ್ನು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಉಪ ಪ್ರಾಂಶುಪಾಲ ರು ಸಂವಿಧಾನದ ಮೂರನೇ ಭಾಗದಲ್ಲಿರುವ ಮೂಲಭೂತ ಹಕ್ಕುಗಳು ಮತ್ತು ಕರ್ತವ್ಯಗಳ ಪರಿಪಾಲನೆ ಕುರಿತು ಮಾಹಿತಿ ನೀಡಿದರು.

> ಹಕ್ಕುಗಳಿಗೆ ಚ್ಯುತಿಯಾದರೆ, ಉಚ್ಚ ನ್ಯಾಯಾ ಲಯ ಅಥವಾ ಸರ್ವೋಚ್ಚ ನ್ಯಾಯಾಲಯದ ಮೊರೆ ಹೋಗಿ ಪರಿಹಾರ ಪಡೆಯಬಹುದೆಂದು ವಿದ್ಯಾರ್ಥಿನಿಯರಿಗೆ ತಿಳಿಸಿದರು, ಶ್ರೀ ಮಾನಪ್ಪ ಹಿರೇವಂಕಲ ಕುಂಟ ಉಪ ನಿರೀಕ್ಷಕರು ಕುಷ್ಟಗಿ ರವರು ಕಾನೂನು ನಿಯಮ ಪಾಲನೆ, ಅರಿವು ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಶಾಲೆಯ ಸಕಲ ಸಿಬ್ಬಂದಿ ವರ್ಗದವರು ವಿದ್ಯಾರ್ಥಿನಿಯರು ಹಾಜರಿದ್ದು ಕಾರ್ಯಕ್ರಮ ಯಶಸ್ವಿಗೊಳಿಸಿದರು, ಕಾರ್ಯಕ್ರಮದ ನಿರೂಪಣೆಯನ್ನು ಡಾ. ಶರಣಪ್ಪ ಕಡಪ್ಪನವರ್ ಮಾಡಿದರು , ಶ್ರೀ ಸುಭಾಸ ನಿಡಸನೂರ್ ಸ.ಶಿ ರವರು ವಂದನಾರ್ಪಣೆ ಮಾಡಿದರು.

ಬಿಜೆಪಿ ಬೆಂಬಲಿಸದಿದ್ದರೂ ಜೆಡಿಎಸ್‌ಗೆ ಅಧಿಕಾರ

• ಉದಯವಾಹಿನಿ, ಸಕಲೇಶಪುರ

ಇಲ್ಲಿಯ ಪುರಸಭೆ ಅಧ್ಯಕ್ಷರಾಗಿ ಜೆಡಿಎಸ್‌ನ ಜ್ಯೋತಿ ರಾಜ್ ಕುಮಾರ್ ಹಾಗೂ ಉಪಾಧ್ಯಕ್ಷರಾಗಿ ಝರೀನಾ ಜಾಕೀರ್ ಹುಸೇನ್ ಸೋಮವಾರ ಚುನಾಯಿತರಾದರು.ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನ ಸಾಮಾನ್ಯ ಮಹಿಳೆ ಗೆ ಮೀಸಲಾಗಿತ್ತು. ಅಧ್ಯಕ್ಷ ಸ್ಥಾನಕ್ಕೆ ಜೆಡಿಎಸ್‌ನಿಂದ ಜ್ಯೋತಿ ರಾಜ್‌ಕುಮಾರ್, ಉಪಾಧ್ಯಕ್ಷ ಸ್ಥಾನಕ್ಕೆ ಝರೀನಾ ಹಾಗೂ ಕಾಂಗ್ರೇಸ್‌ನಿಂದ ಅಧ್ಯಕ್ಷ ಸ್ಥಾನಕ್ಕೆ ಅನ್ನಪೂರ್ಣ, ಉಪಾಧ್ಯಕ್ಷ ಸ್ಥಾನಕ್ಕೆ ರೇಶ್ಮಾ ಬಾನು ಸ್ಪರ್ಧಿಸಿದ್ದರು.

23 ಸದಸ್ಯರಲ್ಲಿ 3 ಸದಸ್ಯರು ಗೈರು ಹಾಜರಾಗಿದ್ದರು. ಉಳಿದ 20 ಸದಸ್ಯರಲ್ಲಿ ಜೆಡಿಎಸ್‌ನ ಅಭ್ಯರ್ಥಿಗಳಿಗೆ ತಲಾ 15 ಮತಗಳು ಬಂದರೆ, ಕಾಂಗ್ರೇಸ್‌ನ ಅಧ್ಯಕ್ಷ, ಉಪಾಧ್ಯಕ್ಷ ಆಕಾಂಕ್ಷಿಗಳು ತಲಾ 5 ಮತಗಳನ್ನು ಪಡೆದರು. ತಹಶೀಲ್ದಾರ್ ಜಿ. ಮೇಘನಾ ಚುನಾವಣಾ ಅಧಿಕಾರಿಯಾಗಿದ್ದರು. ವಿಜಯೋತ್ಸವದಲ್ಲಿ ಭಾಗವಹಿಸಿದ್ದ ಮಾಜಿ ಸಚಿವ ಎಚ್.ಕೆ.ಕುಮಾರಸ್ವಾಮಿ ಮಾತನಾಡಿ, 16 ತಿಂಗಳಿನಿಂದ ಪುರಸಭೆಗೆ ಚುನಾಯಿತರಾದ ಸದಸ್ಯರಿಗೆ ಅಧಿಕಾರವೇ ಇಲ್ಲವಾಗಿತ್ತು. ಆಡಳಿತ ಅಧಿಕಾರಿಗಳೇ ಪುರಸಭೆ ಆಡಳಿತ ನಡೆಸಿದ ವ್ಯವಸ್ಥೆ ಪ್ರಜಾಪ್ರಭುತ್ವವನ್ನು ಪ್ರಶ್ನೆ ಮಾಡುವಂತಾಗಿದೆ. ಇದರಿಂದಾಗಿ ಪುರಸಭೆ ಆಡಳಿತಕ್ಕೆ ಹಿನ್ನಡೆಯಾಗಿ, ಸಾರ್ವಜನಿಕರಿಗೆ ಸಮಸ್ಯೆ ಆಗಿತ್ತು ಎಂದರು.

ಮೈತ್ರಿ ಪಾಲಿಸದ ಬಿಜೆಪಿ

ರಾಜ್ಯದಲ್ಲಿ ಜೆಡಿಎಸ್ ಹಾಗೂ ಬಿಜೆಪಿ ಮೈತ್ರಿ ಮಾಡಿಕೊಂಡಿದ್ದರೂ ಸಹ ಪುರಸಭಾ ಚುನಾವಣೆಯಲ್ಲಿ ಶಾಸಕ ಸಿಮೆಂಟ್ ಮಂಜು ಹಾಗೂ ಬಿಜೆಪಿ ಸದಸ್ಯರು ಚುನಾವಣೆಗೆ ಗೈರು ಹಾಜರಾಗುವ ಮೂಲಕ ಮೈತ್ರಿ ಪಾಲನೆಯಿಂದ ದೂರ ಉಳಿಯುವ ಮೂಲಕ ಚರ್ಚೆಗೆ ವೇದಿಕೆ ಮಾಡಿಕೊಟ್ಟಿದ್ದಾರೆ.

ಅರಣ್ಯ-ಕಂದಾಯ ಬಿಡಿಸಲಾಗದ ಕಗ್ಗಂಟು

• ಉದಯವಾಹಿನಿ, ಚಿಕ್ಕಮಗಳೂರು

ಊರು ಅದೇ, ಅರಣ್ಯವೂ ಅದೇ, ಕಂದಾಯ ಭೂಮಿಯೂ ಅದೇ, ಪರಿಭಾವಿತ ಅರಣ್ಯವೂ ಅದೆ... ಒಂದೇ ಜಾಗ ಆರು ರೀತಿಯ ದಾಖಲೆಗಳು ಸೃಷ್ಟಿ...ಇದು ಜಿಲ್ಲೆಯ ಅರಣ್ಯ ಮತ್ತು ಕಂದಾಯ ಭೂಮಿಯ ಗೊಂದಲದ ಪರಿ. ಜಿಲ್ಲೆಯಲ್ಲಿನ ಅರಣ್ಯ ಮತ್ತು ಕಂದಾಯ ಭೂಮಿ ಗೊಂದಲ ಬಿಡಿಸಲಾಗದ ಕಗ್ಗಂಟಾಗಿದೆ. ಒಂದೇ ಸರ್ವೆ ನಂಬರ್, ಒಂದೇ ಜಾಗ ಆರು ರೀತಿಯ ದಾಖಲೆಗಳು ಸೃಷ್ಟಿಯಾವೆ. ಈ ಗೊಂದಲ ಬಿಡಿಸುವ ಹರಸಾಹಸದ ಕೆಲಸಕ್ಕೆ ಜಿಲ್ಲಾಡಳಿತ ಕೈಹಾಕಿದೆ.

ಅರಣ್ಯ ಮತ್ತು ಕಂದಾಯ ಭೂಮಿ ಗೊಂದಲ ಪರಿಹಾರಕ್ಕೆ ಜಂಟಿ ಸರ್ವೆ ಕಾರ್ಯವನ್ನು ಅರಣ್ಯ ಇಲಾಖೆ ಅಧಿಕಾರಿಗಳು ಆರಂಭಿಸಿದ್ದಾರೆ. ಸರ್ವೆ ನಂಬರ್ ಆಧರಿಸಿ ಪರಿಶೀಲನೆ ಆರಂಭಿಸಿದಾಗ ಗೊಂದಲಗಳ ಸರಮಾಲೆಯೇ ಅಧಿಕಾರಿಗಳ ಮುಂದೆ ತೆರೆದುಕೊಂಡಿದೆ. ಉದಾಹರಣೆಗೆ ಒಂದು ನಿರ್ದಿಷ್ಟ ಸರ್ವೆ ನಂಬರ್‌ನಲ್ಲಿ 500 ಎಕರೆ ಜಾಗವಿದ್ದರೆ ಅದಕ್ಕೆ ಐದಾರು ರೀತಿಯ ದಾಖಲೆಗಳು ಸೃಷ್ಟಿಯಾಗಿವೆ.

ಜಾಗ ಇರುವುದೇ 500 ಎಕರೆಯಾದರೆ ಅಷ್ಟನ್ನೂ ಒಮ್ಮೆ ಮೀಸಲು ಅರಣ್ಯ, ಮತ್ತೊಮ್ಮೆ ಜಿಲ್ಲಾ ಅರಣ್ಯ, ಮಗದೊಮ್ಮೆ ಪರಿಭಾವಿತ ಅರಣ್ಯ, ಇನ್ನೊಮ್ಮೆ ಜಿಲ್ಲಾಧಿಕಾರಿ ಕಾಯ್ದಿರಿಸಿದ ಅರಣ್ಯ, ಮತ್ತೊಂದು ಬಾರಿ ಕಿರು ಅರಣ್ಯ, ಇನ್ನೊಂದು ಬಾರಿ ಅರಣ್ಯ ಇಲಾಖೆ ಸ್ವಾಧೀನಕ್ಕೆ ಸೆಕ್ಷನ್ 4 ಪ್ರಕ್ರಿಯೆ ಆರಂಭಿಸಿರುವ ಜಾಗ ಎಂಬುದಾಗಿ ದಾಖಲೆಗಳು ಸೃಷ್ಟಿಯಾಗಿವೆ.

ದೇವರ ಹೆಸರಲ್ಲಿ ಸಮಾಜದ ಸುಲಿಗೆ: ಸಂಜಯ ಮಾಕಲ

• ಉದಯವಾಹಿನಿ, ಶಹಾಪುರ

ಉದಯವಾಹಿನಿ ಚಿತ್ರ

ವೇದಗಳ ಮೂಲಕ ಸಮಾಜದಲ್ಲಿ ಹಲವು ಕಟ್ಟುಪಾಡು, ಕಂದಾಚಾರ, ಮೌಢ್ಯಗಳು ಹುಟ್ಟಿಕೊಂಡವು. ಕರ್ಮಗಳ ಅನುಸಾರ ಬ್ರಾಹ್ಮಣ, ಕ್ಷತ್ರಿಯ, ವೈಶ್ಯ, ಶೂದ್ರ ಎಂಬ ವರ್ಣಾಶ್ರಮ ರೂಪುಗೊಂಡಿತು. ದೇವರ ಹೆಸರಲ್ಲಿ ಸಮಾಜದಲ್ಲಿ ಸುಲಿಗೆ ಆರಂಭವಾಯಿತು. ಇಂತಹ ನಿಲುವುಗಳನ್ನು ಎಲ್ಲರೂ ಖಂಡಿಸಬೇಕಿದೆ' ಎಂದು ಕಲಬುರಗಿಯ ಬಸವ ತತ್ವಪ್ರಸಾರಕ ಪ್ರೊ.ಸಂಜಯ ಮಾಕಲ ತಿಳಿಸಿದರು.

ನಗರದಲ್ಲಿ ಬಸವ ಮಾರ್ಗ ಪ್ರತಿಷ್ಠಾನದ ಆಶ್ರಯದಲ್ಲಿ ಭಾನುವಾರ ನಡೆದ ಬಸವ ಬೆಳಕು-118 ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪಟ್ಟಭದ್ರರ ಹಿತಾಸಕ್ತಿಯನ್ನು ಸಂಪೂರ್ಣ ಅರಿತಿದ್ದ ಬಸವಣ್ಣನವರು, ಅವರೆಲ್ಲರ ಮೂಲ ಆಶಯವನ್ನು ಸಮಾಜದ ಎದುರು ಬಯಲುಗೊಳಿಸಿದರು. ದೇವರು, ಧರ್ಮಗಳು ಮನುಷ್ಯನ ಅಭ್ಯುದಯಕ್ಕಾಗಿ ಇದೆಯೇ ಹೊರತು ಆತನನ್ನು ಭಯಪಡಿಸುವುದಕ್ಕಲ್ಲ ಎಂಬ ಸತ್ಯವನ್ನು ಮೊದಲು ಗಟ್ಟ

ದಿನ ಭವಿಷ್ಯ

ರಾಹುಕಾಲ	ಮಧ್ಯಾಹ್ನ	12:00 ರಿಂದ 01:30
ಗುಳಿಕ ಕಾಲ	ಬೆಳಿಗ್ಗೆ	10:30 ರಿಂದ 12:00
ಯಮಗಂಡ ಕಾಲ	ಬೆಳಿಗ್ಗೆ	07:30 ರಿಂದ 09:00

ಮೇಷ – ನಿಮ್ಮ ಸಕಾಲಿಕ ಸಹಾಯ ಯಾರಾದರೊಬ್ಬರ ದೌರ್ಭಾಗ್ಯವನ್ನು ನಿವಾರಿಸುತ್ತದೆ. ಇಂದು ನಿಮ್ಮ ಪ್ರೇಮಿಯನ್ನು ನಿರಾಸೆಗೊಳಿಸಬೇಡಿ ? ಇದು ನಂತರ ನಿಮ್ಮನ್ನು ಪಶ್ಚಾತ್ತಾಪಗೊಳ್ಳುವಂತೆ ಮಾಡುತ್ತದೆ.

ವೃಷಭ – ನಿಮ್ಮ ಮಕ್ಕಳ ಸಮಸ್ಯೆಗಳನ್ನು ನಿಭಾಯಿಸಲು ಸ್ವಲ್ಪ ಸಮಯ ತೆಗೆದುಕೊಳ್ಳಿ. ಪ್ರಣಯ ರೋಮಾಂಚಕಾರಿಯಾಗಿರುತ್ತದೆ ಆದ್ದರಿಂದ ನೀವು ಪ್ರೀತಿಸುವವರನ್ನು ಸಂಪರ್ಕಿಸಿ ಮತ್ತು ದಿನದ ಅತ್ಯುತ್ತಮ ಲಾಭ ಪಡೆಯಿರಿ.

ಮಿಥುನ – . ಇಂದು ನೀವು ನಿಮ್ಮ ಉಚಿತ ಸಮಯವನ್ನು ನಿಮ್ಮ ತಾಯಿಯ ಸೇವೆಯಲ್ಲಿ ಕಳೆಯಲು ಬಯಸುವಿರಿ ಆದರೆ ಅದೇ ತಕ್ಷಣದಲ್ಲಿ ಯಾವುದೇ ಕೆಲಸ ಬರುವುದರಿಂದ ಹಾಗೆ ಮಾಡಲು ಸಾಧ್ಯವಾಗುವುದಿಲ್ಲ.

ಕರ್ಕಾಟಕ – ಕೆಲವು ಅನಿವಾರ್ಯ ಸಂದರ್ಭಗಳು ನಿಮಗೆ ಅಹಿತಕರವೆನಿಸಬಹುದು. ಆದರೆ ನೀವು ನಿಮ್ಮ ಸಮತೋಲನ ಕಾಯ್ದುಕೊಳ್ಳಬೇಕು ಮತ್ತು ಪರಿಸ್ಥಿತಿಯನ್ನು ನಿಭಾಯಿಸಲು ತಕ್ಷಣವೇ ಪ್ರತಿಕ್ರಿಯಿಸಬಾರದು.

ಸಿಂಹ – ಮಕ್ಕಳ ಸಂಗದಲ್ಲಿ ಶಾಂತಿ ಪಡೆಯಿರಿ. ನಿಮ್ಮ ಸ್ವಂತದ್ದಷ್ಟೇ ಅಲ್ಲದೇ ಬೇರೆಯವರ ಮಕ್ಕಳ ಚಿಕಿತ್ಸಕ ಶಕ್ತಿಗಳೂ ನಿಮಗೆ ಸಾಂತ್ವನ ನೀಡಬಹುದು ಮತ್ತು ನಿಮ್ಮ ಆತಂಕವನ್ನು ಶಮನಗೊಳಿಸಬಹುದು.

ಕನ್ಯಾ – ಹೊರಸ್ಥಳಕ್ಕೆ ಪ್ರಯಾಣ ಆರಾಮದಾಯಕವಾಗಿರುವುದಿಲ್ಲ–ಆದರೆ ಇದು ಪ್ರಮುಖ ಸಂಪರ್ಕಗಳನ್ನು ನಿರ್ಮಿಸಲು ಸಹಾಯ ಮಾಡುತ್ತದೆ. ನಿಮ್ಮ ಸಂಗಾತಿಯ ಜೊತೆಗಿನ ದೈಹಿಕ ಸಾಮೀಪ್ಯತೆ ಅತ್ಯುತ್ತಮವಾಗಿರುತ್ತದೆ.

ತುಲಾ – ನಿಮ್ಮ ವಿಶ್ವಾಸ ಮತ್ತು ಚೈತನ್ಯ ಇಂದು ಅಧಿಕವಾಗಿರುತ್ತದೆ. ದೀರ್ಘ ಕಾಲದವರೆಗೆ ಆರ್ಥಿಕ ಬಿಕ್ಕಟ್ಟಿನಲ್ಲಿ ಸಿಲುಕಿದ್ದವರು, ಅವರು ಇಂದು ಎಲ್ಲಿಂದಲಾದರೂ ಹಣವನ್ನು ಪಡೆಯಬಹುದು.

ವೃಶ್ಚಿಕ – ರಕ್ತದೊತ್ತಡವಿರುವ ರೋಗಿಗಳು ತಮ್ಮ ರಕ್ತದೊತ್ತಡ ಕಡಿಮೆ ಮಾಡಲು ಮತ್ತು ಕೊಲೆಸ್ಟರಾಲ್ ನಿಯಂತ್ರಣದಲ್ಲಿರಿಸಲು ಕೆಂಪು ವೈನ್ ತೆಗೆದುಕೊಳ್ಳಬಹುದು. ಇದು ಅವರಿಗೆ ಮತ್ತಷ್ಟು ವಿಶ್ರಾಂತಿ ತರುತ್ತದೆ.

ಧನಸ್ಸು – ನಿಮ್ಮ ಮನೆಯ ವಾತಾವರಣವನ್ನು ಬದಲಾಯಿಸುವ ಮೊದಲು ಅದಕ್ಕೆ ಎಲ್ಲರ ಅನುಮೋದನೆಯಿದೆಯೆಂದು ಖಾತ್ರಿಪಡಿಸಿಕೊಳ್ಳಿ. ಸ್ವಲ್ಪ ಪ್ರೀತಿ ಹಂಚಿಕೊಂಡಲ್ಲಿ ನಿಮ್ಮ ಪ್ರಿಯತಮೆ ನಿಮ್ಮ ದೇವತೆಯಾಗುತ್ತಾಳೆ.

ಮಕರ – ಇಂದು ಶಾಂತವಾಗಿ ಒತ್ತಡ ಮುಕ್ತವಾಗಿರಿ. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು.

ಕುಂಭ – ಮಕ್ಕಳಲ್ಲಿ ನಿಮಗೆ ರೋಮಾಂಚಕ ಸುದ್ದಿ ತರಬಹುದು. ನಿಮ್ಮ ಸಂಗಾತಿಯ ಮೇಲೆ ಭಾವನಾತ್ಮಕ ಬೆದರಿಕೆಯನ್ನು ಬಳಸಬಾರದು. ಹೊಸ ಉದ್ಯಮವನ್ನು ಆರಂಭಿಸಲು ಪವಿತ್ರವಾದ ದಿನ.

ಮೀನ – ಇಂದು ನೀವು ಭೂಮಿ, ವಸತಿ, ಅಥವಾ ಸಾಂಸ್ಕೃತಿಕ ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಗಮನ ನೀಡಬೇಕು. ಆರೋಗ್ಯ ಚೆನ್ನಾಗಿಲ್ಲದ ಒಬ್ಬ ಸಂಬಂಧಿಯನ್ನು ಭೇಟಿ ಮಾಡಿ. ಪ್ರೀತಿಗಾಗಿ ವಿಶೇಷ ದಿನ.



ಉದಯವಾಹಿನಿ ಚಿತ್ರ

ಚಿತ್ತಾಪುರ ಪಟ್ಟಣದ ತಹಸೀಲ್ ಕಚೇರಿಯಲ್ಲಿ ತಾಲ್ಲೂಕು ಆಡಳಿತವತಿಯಿಂದ ಸೋಮವಾರ ಹಮ್ಮಿಕೊಂಡಿರುವ ಶ್ರೀಕೃಷ್ಣ ಜನ್ಮಾಷ್ಟಮಿ ನಿಮಿತ್ತ ಶ್ರೀಕೃಷ್ಣನ ಭಾವಚಿತ್ರಕ್ಕೆ ತಹಶೀಲ್ದಾರ್ ಅಮರೇಶ ಬಿರಾದಾರ ಪೂಜೆ ಸಲ್ಲಿಸಿದರು. ಗ್ರೇಡ್- 2 ತಹಶೀಲ್ದಾರ್ ರಾಜಕುಮಾರ ಮರತೂರಕರ್, ಪುರಸಭೆ ಮುಖ್ಯಾಧಿಕಾರಿ ಮನೋಜಕುಮಾರ ಗುರಿಕಾರ, ಯಾದವ ಸಮಾಜದ ತಾಲ್ಲೂಕು ಅಧ್ಯಕ್ಷ ಸತ್ಯನಾರಾಯಣ ಯಾದವ, ಪ್ರಮುಖರಾದ ಧನರಾಜ ಯಾದವ, ಹಣಮಂತಪ್ಪ ಯಾದವ, ಜಗದೀಶ ಚವ್ಹಾಣ, ಶಿರಸ್ತೆದಾರ ಅಶ್ವಥನಾರಾಯಣ ಕುಲಕರ್ಣಿ, ಲಕ್ಷ್ಮೀನಾರಾಯಣ, ಸುನೀಲ್‌ಕುಮಾರ ಯನಗುಂಟಿಕರ್, ಮಧುಸೂಧನ ಘಾಳೆ, ನಾಗರಾಜ, ವಸಂತರಾಜ್, ಮೈನೋದ್ದಿನ ಸೇರಿದಂತೆ ಇನ್ನಿತರರಿದ್ದರು.

ನಡೆಯದ ಜೆಡಿಎಸ್-ಬಿಜೆಪಿ ಮೈತ್ರಿ: ಕಾಂಗ್ರೇಸ್‌ಗೆ ಒಲಿದ ಅಧ್ಯಕ್ಷ ಸ್ಥಾನ

ಪಟ್ಟಣ ಪಂಚಾಯಿತಿಯಲ್ಲಿ ಕೇವಲ ಒಂದು ಸ್ಥಾನ ಹೊಂದಿದ್ದರೂ ಕಾಂಗ್ರೇಸ್ ಅಧ್ಯಕ್ಷ ಸ್ಥಾನ ಪಡೆಯುವಲ್ಲಿ ಯಶಸ್ವಿ

• ಉದಯವಾಹಿನಿ ಆಲೂರು

ಪಟ್ಟಣ ಪಂಚಾಯಿತಿಯಲ್ಲಿ ಕೇವಲ ಒಂದು ಸ್ಥಾನ ಹೊಂದಿದ್ದರೂ ಕಾಂಗ್ರೇಸ್ ಅಧ್ಯಕ್ಷ ಸ್ಥಾನ ಪಡೆಯುವಲ್ಲಿ ಯಶಸ್ವಿಯಾಗಿದ್ದು, ಬಿಜೆಪಿ-ಜೆಡಿಎಸ್ ಮೈತ್ರಿಗೆ ಮತ್ತೊಮ್ಮೆ ಮುಖಭಂಗ ಉಂಟಾಗಿದೆ. ನಡೆದ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆಯಲ್ಲಿ ಕಾಂಗ್ರೇಸ್ ಪಕ್ಷದ ಸದಸ್ಯೆ ತಾಹೇರಾಬೇಗಂ ಸರ್ವರ್ ಪಾಷಾ ಅಧ್ಯಕ್ಷರಾಗಿ ಆಯ್ಕೆಯಾಗಿದ್ದು, ಜೆಡಿಎಸ್‌ನ ಜಯಮ್ಮ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು.

ಪಟ್ಟಣ ಪಂಚಾಯಿತಿಯಲ್ಲಿ 11 ಸದಸ್ಯರಿದ್ದು, ಜೆಡಿಎಸ್‌ನ ಒಬ್ಬ ಸದಸ್ಯರು ನಿಧನರಾಗಿದ್ದಾರೆ. ತಾಹೇರಾಬೇಗಂ ಕಾಂಗ್ರೇಸ್ ಪಕ್ಷದ ಏಕೈಕ ಸದಸ್ಯೆಯಾಗಿದ್ದಾರೆ. ಉಳಿದಂತೆ 4 ಜೆಡಿಎಸ್, 2 ಬಿಜೆಪಿ ಮತ್ತು 3 ಪಕ್ಷೇತರ ಸದಸ್ಯರು ಹಾಜರಾಗಿದ್ದರು.

> ಮೈತ್ರಿಯಂತೆ 4 ಜೆಡಿಎಸ್ 2 ಬಿಜೆಪಿ ಮತ್ತು ಶಾಸಕರು ಸೇರಿದ್ದರೆ ಮೈತ್ರಿಗೆ ಗೆಲುವು ಆಗುತ್ತಿತ್ತು. ಶಾಸಕರು ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಲಿಲ್ಲ. ಇದರಿಂದ ಸೋಲು ಉಂಟಾಯಿತು. -ಸಿಮೆಂಟ್ ಮಂಜು, ಶಾಸಕ ಜೆಡಿಎಸ್ ಸದಸ್ಯರೊಬ್ಬರು ಪಕ್ಷದಿಂದ ಹೊರ ಹೋಗಿ ಕಾಂಗ್ರೇಸ್ ಪಕ್ಷವನ್ನು ಬೆಂಬಲಿಸಿದ್ದರು. ಹೀಗಾಗಿ ನಾನು ಚುನಾವಣೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಅವಶ್ಯಕತೆ ಇರಲಿಲ್ಲ.
> –ಕೆ.ಎಸ್. ಮಂಜೇಗೌಡ, ಜೆಡಿಎಸ್ ತಾಲ್ಲೂಕು ಘಟಕದ ಅಧ್ಯಕ್ಷ

ಆದರೆ ಪಕ್ಷೇತರ ಸದಸ್ಯ ತೌಫಿಕ್ ತಟಸ್ಥವಾಗಿದ್ದರು.

ಉದಯವಾಹಿನಿ ಚಿತ್ರ

> ಬಿಜೆಪಿ ವತಿಯಿಂದ ಇಬ್ಬರು ಪುರುಷ ಸದಸ್ಯರು ಮಾತ್ರ ಇದ್ದರು. ಮಹಿಳಾ ಸದಸ್ಯರು ಇರಲಿಲ್ಲ. ಆದರೂ ಇವರಿಗೆ ಎನ್.ಡಿ.ಎ ಬೆಂಬಲಿಸುವಂತೆ ಸೂಚನೆ ನೀಡಲಾಗಿತ್ತು. ಆದರೆ, ಜೆಡಿಎಸ್ ಸದಸ್ಯೆಯೊಬ್ಬರು ಕಾಂಗ್ರೇಸ್ ಬೆಂಬಲಿಸಿದರು
> –ಸಿಮೆಂಟ್ ಮಂಜುನಾಥ, ಶಾಸಕ

ಅಧ್ಯಕ್ಷ ಸ್ಥಾನಕ್ಕೆ ತಾಹೇರಾಬೇಗಂ ಮತ್ತು 10ನೇ ವಾರ್ಡಿನ ಜೆಡಿಎಸ್ ಸದಸ್ಯೆ ಬಿ.ಪಿ. ರಾಣಿ ನಾಮಪತ್ರ ಸಲ್ಲಿಸಿದ್ದರು.

ತಾಹೇರಾಬೇಗಂ ಅವರಿಗೆ ಸಂಸದ ಶ್ರೇಯಸ್ ಪಟೇಲ್ ಸೇರಿದಂತೆ ಇಬ್ಬರು ಬಿಜೆಪಿ, ಇಬ್ಬರು ಪಕ್ಷೇತರರು ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದ ಜೆಡಿಎಸ್‌ನ ಜಯಮ್ಮ ಸೇರಿದಂತೆ ಏಳು ಮತಗಳು ಲಭ್ಯವಾದವು. ಹೀಗಾಗಿ ತಾಹೀರಾ ಬೇಗಂ ಅಧ್ಯಕ್ಷರಾಗಿ ಆಯ್ಕೆಯಾದರು

ತಹಶೀಲ್ದಾರ್ ಸಿ.ಪಿ. ನಂದಕುಮಾರ್ ಚುನಾವಣಾಧಿಕಾರಿಯಾಗಿ ಕಾರ್ಯ ನಿರ್ವಹಿಸಿದರು. ಪೊಲೀಸ್ ಇನ್ಸ್‌ಪೆಕ್ಟರ್ ಗಂಗಾಧರ್ ನೇತೃತ್ವದಲ್ಲಿ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು.

ಮೈತ್ರಿಗೆ ಮತ್ತೊಮ್ಮೆ ಮುಖಭಂಗ

ಕಾಂಗ್ರೇಸ್ ತಾಲ್ಲೂಕು ಘಟಕದ ಅಧ್ಯಕ್ಷ ಎಸ್. ಎಸ್. ಶಿವಮೂರ್ತಿ, ಕಸಬಾ ಸೊಸೈಟಿ ಅಧ್ಯಕ್ಷ ಶಾಂತಕೃಷ್ಣ, ಮುಖಂಡರಾದ ಜಿ.ಆರ್. ರಂಗ ನಾಥ್, ಮುರಳಿ ಮೋಹನ್, ಎಚ್.ಪಿ. ಮೋಹನ್, ರಂಗಯ್ಯ ಸೇರಿದಂತೆ ಕಾಂಗ್ರೇಸ್ ಮುಖಂಡರು ಮತ್ತು ಬೆಂಬಲಿಗರು ನೂತನ ಅಧ್ಯಕ್ಷ, ಉಪಾಧ್ಯಕ್ಷರನ್ನು ಅಭಿನಂದಿಸಿ ಪಟಾಕಿ ಸಿಡಿಸಿ ಸಂಭ್ರಮಿಸಿದರು.

ಜೆಡಿಎಸ್ ಪಕ್ಷದಿಂದ ವಿಪ್ ಜಾರಿ ಮಾಡಿದ್ದರೂ ಸದಸ್ಯೆ ಜಯಮ್ಮ ವಿಪ್ ಉಲ್ಲಂಘಿಸಿ ಮತದಾನ ಮಾಡಿದ್ದಾರೆ. ಅವರ ವಿರುದ್ಧ ಕಾನೂನು ಹೋರಾಟ ಮಾಡಲಾಗುವುದು' ಎಂದು ಜೆಡಿಎಸ್ ತಾಲ್ಲೂಕು ಘಟಕದ ಅಧ್ಯಕ್ಷ ಕೆ.ಎಸ್.ಮಂಜೇಗೌಡ ತಿಳಿಸಿದ್ದಾರೆ.

ವಿದ್ಯುತ್ ಅವಘಡ ತಪ್ಪಿಸುವುದಕ್ಕಾಗಿ ಮರ ಕಡಿಸಲಾಗಿದೆ: ವಲಯ ಅರಣ್ಯ ಅಧಿಕಾರಿ

• ಉದಯವಾಹಿನಿಯ, ಅರಸೀಕೆರೆ

ಅರಸೀಕೆರೆ ನಗರದ ಕೆಲವು ಸಂಘ ಸಂಸ್ಥೆಗಳ ಮುಖಂಡರು ಕಚೇರಿ ಆವರಣದಲ್ಲಿರುವ ಮರದ ಕೊಂಬೆಗಳು ವಿದ್ಯುತ್ ಕಂಬಕ್ಕೆ ಸ್ಪರ್ಶಿಸುತ್ತಿದ್ದು ಇದರಿಂದ ಅವ ಘಡ ಸಂಭವಿಸುವ ಪರಿಸ್ಥಿತಿ ಎದುರಾಗಿದೆ ಆದ್ದರಿಂದ ಮರದ ಕೊಂಬೆಗಳನ್ನು ಕತ್ತರಿಸಬೇಕಾಗಿ ಅರಣ್ಯ ಇಲಾಖೆ ಕಚೇರಿಗೆ ತಿಳಿಸಿದ್ದರ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆ ಕಚೇರಿ, ಆವರಣದಲ್ಲಿರುವ ಮರದ ಕೊಂಬೆಗಳನ್ನು ಕಳಿಸಲಾಗಿದೆಯೇ ಹೊರತು ಇದರಲ್ಲಿ ಕಚೇರಿಸಿಬ್ಬಂದಿಗಳ ಯಾವ ಬೇಜವಾಬ್ದಾರಿ ಇರುವುದಿಲ್ಲ ಎಂದು ಅರಸೀಕೆರೆ ವಲಯ ಅರಣ್ಯ ಅಧಿಕಾರಿಗಳಾದ ಕೆಎನ್ ಹೇಮಂತ್ ತಿಳಿಸಿದರು.

ಉದಯವಾಹಿನಿ ಚಿತ್ರ

ಉದಯವಾಹಿನಿ ಪತ್ರಿಕೆಯಲ್ಲಿ ಪ್ರಸಾರವಾಗಿದ್ದ ವರದಿಯ ವಿಚಾರವಾಗಿ ತಿಳಿಸಿದ ಹೇಮಂತ್‌ರವರು ಸಸಿ ನಡೆಸುವ ವಿಚಾರವಾಗಿ ಸಂಘ ಸಂಸ್ಥೆಗಳು ಪರಿಸರ ಪ್ರೇಮಿಗಳು ಮುಂದೆ ಬಂದಲ್ಲಿ ಉಚಿತವಾಗಿ ಸಸಿಗಳನ್ನು ಸಹ ಇಲಾಖೆ ವತಿಯಿಂದ ಕೊಡಿಸಲಾಗುವುದು ಎಂದು ವಲಯ ಅರಣ್ಯಾಧಿಕಾರಿಗಳಾದ ಹೇಮಂತ್ ತಿಳಿಸಿದರು.

ಅರಣ್ಯ ಇಲಾಖೆಯ ಆವರಣದಲ್ಲಿ ಮರ ಕಡಿದ ಸಿಬ್ಬಂದಿಗಳು

• ಉದಯವಾಹಿನಿ ಅರಸೀಕೆರೆ

ಅರಸೀಕೆರೆ ಬಸ್ ಸ್ಟ್ಯಾಂಡ್ ಪಕ್ಕದಲ್ಲಿರುವ ಅರಣ್ಯ ಇಲಾಖೆ ಕಛೇರಿ ಆವರಣದಲ್ಲಿ ಇರುವ ದೊಡ್ಡ ಮಟ್ಟದ ಮರ ಒಂದನ್ನು ಕಡಿದಿದ್ದು ಸಾರ್ವಜನಿಕರು ಮತ್ತು ಪರಿಸರ ಪ್ರೇಮಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ

ಅರಣ್ಯ ಇಲಾಖೆ, ಆವರಣದಲ್ಲಿಯೇ ಮರ ಕಡಿದಿರುವ ಘಟನೆ ನಡೆದಿದ್ದು ಇಲಾಖೆ ಅಧಿಕಾರಿಗಳು ಸಸಿಗಳನ್ನು ಬೆಳೆಸುವ ಪರಿ ಹೇಗಿರಬಹುದು ಮರವನ್ನು ಮತ್ತೆ ಬೆಳೆಯದಂತೆ ಕತ್ತರಿಸಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಗುರಿಯಾಗಿದೆ ಮರಗಿಡಗಳನ್ನು ಬೆಳೆಸಿ ಅರಣ್ಯವನ್ನು ಪ್ರೋತ್ಸಾಹಿಸುವ ಇಲಾಖೆ ಸಿಬ್ಬಂದಿಗಳೇ ಈ ರೀತಿಯ ಅವಮಾನೀಯವಾಗಿ ವರ್ತಿಸಿದ್ದಾರೆಂದು ಸಾರ್ವಜನಿಕರು ಪ್ರಶ್ನಿಸುತ್ತಿದ್ದಾರೆ.

ಇದಲ್ಲದೆ ಅರಣೀಕರಣ ಯೋಜನೆಗಳಲ್ಲಿ ಸಸಿಗಳನ್ನು ವಿತರಿಸುವುದು ಮತ್ತು ಸಸಿಗಳನ್ನು ಬೆಳೆಸುವಲ್ಲಿ ಭಾರಿ ಮಟ್ಟದ ಅಕ್ರಮ ನಡೆದಿರಬಹುದು ಎಂದು ಕೆಲವರು ಆರೋಪ ವ್ಯಕ್ತಪಡಿಸಿದ್ದಾರೆ. ಒಂದೇ ಜಾಗದಲ್ಲಿ ಅರ

ಉದಯವಾಹಿನಿ ಚಿತ್ರ

ನರಲೋಕದ ಜನಕೆ ದೃಷ್ಟಿ ಹೆಚ್ಚಿತಲೇ: ಪ್ರಸಿದ್ಧ ಆನೆಕೊಂಡ ಬಸವೇಶ್ವರ ದೇವರ ಕಾರ್ಣಿಕ ನುಡಿ

• ಉದಯವಾಹಿನಿ ದಾವಣಗೆರೆ

ನರ ಲೋಕದ ಜನಕೆ ದೃಷ್ಟಿ ಹೆಚ್ಚಿತಲೇ ಎಂಬುದಾಗಿ ದಾವಣಗೆರೆಯ ಆನೆಕೊಂಡ ಬಸವೇಶ್ವರ ದೇವರ ಕಾರ್ಣಿಕ ನುಡಿ ನುಡಿಯುವ ಮೂಲಕ, ಮುಂಬರುವ ದಿನಗಳಲ್ಲಿ ನಾಡಿಗೆ ದೇಶಕ್ಕೆ ಒಳ್ಳೇಯದಾಗಲಿದೆ ಎಂಬುದಾಗಿ ಹೇಳಿದೆ. ದಾವಣಗೆರೆ ಜಿಲ್ಲೆಯ ಆನೆಕೊಂಡ ಬಸವೇಶ್ವರ ಜಾತ್ರೆ ಅದ್ಧೂರಿಯಾಗಿ ನಡೆಯಿತು.

ಈ ವೇಳೆಯಲ್ಲಿ ದೇವರ ಕಾರ್ಣಿಕ ನುಡಿಯನ್ನು ನುಡಿಯಲಾಗಿದೆ. ರಾಮ ರಾಮ ಎಂದು ನುಡಿದಿತಲೇ, ನರ ಲೋಕದ ಜನಕೆ ಆನೆ ಕಣ್ಣೀರು ಉಗ್ಗಿತಲೇ, ಮುತ್ತೈದೆ

ಉದಯವಾಹಿನಿ ಚಿತ್ರ

ಭೂತಾಯಿ ಉಡಿ ತುಂಬಿತಲೇ ಎಂಬುದಾಗಿ ಪೂಜಾರಪ್ಪ ಕಾರ್ಣಿಕ ನುಡಿ ನುಡಿದಿದ್ದಾರೆ. ಸಾವಿರಾರು ಜನರ ಸಮ್ಮುಖದಲ್ಲಿ ಕಾರ್ಣಿಕ ನುಡಿಯನ್ನು ಪೂಜಾರಿ ನುಡಿದಿದ್ದು, ಬರುವ ದಿನಗಳಲ್ಲಿ ನಾಡಿಗೆ, ದೇಶಕ್ಕೆ ಒಳ್ಳೇಯದಾಗಲಿದೆ ಎಂಬುದು ಇದರ ಸಾರಾಂಶ ಎಂಬುದಾಗಿ ಜನರು ವಿಶ್ಲೇಷಿಸಿದ್ದಾರೆ.

ಕೂಸಿನ ಮನೆಯ ಸದುಪಯೋಗ ಪಡೆದುಕೊಳ್ಳಿ

• ಉದಯವಾಹಿನಿ ವಡಗೇರಾ

ಸರಕಾರದ ಮಹತ್ವದ ಯೋಜನೆಯಲ್ಲಿ ಒಂದಾದ ಕೂಸಿನ ಮನೆ ಶಿಶುಪಾಲನ ಕೇಂದ್ರದ ಸದುಪಯೋಗವನ್ನು ಕೂಲಿ ಕಾರ್ಮಿಕ ಮಹಿಳೆಯರು ತಪ್ಪದೇ ಪಡೆದುಕೊಳ್ಳಿ ಎಂದು ಬೆಂಡೆಬೆಂಬಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶ್ರೀಮತಿ ಸುಶೀಲಾ ಶಿವಾನಂದ ಸ್ವಾಮಿ ಕೊಡಾಲ ಹೇಳಿದರು. ತಾಲ್ಲೂಕಿನ ಬೆಂಡಬೆಂಬಳಿ ಗ್ರಾಮ ಪಂಚಾಯಿತಿ ಕೇಂದ್ರದ ಬೆಂಡೆ ಬೆಂಬಳಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕೋಣೆಯಲ್ಲಿ ಸ್ಥಾಪಿಸಿರುವ ಕೂಸಿನ ಮನೆ ಶಿಶುಪಾಲನ ಕೇಂದ್ರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ನೇರೆಗಾ ಯೋಜನೆ ಅಡಿಯಲ್ಲಿ ಕೆಲಸ ಮಾಡುವ ಮಹಿಳೆಯರು ತಮ್ಮ ಆರು ತಿಂಗಳಿನಿಂದ ಮೂರು ವರ್ಷದ ಒಳಗಿನ ಮಗುವನ್ನು ಸ್ಥಳೀಯ ಶಿಶುಪಾಲನಾ ಕೇಂದ್ರದಲ್ಲಿ ಬಿಟ್ಟು ನೆಮ್ಮದಿಯಾಗಿ ಕೆಲಸ ಮಾಡಬಹುದು ಕೂಸಿನ ಮನೆ ಕೇಂದ್ರದಲ್ಲಿ ಮಕ್ಕಳಿಗೆ ಉತ್ತಮ ಗುಣಮಟ್ಟದ ಆಹಾರ ಜೊತೆಗೆ ಆಟಿಕೆಯ ಸಾಮಾನು ನಿಡಿ ಶಿಶು ಪಾಲನ ಕೇಂದ್ರದ ಹಾರೈಕೆದಾರರು ಮಕ್ಕಳನ್ನು ಉತ್ತಮ ರೀತಿಯಾಗಿ

ಉದಯವಾಹಿನಿ ಚಿತ್ರ

ನೋಡಿಕೊಳ್ಳುತ್ತಾರೆ ಆ ಕಾರಣ ತಾಯಂದಿರು ತಮ್ಮ ಮಕ್ಕಳನ್ನು ಶಿಶು ಪಾಲನ ಕೇಂದ್ರದಲ್ಲಿ ಬಿಟ್ಟು ಕೆಲಸಕ್ಕೆ ಹೋಗುವಂತೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪ್ರವೀಣ್ ಸ್ವಾಮಿ, ಕಾರ್ಯದರ್ಶಿಗಳಾದ ಮಹಾದೇವಪ್ಪಗೌಡ ಗೋನಾಲ, ಪ್ರಾಥಶಾಲಾ ಮುಖ್ಯ ಗುರುಗಳಾದ ಮಹಮ್ಮದ್ ರಫಿ, ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಗುರು ಮಹಮ್ಮದ್ ಯಾಸಿನ್, ಗ್ರಾಮದ ಮುಖಂಡರಾದ ಅಯ್ಯಪ್ಪ ದೊರೆ, ತಿಪ್ಪಣ್ಣ ಕದ್ರಾಪುರ, ಹಾಗೂ ಸಿದ್ದಪ್ಪ ನಾಟೇಕಾರ, ರಾಜು ರಾಜಾಪುರ, ಕೂಸಿನ ಮನೆಯ ಹಾರೈ ಕೆದಾರರಾದ ಶಿವಲೀಲಾ, ಮರೇಮ್ಮ, ದೀಪಾ ಗ್ರಾಮ ಪಂಚಾಯತ್ ಸದಸ್ಯರು ಸಿಬ್ಬಂದಿ ವರ್ಗ ದವರು ಉಪಸ್ಥಿತರಿದ್ದರು.

ಮಕ್ಕಳಲ್ಲಿ ಕ್ರೀಡೆಯು ದೈಹಿಕ ಮತ್ತು ಮಾನಸಿಕ ಸದೃಢತೆಯನ್ನು ಹೆಚ್ಚಿಸುತ್ತದೆ

• ಉದಯವಾಹಿನಿ ಅರಸೀಕೆರೆ

ಮಕ್ಕಳಲ್ಲಿ ಕ್ರೀಡೆಯು ದೈಹಿಕ ಮತ್ತು ಮಾನಸಿಕ ಸದೃಢತೆಯನ್ನು ಬೆಳೆಸುವುದರ ಹೊರತಾಗಿ, ಕ್ರೀಡೆಗಳಲ್ಲಿ ಭಾಗವಹಿಸುವುದು ಮತ್ತು ದೇಹದ ಸದೃಢತೆಯನ್ನು ಕಾಪಾಡಿಕೊಳ್ಳುವುದು ಓದಿನಷ್ಟೇ ಮುಖ್ಯವಾಗಿದೆ ಎಂದು ಕರವೇ ಅಧ್ಯಕ್ಷ ಹಾಗೂ ಪತ್ರಕರ್ತರ ಸಂಘದ ಕಾರ್ಯದರ್ಶಿ ಹೇಮಂತ್ ಕುಮಾರ್ ತಿಳಿಸಿದ್ದಾರೆ.

ಯುವಕರು ಕ್ರೀಡೆಗಳತ್ತ ಗಮನ ಹರಿಸುತ್ತಿಲ್ಲ

ಗಂಡಸಿ ಹೋಬಳಿ ಮಟ್ಟದ ಹಿರಿಯ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟವನ್ನು ಗುಂಡು ಎಸೆಯುವುದರ ಮುಖಾಂತರ ಉದ್ಘಾಟಿಸಿ ಮಾತನಾಡಿ ಮೊಬೈಲ್ ಬಳಕೆ ಹೆಚ್ಚಾಗಿ ಬಳಸುವುದರಿಂದ ಯುವಕರು ಕ್ರೀಡೆಗಳತ್ತ ಜಾಸ್ತಿ ಗಮನ ಹರಿಸುತ್ತಿಲ್ಲ ಪ್ರತಿಭಾವಂತ ಕ್ರೀಡಾಪಟುಗಳು ಇದ್ದರು ಸಹ ಭಾರತ ಒಲಂಪಿಕ್ ಕ್ರೀಡೆಯಲ್ಲಿ ಕನಿಷ್ಠ ಒಂದು ಚಿನ್ನವನ್ನು ಗೆಲ್ಲಲಾಗಲಿಲ್ಲ ಸರ್ಕಾರಗಳು ಕ್ರೀಡೆಗಳನ್ನು ಪ್ರೋತ್ಸಾಹಿಸಿ ಸಾಕಷ್ಟು ಸವಲತ್ತುಗಳನ್ನು ನೀಡಬೇ

12 ವರ್ಷದ ಬಾಲಕಿಯನ್ನು ಬರ್ಬರವಾಗಿ ಕೊಲೆಗೈದಿದ್ದ ವಿಕೃತ ಹಂತಕ

ಅಮೆರಿಕದ 'ಹಾಲಿನ ಡಬ್ಬದ ಮೇಲಿನ ಹುಡುಗಿ' ಕೊಲೆ ಕೇಸ್: 35 ವರ್ಷಗಳ ಬಳಿಕ ಹಂತಕ ಸಿಕ್ಕಿದ್ದು ಹೇಗೆ?

ಅಮೆರಿಕ: ಇದೊಂದು ಶಾಕಿಂಗ್ ಪ್ರಕರಣ ವಿಕೃತ ಹಂತಕನೊಬ್ಬ 12 ವರ್ಷದ ಬಾಲಕಿಯನ್ನು ಬರ್ಬರವಾಗಿ ಕೊಲೆಗೈದು ಬರೋಬ್ಬರಿ 35 ವರ್ಷ ಜನರ ನಡುವಲ್ಲೇ ಬೆರೆತು ಪೊಲೀಸರಿಗೆ ಚಳ್ಳೇಹಣ್ಣು ತಿನ್ನಿಸಿದ ಪ್ರಕರಣ ಇದು. ಇದೀಗ ಅಮೆರಿಕದ ಟಿವಿ ವಾಹಿನಿಗಳಲ್ಲಿ ಆಗಸ್ಟ್ 25 ರಿಂದ ಕ್ರೈಂ ಟಿವಿ ಸಿರೀಸ್ ರೂಪದಲ್ಲಿ ರಿಲೀಸ್ ಆಗಿರುವ ಈ ಕೊಲೆ ಪ್ರಕರಣ ಹಾಲಿನ ಡಬ್ಬದ ಮೇಲಿನ ಹುಡುಗಿ ಕೇಸ್ ಎಂದೇ ಕುಖ್ಯಾತವಾಗಿದೆ.

ಏನಿದು ಪ್ರಕರಣ?: 2019ರ ಜುಲೈ 24 ರಂದು ತೈಲೋತ್ಪನ್ನ ಸಂಸ್ಥೆಯೊಂದರ ಕಾರ್ಮಿಕರಿಗೆ ಮಾನವ ದೇಹದ ಭಾಗಗಳು ಸಿಕ್ಕಿದ್ದವು. ಮೇಲ್ನೋಟಕ್ಕೆ ಈ ದೇಹದ ಭಾಗಗಳು ಬಾಲಕಿಯ ದೇಹ ಎಂದು ಕಂಡು ಬರುತ್ತಿತ್ತು. ಇದನ್ನು ಪ್ರಯೋಗಾಲಯಕ್ಕೆ ಕೊಂಡೊಯ್ದು ಪರಿಶೀಲನೆ ನಡೆಸಿದಾಗ 1984ರ ಡಿಸೆಂಬರ್ ತಿಂಗಳಲ್ಲಿ ನಾಪತ್ತೆಯಾಗಿದ್ದ ಅಮೆರಿಕದ ಕೊಲೊರಾಡೋ ನಿವಾಸಿಯಾಗಿದ್ದ ಬಾಲಕಿಯ ಮೃತ ದೇಹ ಎಂದು ಸಾಬೀತಾಗಿತ್ತು. ದಶಕಗಳ ಹಿಂದೆ ನಾಪತ್ತೆಯಾಗಿದ್ದ 12 ವರ್ಷ ವಯಸ್ಸಿನ ಜೊನೆಲ್ಲೆ ಮ್ಯಾಥ್ಯೂಸ್ ಎಂಬ ಬಾಲಕಿಯ ಮೃತ ದೇಹ ಅದಾಗಿತ್ತು

35 ವರ್ಷಗಳ ಬಳಿಕ ಪೊಲೀಸರಿಗೆ ಸಿಕ್ಕ ಕೊಲೆಗಾರ: 1984ರಲ್ಲಿ ನಾಪತ್ತೆಯಾಗಿದ್ದ 12 ವರ್ಷದ ಬಾಲಕಿ ಯನ್ನು ಅಪಹರಣ ಮಾಡಿ ಕೊಲೆ ಮಾಡಿದ ಆರೋಪ ಸಾಬೀತಾಗಿದ್ದು 2022ರಲ್ಲಿ! ಆರೋಪಿ ಸ್ಟೀವ್ ಪಾಂಕಿ ಈ ಕೃತ್ಯ ಎಸಗಿದ ಅಪರಾಧಿ. ಸಾಮಾನ್ಯ ಕುಟುಂಬಸ್ಥನಾಗಿದ್ದ ಹಂತಕ, ಅಷ್ಟೂ ವರ್ಷ ಜನ ಸಾಮಾನ್ಯರ ನಡುವೆ ಬೆರೆತು ಅತ್ಯಂತ ಸಹಜವಾಗಿ ಜೀವನ ನಡೆಸುತ್ತಿದ್ದ. ಆದರೆ, ಆತನ ಪತ್ನಿಗೆ ಆತನ ಮೇಲೆ ಆರಂಭದಿಂದಲೂ ಅನುಮಾನ ಇದ್ದೇ ಇತ್ತು

ಸಣ್ಣಪುಟ್ಟ ಅಪರಾಧ ಕೃತ್ಯಗಳನ್ನು ಎಸಗುತ್ತಿದ್ದ ಸ್ಟೀವ್ ಪಾಂಕಿ, ಆಗಾಗ್ಗೆ ಗಲಾಟೆ ಗದ್ದಲಗಳನ್ನ ಮಾಡಿಕೊಂಡು ಜೈಲು ಸೇರುತ್ತಿದ್ದ. 1984ರಲ್ಲಿ ಬಾಲಕಿ ನಾಪತ್ತೆಯಾಗಿದ್ದ ವೇಳೆ ಆತನ ವರ್ತನೆ ವಿಚಿತ್ರವಾಗಿತ್ತು. ಇದನ್ನು ಸ್ಟೀವ್ ಪಾಂಕಿಯ ಪತ್ನಿ ತುಂಬಾ ಚನ್ನಾಗಿ ಗಮನಿಸಿದ್ದರು. ಬಾಲಕಿ ನಾಪತ್ತೆಯಾದ ವೇಳೆ ಈತ ತನ್ನ ಪತ್ನಿ ಹಾಗೂ ಮಕ್ಕಳನ್ನು ಕರೆದುಕೊಂಡು ಸಡನ್ ಪ್ರವಾಸಕ್ಕೆ ಹೊರಟಿದ್ದ ಕಾರಿನಲ್ಲಿ ಹೋಗುವಾಗ ರೇಡಿಯೋದಲ್ಲಿ ಬಾಲಕಿ ಕುರಿತಾಗಿ ಮಾಹಿತಿ ಬಂದ ಕೂಡಲೇ ಗಮನವಿಟ್ಟು ಕೇಳುತ್ತಿದ್ದ. ತನ್ನ ಪತ್ನಿ ರೇಡಿಯೋ ಆನ್ ಮಾಡಿದರೆ ಸಾಕು ಉರಿದು ಬೀಳುತ್ತಿದ್ದ ವ್ಯಕ್ತಿ, ಇದೀಗ ರೇಡಿಯೋ ಕಡೆಗೆ ಗಮನವಿಟ್ಟು ಏಕೆ ಕೇಳುತ್ತಾನೆ ಎಂದು ಪತ್ನಿಗೆ ಅಚ್ಚರಿಯಾಗಿತ್ತು 1984ರ ಡಿಸೆಂಬರ್ 20 ರಂದು ಬಾಲಕಿ ನಾಪತ್ತೆಯಾಗಿದ್ದಳು. ಇದಾದ ಐದೇ ದಿನಕ್ಕೆ ಕ್ರಿಸ್‌ಮಸ್ ಇತ್ತು. ಹೀಗಾಗಿ, ಚರ್ಚ್‌ನಲ್ಲಿ ಬಾಲಕಿ ಪರ ಪ್ರಾರ್ಥಿಸಿದ ಪಾದ್ರಿಗಳು ಆಕೆ ಸುರಕ್ಷಿತವಾದ್ದಾಳೆ ಎಂದು ಹೇಳಿದಾಗ ಹಂತಕ ಸ್ಟೀವ್ ಪಾಂಕಿ ಜೋರಾಗಿ ಕಿರುಚಿ, ಈತ ಸುಳ್ಳು ಹೇಳುತ್ತಿದ್ದಾನೆ ಎಂದಿದ್ದನಂತೆ! ಈತನ ಹುಚ್ಚಾಟ ಹೆಚ್ಚಾಗಿ ಕೆಲವೇ ತಿಂಗಳಿಗೆ ಪತ್ನಿ ಹಾಗೂ ಮಕ್ಕಳೂ ದೂರವಾದರು. ಚರ್ಚ್‌ನಲ್ಲಿ ಕೂಗಾಡಿದ ದಿನವೇ ಸ್ಟೀವ್ ಪಾಂಕಿಯನ್ನ ಪೊಲೀಸರು ವಿಚಾರಿಸಿದ್ದರೆ ಸತ್ಯ ಬಯಲಾಗುತ್ತಿತ್ತೇನೋ. ಆದರೆ 2019ರಲ್ಲಿ ಬಾಲಕಿಯ ಮೃತ ದೇಹ ಸಿಕ್ಕ ಬಳಿಕ, ತನ್ನ ಮಾಜಿ ಗಂಡನ ವರ್ತನೆಗಳನ್ನ ನೆನಪಿಸಿಕೊಂಡ ಪತ್ನಿ ಪೊಲೀಸರಿಗೆ ಸುಳಿವು ಕೊಟ್ಟರು. 2020ರಲ್ಲಿ ಪೊಲೀಸರ ವಿಚಾರಣೆ ವೇಳೆ ಆರೋಪಿ ತಪ್ಪೊಪ್ಪಿಕೊಂಡಿದ್ದ. 2022ರಲ್ಲಿ ಆರೋಪಿಗೆ ನ್ಯಾಯಾಲಯ ಶಿಕ್ಷೆ ವಿಧಿಸಿತ್ತು. ಇದೀಗ ಈ ಪ್ರಕರಣ ರೋಚಕ ಘಟನಾವಳಿಗಳೊಂದಿಗೆ ಕ್ರೈಂ ಸಿರೀಸ್ ರೂಪದಲ್ಲಿ ಪ್ರಸಾರವಾಗುತ್ತಿದೆ.

ಹಾಲಿನ ಡಬ್ಬದ ಮೇಲಿನ ಹುಡುಗಿ ಎಂದೇ ಹೆಸರಾಗಿದ್ದ ಜೊನೆಲ್ಲೆ ಮ್ಯಾಥ್ಯೂಸ್

1984ರಲ್ಲಿ ಜೊನೆಲ್ಲೆ ಮ್ಯಾಥ್ಯೂಸ್ ನಾಪತ್ತೆಯಾಗಿದ್ದಾಗ ಆಕೆಯ ಪೋಷಕರು ಮನೆ ಮನೆಗೆ ಸರಬರಾಜಾಗುತ್ತಿದ್ದ ಹಾಲಿನ ಡಬ್ಬಗಳ ಮೇಲೆ ತಮ್ಮ ಮಗಳ ಭಾವಚಿತ್ರ ಹಾಗೂ ಆಕೆಯ ವಿವರ ಬರೆದು ಮಾಹಿತಿ ನೀಡಿದ್ದರು. ಮನೆ ಮನೆಗೂ ಈ ಮಾಹಿತಿ ರವಾನೆಯಾಗಲಿ, ತಮ್ಮ ಮಗಳು ಸಿಗಲಿ ಎಂದು ಆಶಿಸಿದ್ದರು. ಆದರೆ ದಶಕಗಳೇ ಕಳೆದು ಹೋದರೂ ಜೊನೆಲ್ಲೆ ಮ್ಯಾಥ್ಯೂಸ್ ಪತ್ತೆಯಾಗಲಿಲ್ಲ. ಹಾಲಿನ ಡಬ್ಬಗಳ ಮೇಲೆ ಬಾಲಕಿಯ ಚಿತ್ರ ಅಮೆರಿಕ ದೇಶಾದ್ಯಂತ ಕೋಟ್ಯಂತರ ಮನೆಗಳನ್ನ ತಲುಪಿತ್ತು. ಆಗ ಈ ಬಾಲಕಿ ಹಾಲಿನ ಡಬ್ಬದ ಮೇಲಿನ ಹುಡುಗಿ ಎಂದೇ ಹೆಸರಾಗಿದ್ದಳು. ಬಾಲಕಿ ಸಿಗದೇ ಹೋದಾಗ ಆಕೆ ನಾಪತ್ತೆಯಾದ 10 ವರ್ಷದ ಬಳಿಕ ಆಕೆ ಸಾವನ್ನಪ್ಪಿದ್ದಾಳೆ ಎಂದು ಘೋಷಿಸಲಾಗಿತ್ತು. ಆದರೆ ಆಕಸ್ಮಿಕವಾಗಿ 2019ರಲ್ಲಿ ಬಾಲಕಿಯ ಮೃತ ದೇಹ ಸಿಕ್ಕ ಬಳಿಕ ಕೇಸ್ ರೀ ಓಪನ್ ಆಯ್ತು.

ಕೊಲೆ ಅನ್ನೋದು ಒಂದು ಸಂಕೀರ್ಣ ಅಪರಾಧ ಕೃತ್ಯ. ಈ ಕೃತ್ಯ ಎಸಗಿದ ಎಷ್ಟೋ ಮಂದಿ ದಶಕಗಳ ಬಳಿಕ ಪೊಲೀಸರಿಗೆ ಸೆರೆ ಸಿಕ್ಕ ನಿದರ್ಶನಗಳು ಸಾಕಷ್ಟಿವೆ. ಇದೀಗ ಅಮೆರಿಕದಲ್ಲಿ ಅಂಥಾದ್ದೊಂದು ಪ್ರಕರಣ ಸದ್ದು ಮಾಡುತ್ತಿದೆ. 1984ರಲ್ಲಿ ನಾಪತ್ತೆಯಾಗಿದ್ದ ಬಾಲಕಿಯ ಫೋಟೋ ಹಾಲಿನ ಡಬ್ಬಗಳ ಮೇಲೆ ರಾರಾಜಿಸಿದ್ದ ಕಾರಣ ಇದು 'ಹಾಲಿನ ಡಬ್ಬದ ಮೇಲಿನ ಹುಡುಗಿ ಕೇಸ್' ಎಂದೇ ಅಮೆರಿಕದಲ್ಲಿ ಮನೆ ಮಾತಾಗಿದೆ.

ಟೆಲಿಗ್ರಾಮ್ ಮೆಸೇಜಿಂಗ್ ಅಪ್ಲಿಕೇಶನ್ ಸಿಇಒ ಪಾವೆಲ್ ಡುರೊವ್ ಅರೆಸ್ಟ್



ಪ್ಯಾರಿಸ್: ಜಾಗತಿಕ ಜನಪ್ರಿಯ ಮೆಸೇಜಿಂಗ್ ಅಪ್ಲಿಕೇಶನ್ ಟೆಲಿಗ್ರಾಮ್‌ನ ಸಂಸ್ಥಾಪಕ ಮತ್ತು ಸಿಇಒ ಪಾವೆಲ್ ಡುರೊವ್ ಅವರನು ಮಾದಕವಸ್ತು ಕಳ್ಳಸಾಗಣೆ, ಮಕ್ಕಳ ಲೈಂಗಿಕ ನಿಂದನೆ ಚಿತ್ರಗಳ ಅಕ್ರಮ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಬಂಧಿಸಲಾಗಿದೆ. ರಷ್ಯಾದಲ್ಲಿ ಜನಿಸಿದ ಡುರೊವ್ ಅವರು ತಮ ಬಾಲ್ಯದ ಬಹುಪಾಲು ಇಟಲಿಯಲ್ಲಿ ಕಳೆದಿದ್ದರು, ಫ್ರಾನ್ಸ್, ರಷ್ಯಾ, ಕೆರಿಬಿಯನ್ ದ್ವೀಪ ರಾಷ್ಟ್ರವಾದ ಸೇಂಟ್ ಕಿಟ್ಸ್ ಮತ್ತು ನೆವಿಸ್ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್‌ನ ನಾಗರಿಕರಾಗಿದ್ದಾರೆ.ಕಳೆದ ಆ.24 ರಂದು ಅಜರ್ಬೈಜಾನ್‌ನಿಂದ ತಮ ಖಾಸಗಿ ಜೆಟ್ ವಿಮಾನದಲ್ಲಿ ಫ್ರಾನ್ಸ್‌ನ ಪ್ಯಾರಿಸ್-ಲೆ ಬೌರ್ಗೆಟ್ ವಿಮಾನ ನಿಲ್ದಾಣದಲ್ಲಿ ಬಂದಿಳಿಯುತ್ತಿದಂತೆ ಬಂಧಿಸಲಾಯಿತು.

ಆದರೆ ಬಂಧನದ ಬಗ್ಗೆ ಯಾವುದೇ ಮಾಹಿತಿ ನೀಡದ ಹಿನ್ನಲೆಯಲ್ಲಿ ಜಾಗತಿಕ ಮಟ್ಟದಲ್ಲಿ ಭಾರಿ ಚರ್ಚೆಗೆ ಗ್ರಾಸವಾಗಿತ್ತು.ಪರ ವಿರೋಧ ಮಾತುಗಳು ಕೇಳಿಬಂದಿತ್ತು. ಟೆಲಿಗ್ರಾಮ್ ಕಾರ್ಯವಿಧಾನ ಕಾನೂನುಗಳಿಗೆ ಬದ್ಧವಾಗಿದೆ ಮತ್ತು ಅದರ ವಿಷಯಗಳು ಮಾಡರೇಶನ್ ಉದ್ಯಮದ ಮಾನ ದಂಡಗಳನ್ನು ಪಾಲಿಸಿದೆ ಮರೆಮಾಚಲು ಏನೂ ಇಲ್ಲ ಮತ್ತು ಯುರೋಪ್‌ಗೆ ಆಗಾಗ್ಗೆ ಪ್ರಯಾಣಿಸುತ್ತಾನೆ ಎಂದು ಸಂಸ್ಥೆ ಹೇಳಿಕೊಂಡಿದೆ. ಫ್ರಾನ್ಸ್‌ನಲ್ಲಿ 950 ಮಿಲಿಯನ್‌ಗಿಂತಲೂ ಹೆಚ್ಚು ಸಕ್ರಿಯ ಟೆಲಿಗ್ರಾಮ್ ಬಳಕೆದಾರರಿದ್ದಾರೆ. ಸಂದೇಶ ಕಳುಹಿಸುವ ಸಾಧನವಾಗಿ ವ್ಯಾಪಕವಾಗಿ ಬಳಸಲಾಗುತ್ತದೆ, ಆದರೆ ಇಸ್ಲಾಮಿಕ್ ಉಗ್ರಗಾಮಿಗಳು ಮತ್ತು ಮಾದಕವಸ್ತು ಕಳ್ಳಸಾಗಣೆದಾರರು ಈ ಅಪ್ಲಿಕೇಶನ್ ಬಳಸಿದ್ದಾರೆ ಎಂದು ಫ್ರೆಂಚ್ ತನಿಖಾಧಿಕಾರಿಗಳು ಪತ್ತೆ ಹಚ್ಚಿದ್ದಾರೆ.

2013 ರಲ್ಲಿ ಡ್ಯುರೊವ್ ಮತ್ತು ಅವರ ಸಹೋದರ ನಿಕೊಲಾಯ್ ಅವರು ಟೆಲಿಗ್ರಾಮ್ ಅನ್ನು ಪ್ರಾರಂಭಿಸಿದರು. ಟೆಲಿಗ್ರಾಮ್ ಮೊದಲು, ಡುರೊವ್ ರಷ್ಯಾದ ಅತಿದೊಡ್ಡ ಸಾಮಾಜಿಕ ಜಾಲತಾಣವನ್ನು ಸ್ಥಾಪಿಸಿದರು.

2011, 2012 ರ ಅಂತ್ಯದಲ್ಲಿ ಮಾಸ್ಕೋದಲ್ಲಿ ಸಾಮೂಹಿಕ ಪ್ರಜಾಪ್ರಭುತ್ವ-ಪರ ಪ್ರತಿಭಟನೆಗಳು ನಡೆದ ನಂತರ ರಷ್ಯಾದ ಸರ್ಕಾರದ ಕೆಂಗಣ್ಣಿಗೆ ಗುರುಯಾಗಿ ಕಂಪನಿಯು ಒತ್ತಡಕ್ಕೆ ಒಳಗಾಯಿತು.ನಮತರ ಅದರ ಬಳಕೆಗೆ ನಿರ್ಬಂಧ ಹೇರಲಾಗಿತ್ತು. 2014 ರಲ್ಲಿ ರಷ್ಯಾದ ಅಧಿಕಾರಿಗಳ ಒತ್ತಡದ ನಂತರ ಡುರೊವ್‌ನಲ್ಲಿ ತನ್ನ ಪಾಲನ್ನು ಮಾರಾಟ ಮಾಡಿ ದೇಶವನ್ನು ತೊರೆದರು.ನಂತರ ಟೆಲಿಗ್ರಾಮ್ ದುಬೈನಲ್ಲಿ ನೆಲೆಗೊಂಡಿದೆ, ಟೆಲಿಗ್ರಾಮ್ ಸದ್ಯ ಜಾಗತಿಕವಾಗಿ ಪ್ರಾಭಲ್ಯ ಹೆಚ್ಚಿಸಿಕೊಳ್ಳುವ ನಡುವೆ ನಮ ಬಳಕೆದಾರರ ಗೌಪ್ಯತೆ ಮತ್ತು ವಾಕ್ ಸ್ವಾತಂತ್ರ್ಯವನ್ನು ನಾವು ರಕ್ಷಿಸಬಹುದು ಎಂದು ಕಳೆದ ನೀಡಿದ್ದ ಹೇಳಿಕೆ ಫ್ರೆಂಚ್ ಮಾಧ್ಯಮದಲ್ಲಿ ವರದಿಯಾಗಿತ್ತು. ನಂತರ ಟೆಲಿಗ್ರಾಮ್ ತಾಣದ ಮೇಲೆ ಕಣ್ಣಿಟ್ಟು ತನಿಖೆ ನಡೆಸಿದಾಗ ಹಲವು ಕಾನೂನು ಬಾಹಿರ ಕೃತ್ಯ ಕಂಡುಬಂದು ವಾರೆಂಟ್ ಹೊರಡಿಸಲಾಗಿತ್ತು.

ಈಗ ಡ್ಯುರೊವ್ ಅವರನ್ನು ಬಂಧಿಸಲಾಗಿದೆ ಹಣ ವರ್ಗಾವಣೆ, ಮಾದಕವಸ್ತು ಕಳ್ಳಸಾಗಣೆ ಮತ್ತು ಇತರ ಅಪರಾಧಗಳಿಗೆ ಟೆಲಿಗ್ರಾಮ್ ಬಳಸಲಾಗಿದೆ ಎಂದು ಆರೋಪಿಸಲಾಗಿದೆ ಎಂಬ ವಿವರಗಳು ಲಭ್ಯವಿವೆ. ಫ್ರೆಂಚ್ ಕಾನೂನಿನ ಪ್ರಕಾರ, ಡುರೊವ್ ನಾಲ್ಕು ದಿನಗಳವರೆಗೆ ವಿಚಾರಣೆಗಾಗಿ ಕಸ್ಟಡಿಯಲ್ಲಿ ಉಳಿಯಬಹುದು. ಅದರ ನಂತರ, ನ್ಯಾಯಾಧೀಶರು ಅವನ ಮೇಲೆ ರುವ ಆರೋಪ ಕುರುತು ತನಖೆ, ಬಿಡುಗಡೆ ಮಾಡಲು ನಿರ್ಧರಿಸಬಹುದು

ತಿರುಪತಿಯಲ್ಲಿ ವೈದ್ಯೆಯ ಮೇಲೆ ಹಲ್ಲೆ

ಹೈದರಾಬಾದ್: ಕೋಲ್ಕತ್ತಾದ ಆರ್‌ಜಿ ಕರ್ ವೈದ್ಯಕೀಯ ಕಾಲೇಜು, ಆಸ್ಪತ್ರೆಯಲ್ಲಿ ನಡೆದ ಅತ್ಯಾಚಾರ, ಹತ್ಯೆಯ ಹಿನ್ನೆಲೆಯಲ್ಲಿ ವೈದ್ಯರ ಸುರಕ್ಷತೆಯನ್ನು ಖಾತ್ರಿಪಡಿಸುವಂತೆ ರಾಷ್ಟ್ರವ್ಯಾಪಿ ಪ್ರತಿಭಟನೆ ನಡೆಯುತ್ತಿರುವ ಸಂದರ್ಭದಲ್ಲೇ ತಿರುಪತಿಯ ಆಸ್ಪತ್ರೆಯೊಂದರಲ್ಲಿ ಮಹಿಳಾ ಜೂನಿಯರ್ ವೈದ್ಯೆಯ ಮೇಲೆ ರೋಗಿಯೊಬ್ಬರು ಹಲ್ಲೆ ನಡೆಸಿದ್ದಾರೆ. ತಿರುಪತಿಯಲ್ಲಿರುವ ಶ್ರೀ ವೆಂಕಟೇಶ್ವರ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ನಡೆದ ಈ ಘಟನೆ ಆಸ್ಪತ್ರೆಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ.

ದಾಳಿಕೋರರು ವೈದ್ಯರ ಕೂದಲನ್ನು ಹಿಡಿದು ಆಸ್ಪತ್ರೆಯ ಬೆಡ್‌ನ ಉಕ್ಕಿನ ಚೌಕಟ್ಟಿನ ಮೇಲೆ ಅವಳ ತಲೆಯನ್ನು ಬಡಿಯುವ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ. ವಾರ್ಡ್‌ನಲ್ಲಿರುವ ಇತರ ವೈದ್ಯರು ತಕ್ಷಣವೇ ತಮ ಸಹೋದ್ಯೋಗಿಯ ರಕ್ಷಣೆಗೆ ಧಾವಿಸುತ್ತಾರೆ.

ಉಪಕುಲಪತಿ ಡಾ.ಆರ್. ವಿ.ಕುಮಾರ್ ಅವರಿಗೆ ಬರೆದ ಪತ್ರದಲ್ಲಿ ಇಂಟರ್ನ್ ಅವರು ಎಮರ್ಜೆನ್ಸಿ ಮೆಡಿಸಿನ್ ವಿಭಾಗದಲ್ಲಿ ಕರ್ತವ್ಯದಲ್ಲಿದ್ದಾಗ ನನಗೆ ಅನಿರೀಕ್ಷಿತವಾಗಿ ರೋಗಿಯೊಬ್ಬರು ದಾಳಿ ಮಾಡಿದರು, ಬಂಗಾರು ರಾಜು, ನನ್ನ ಹಿಂದಿನಿಂದ ನನ್ನ ಬಳಿಗೆ ಬಂದು, ನನ್ನ ಕೂದಲನ್ನು ಎಳೆದುಕೊಂಡು ಮತ್ತು ನನ್ನ ತಲೆಯನ್ನು ಕೋಟ್‌ನ ಸ್ಟೀಲ್ ರಾಡ್‌ಗೆ ಬಲವಂತವಾಗಿ ಹೊಡೆಯಲು ಪ್ರಾರಂಭಿಸಿದರು, ಯಾವುದೇ ಭದ್ರತಾ ಸಿಬ್ಬಂದಿ ಇರಲಿಲ್ಲ ಎಂದು ಅವರು ದೂರಿದ್ದಾರೆ. ಈ ಘಟನೆಯು ಕೆಲಸದ ಸ್ಥಳದಲ್ಲಿ ಸುರಕ್ಷತೆಯ ಬಗ್ಗೆ ಗಂಭೀರ ಕಳವಳವನ್ನು ಉಂಟುಮಾಡುತ್ತದೆ ಎಂದು ಅವರು ಹೇಳಿದರು.

ರೋಗಿಯು ತೀಕ್ಷ್ಣವಾದ ಆಯುಧದಿಂದ ಶಸ್ತ್ರಸಜ್ಜಿತವಾಗಿದ್ದರೆ, ಪರಿಸ್ಥಿತಿಯು ತೀವ್ರ ಪರಿಣಾಮಗಳೊಂದಿಗೆ ಉಲ್ಬಣಗೊಳ್ಳಬಹುದು ಎಂದು ವೈದ್ಯರು ಬರೆದಿದ್ದಾರೆ, ಸಿಬ್ಬಂದಿಯ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಭದ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ವೈದ್ಯರು ಆಗ್ರಹಿಸಿದ್ದಾರೆ. ಈ ಹಿನ್ನೆಲೆಯಲ್ಲಿ ತಿರುಪತಿಯ ಎಸ್‌ವಿ ಐಎಂಎಸ್ ನಲ್ಲಿ ನಡೆದ ಘಟನೆಯು ಕರ್ತವ್ಯದಲ್ಲಿರುವ ವೈದ್ಯರ ಸುರಕ್ಷತೆಯ ಬಗ್ಗೆ ಮತ್ತೊಮೆ ಗಮನ ಸೆಳೆದಿದೆ.

ಸುಪ್ರೀಂ ಕೋರ್ಟ್ ಈಗ 10 ಸದಸ್ಯರ ರಾಷ್ಟ್ರೀಯ ಕಾರ್ಯಪಡೆಯನ್ನು ಸ್ಥಾಪಿಸಿದೆ, ಆರೋಗ್ಯ ಕಾರ್ಯಕರ್ತರ ವಿರುದ್ಧ ಹಿಂಸಾಚಾರವನ್ನು ತಡೆಗಟ್ಟಲು, ಕೆಲಸದ ಪರಿಸ್ಥಿತಿಗಳನ್ನು ಖಚಿತಪಡಿಸಿಕೊಳ್ಳಲು ಕ್ರಮಗಳನ್ನು ಶಿಫಾರಸು ಮಾಡಿದೆ. ಲಿಂಗ ಆಧಾರಿತ ಹಿಂಸಾಚಾರವನ್ನು ತಡೆಗಟ್ಟಲು, ವೈದ್ಯರಿಗೆ ಗೌರವಯುತ ಕೆಲಸದ ಸ್ಥಳವನ್ನು ಖಚಿತಪಡಿಸಿಕೊಳ್ಳಲು ಕಾರ್ಯ ಪಡೆಯು ಕ್ರಿಯಾ ಯೋಜನೆಯನ್ನು ಸಿದ್ಧಪಡಿಸುತ್ತದೆ ಎಂದು ನ್ಯಾಯಾಲಯ ಹೇಳಿದೆ.

ದೇವಾಲಯದರಲ್ಲಿ ಗೋವಿನ ಬಾಲ ಪತ್ತೆ, ಜೈಪುರ ಉದ್ವಿಗ್ನ

ಜೈಪುರ: ದೇವಸ್ಥಾನದ ಆವರಣವೊಂದರಲ್ಲಿ ಗೋವಿನ ಬಾಲ ಪತ್ತೆಯಾಗಿರುವ ಘಟನೆ ರಾಜಸ್ಥಾನದಲ್ಲಿ ಅಲ್ಲೊಲ್ಲ ಕಲ್ಲೊಲ ಸೃಷ್ಟಿಸಿದೆ.ಈ ಘಟನೆ ವಿರೋಧಿಸಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ಆ ಪ್ರದೇಶದಲ್ಲಿ ಜಮಾಯಿಸಿದ್ದು, ಅಂಗಡಿ ಮುಂಗಟ್ಟುಗಳನ್ನು ಮುಚ್ಚಲಾಗಿದ್ದು ಪರಿಸ್ಥಿತಿ ಬೂದಿ ಮುಚ್ಚಿದ ಕೆಂಡದಂತಿದೆ. ಘಟನೆ ನಡೆದ ಸ್ಥಳದಲ್ಲಿ ಜನ ಸಾಗರವೇ ಜಮಾಯಿಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮಕ್ಕೆ ಆಗ್ರಹಿಸಿದೆ. ಶೀಘ್ರ ಆರೋಪಿಗಳನ್ನು ಬಂಧಿಸದಿದ್ದರೆ ಮಾರುಕಟ್ಟೆಗಳನ್ನು ಮುಚ್ಚಲಾಗುವುದು ಎಂದು ಬಲಪಂಥೀಯ ಗುಂಪುಗಳು ಪೊಲೀಸರಿಗೆ ಅಂತಿಮ ಗಡುವು ನೀಡಿದ್ದವು.

ಘಟನೆಯ ಹಿಂದಿರುವವರನ್ನು ಶೀಘ್ರವೇ ಬಂಧಿಸಲಾಗುವುದು ಎಂದು ಪೊಲೀಸರು ಭರವಸೆ ನೀಡಿದರು. ಸೂಕ್ಷ್ಮ ಪ್ರದೇಶಗಳಲ್ಲಿ ಪೊಲೀಸರನ್ನು ನಿಯೋಜಿಸಲಾಗಿದೆ. ವಾತಾವರಣ ಶಾಂತಿಯುತವಾಗಿದೆ. ಸ್ಥಳೀಯ ಸಂಸದ ದಾಮೋದರ್ ಅಗರ್‌ವಾಲ್ ಅವರೊಂದಿಗೆ ಹಲವರು ಘಟನಾ ಸ್ಥಳಕ್ಕೆ ಆಗಮಿಸಿ, ತಪ್ಪಿತಸ್ಥರನ್ನು ತಕ್ಷಣ ಬಂಧಿಸುವಂತೆ ಒತ್ತಾಯಿಸಿ ಧರಣಿ ನಡೆಸಿದರು. ನಾವು ಪರಿಸ್ಥಿತಿಯನ್ನು ನಿಭಾಯಿಸಲು ಪ್ರಯತ್ನಿಸಿದ್ದೆವು, ಆದರೆ ಯುವಕರಲ್ಲಿ ತುಂಬಾ ಕೋಪವಿತ್ತು, ಅವರು ಕಲ್ಲು ತೂರಾಟವನ್ನು ಪ್ರಾರಂಭಿಸಿದರು. ನಗರದಲ್ಲಿ ಸಮಸ್ಯೆ ಸೃಷ್ಟಿಸುವವರ ವಿರುದ್ಧ ಕ್ರಮ ಕೈಗೊಳ್ಳುತ್ತೇವೆ. ಕಲ್ಲು ತೂರಾಟ ನಡೆಸಿದ ಜನರ ವಾಹನಗಳನ್ನು ವಶಪಡಿಸಿಕೊಂಡಿದ್ದೇವೆ ಎಂದು ಪೊಲೀಸರು ತಿಳಿಸಿದ್ದಾರೆ.

ನಾವು ಪರಿಸ್ಥಿತಿಯನ್ನು ಸಾಮಾನ್ಯಗೊಳಿಸಲು ಪ್ರಯತ್ನಿಸುತ್ತಿದ್ದೇವೆ ಮತ್ತು ಮಾರುಕಟ್ಟೆಯನ್ನು ಮುಚ್ಚಲು ಬಿಡುವುದಿಲ್ಲ ಎಂದು ಹೆಚ್ಚುವರಿ ಜಿಲ್ಲಾ ವ್ಯಾಜಿಸ್ಟ್ರೇಟ್ ವಂದನಾ ಖೋರ್ವಾಲ್ ತಿಳಿಸಿದ್ದಾರೆ.ಹೀಗಾಗಿ ಸ್ಥಳದಲ್ಲಿ ಬಿಗುವಿನ ವಾತವರಣ ನಿರ್ಮಾಣವಾಗಿದ್ದು ಅಗತ್ಯ ಮುಂಜಾಗೃತಾ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಖರ್ಗೆ ಕುಟುಂಬದ ಟ್ರಸ್ಟ್‌ಗೆ ಜಮೀನು ಹಂಚಿಕೆಯಲ್ಲಿ ಹಗರಣ

ನವದೆಹಲಿ: ಕರ್ನಾಟಕದಲ್ಲಿ ಕಾಂಗ್ರೇಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಕುಟುಂಬದವರು ನಡೆಸುತ್ತಿರುವ ಟ್ರಸ್ಟ್‌ಗೆ ನಿವೇಶನ ಹಂಚಿಕೆಯ ಲ್ಲಿ ಅಕ್ರಮ ನಡೆದಿದೆ ಎಂದು ಬಿಜೆಪಿ ಆರೋಪಿಸಿದೆ, ಈ ಬಗ್ಗೆ ಸಿಬಿಐ ತನಿಖೆಗೆ ಒತ್ತಾಯಿಸಿದೆ.

ಬಿಜೆಪಿ ಪ್ರಧಾನ ಕಚೇರಿಯಲ್ಲಿ

ಬಿಗ್‌ಬಾಸ್‌ನಿಂದ ಹೊರಬಂದ ಉರ್ಫಿ ಜಾವೇದ್

ಕಾರಣ ಬಿಚ್ಚಿಟ್ಟ ಉರ್ಫಿ ಜಾವೇದ್

ಬಿಗ್ ಬಾಸ್ ಬೆಡಗಿ ಉರ್ಫಿ ಜಾವೇದ್ ಸದ್ಯ 'ಫಾಲೋ ಕರ್ ಲೋ ಯಾರ್' ಎಂಬ ಶೋನಲ್ಲಿ ಆಕ್ಟೀವ್ ಆಗಿದ್ದಾರೆ. ಈ ಕಾರ್ಯಕ್ರಮದಲ್ಲಿ ಖಾಸಗಿ ಬದುಕಿನ ಬಗ್ಗೆ ಮುಕ್ತವಾಗಿ ನಟಿ ಮಾತನಾಡಿದ್ದಾರೆ. ಕಳೆದ 3 ವರ್ಷಗಳಿಂದ ನಾನು ಸೆಕ್ಸ್ ಮಾಡಿಲ್ಲ ಎಂದಿದ್ದಾರೆ. ಅದಕ್ಕೆ ಅಸಲಿ ಕಾರಣವನ್ನು ನಟಿ ತಿಳಿಸಿದ್ದಾರೆ.

ನಾನು ಕಳೆದ 3 ವರ್ಷಗಳಿಂದ ಯಾರ ಜೊತೆಯೂ ದೈಹಿಕ ಸಂಪರ್ಕ ನಡೆಸಿಲ್ಲ. ಯಾರಿಗೂ ಕಿಸ್ ಕೂಡ ಮಾಡಿಲ್ಲ. ಯಾಕೆ ಎಂಬುದನ್ನು ಕೂಡ ನಟಿ ಮಾತನಾಡಿ, ನನ್ನ ಬಳಿ ಎಲ್ಲಿಯವರೆಗೂ ಪ್ರೈವೇಟ್ ಜೆಟ್ ಇರುವುದಿಲ್ಲವೋ ಅಲ್ಲಿ ತನಕ ಸೆಕ್ಸ್ ಮಾಡಲ್ಲ ಎಂದು ಪ್ರತಿಜ್ಞೆ ಮಾಡಿದ್ದೆ ಎಂದಿದ್ದಾರೆ.

ನಾನು ಇಂಡಿಪೆಂಡೆಂಟ್ ಹುಡುಗಿ ಸ್ವಾಭಿಮಾನಿ. ಇಲ್ಲಿಯವರೆಗೂ ನನ್ನ ಜೀವನದಲ್ಲಿ ಎಲ್ಲಾವನ್ನೂ ನಾನೇ ಮಾಡಿಕೊಂಡಿದ್ದೇನೆ. ಹಾಗಾಗಿ ಸಂಗಾತಿಯ ಮುಂದೆ ನಾನು ದುರ್ಬಲವಾಗಿ ಕಾಣಲು ಇಷ್ಟಪಡುವುದಿಲ್ಲ ಎಂದು ಉರ್ಫಿ ಜಾವೇದ್ ಕಾರಣ ತಿಳಿಸಿದ್ದಾರೆ. ಈಗ ನಟಿಯ ಹೇಳಿಕೆಗೆ ಬಗೆ ಬಗೆಯ ಕಾಮೆಂಟ್‌ಗಳು ಹರಿದು ಬರುತ್ತಿವೆ. ಅಂದಹಾಗೆ, 2017ರಿಂದ 2022ರವರೆಗೆ ಪರಾಸ್ ಕಲ್ನಾವತ್ ಜೊತೆ ಉರ್ಫಿ ಡೇಟ್ ಮಾಡಿದರು. ಕೆಲ ಮನಸ್ತಾಪಗಳಿಂದ 2022ರಲ್ಲಿ ಇಬ್ಬರೂ ಬ್ರೇಕಪ್ ಮಾಡಿಕೊಂಡರು.

'ಈಗ 2' ಬರುವ ಬಗ್ಗೆ ನಾನಿ ಕೊಟ್ರು ಇಂಟರೆಸ್ಟಿಂಗ್ ಅಪ್‌ಡೇಟ್



ನ್ಯಾಚುರಲ್ ಸ್ಟಾರ್ ನಾನಿ ಸದ್ಯ ಮುಂಬರುವ 'ಸೂರ್ಯನ ಸಾಟರ್ಡೆ' ಸಿನಿಮಾ ಪ್ರಚಾರ ಕಾರ್ಯದಲ್ಲಿ ಬ್ಯುಸಿಯಾಗಿದ್ದಾರೆ. ಇದೀಗ 'ಈಗ 2' ಚಿತ್ರದ ಬಗ್ಗೆ ಇಂಟರೆಸ್ಟಿಂಗ್ ಅಪ್‌ಡೇಟ್ ಕೊಟ್ಟಿದ್ದಾರೆ. ಸದ್ಯಕ್ಕೆ 'ಈಗ ಪಾರ್ಟ್ 2' ಬರಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ. 'ಈಗ' ಸಿನಿಮಾದ ಕಥೆ ಬರೆದಿದ್ದು ರಾಜಮೌಳಿ ಅವರ ತಂದೆ ವಿಜಯೇಂದ್ರ ಪ್ರಸಾದ್. ನಮ್ಮಿಬ್ಬರ ನಡುವೆ ಸೀಕ್ವೆಲ್ ಬಗ್ಗೆ ಎಂದೂ ಚರ್ಚೆ ನಡೆದಿಲ್ಲ. ಈ ಹಿಂದೆ ರಾಜಮೌಳಿ ಅವರ ಬಳಿ ತಮಾಷೆಯಾಗಿ ಈ ವಿಚಾರ ಚರ್ಚೆ ಮಾಡಿದ್ದೇನೆ. ಏನಾಯಿತು ಸರ್ ನಾನು ಮತ್ತೆ ಬರುತ್ತೇನೆ ಎಂದಿದ್ದೀರಿ. ಅದು ಯಾವಾಗ ಎಂದು ಕೇಳುತ್ತಿದ್ದೆ. ಅವರು ಈಗ 2 ಚಿತ್ರ ಮಾಡುತ್ತೇನೆ. ಆದರೆ ಅದಕ್ಕೆ ನಿನ್ನ ಅಗತ್ಯ ಇಲ್ಲ ಎಂದು ನಗುತ್ತಿದ್ದರು ಎಂದಿದ್ದಾರೆ ನಾನಿ. ಸರಿಯಾದ ಸಮಯ ಬಂದಾಗ ಅವರು 'ಈಗ 2' ಮಾಡುತ್ತಾರೆ. ಆದರೆ ಸದ್ಯಕ್ಕೆ ಇದರ ಸೀಕ್ವೆಲ್ ಮಾಡಲ್ಲ ಎಂದಿದ್ದಾರೆ ನಾನಿ.

ನಾನಿ, ಕಿಚ್ಚ ಸುದೀಪ್ , ಸಮಂತಾ ನಟನೆಯ 'ಈಗ' ಸಿನಿಮಾ 2012ರಲ್ಲಿ ರಿಲೀಸ್ ಆಗಿ ಯಶಸ್ಸು ಕಂಡಿತ್ತು. ನೊಣದ ಕಥೆಯನ್ನು ಅದ್ಭುತವಾಗಿ ತೋರಿಸಿದ್ದರು. ಈ ಚಿತ್ರದ ಸೀಕ್ವೆಲ್ ಮಾಡಿದ್ರೆ ಚೆನ್ನಾಗಿರುತ್ತೆ ಅನ್ನೋದು ಅಭಿಮಾನಿಗಳ ಆಶಯಕ್ಕೆ ಸಂದರ್ಶನವೊಂದರಲ್ಲಿ ನಾನಿ ಕಡೆಯಿಂದ ಉತ್ತರ ಸಿಕ್ಕಿದೆ. 'ಈಗ' ಸಿನಿಮಾದಲ್ಲಿ ನಾನಿ ಮತ್ತು ಸಮಂತಾ ಜೋಡಿಯಾಗಿ ನಟಿಸಿದರು. ಕನ್ನಡದ ನಟ ಕಿಚ್ಚ ಸುದೀಪ್ ವಿಲನ್ ಆಗಿ ಮಿಂಚಿದ್ದರು.

ಹೊಸ ಸಿನಿಮಾ ಘೋಷಿಸಿದ ದುನಿಯಾ ವಿಜಯ್

ಸಲಗ, ಭೀಮ ಸಿನಿಮಾ ಎರಡು ಸೂಪರ್ ಸಕ್ಸಸ್ ಕಂಡಿದೆ. 'ಭೀಮ' ಸಿನಿಮಾದ ಯಶಸ್ಸಿನ ಬೆನ್ನಲ್ಲೇ ಹೊಸ ಪ್ರಾಜೆಕ್ಟ್ ಅನ್ನು ದುನಿಯಾ ವಿಜಯ್ ಅನೌನ್ಸ್ ಮಾಡಿದ್ದಾರೆ. ವಿಜಯ್ ಮುಂಬರುವ ಸಿನಿಮಾದ ಫಸ್ಟ್ ಲುಕ್ ಕೂಡ ರಿವೀಲ್ ಮಾಡಿದ್ದಾರೆ. 'ವಿಕೆ 30' ಎಂದು ಪೋಸ್ಟರ್ ಅನಾವರಣ ಆಗಿದೆ. ಖಡಕ್ ಲುಕ್‌ನಲ್ಲಿ ವಿಜಯ್ ಕಾಣಿಸಿಕೊಂಡಿದ್ದು, ಸಿನಿಮಾದ ಬಗ್ಗೆ ಫ್ಯಾನ್ಸ್‌ಗೆ ನಿರೀಕ್ಷೆ ಮೂಡಿಸಿದೆ. ಈ ಹಿಂದೆ ಸಲಗ, ಭೀಮ ಸಿನಿಮಾದಲ್ಲಿ ಅಸೋಸಿಯೇಟ್ ಆಗಿ ಕೆಲಸ ಮಾಡ್ತಿದ್ದ ಆರ್. ವೆಟ್ರಿವೇಲ್ ಈ ಚಿತ್ರವನ್ನು ನಿರ್ದೇಶನ ಮಾಡುತ್ತಿದ್ದಾರೆ.

ಈ ಸಿನಿಮಾದಲ್ಲಿ ಡಿಫರೆಂಟ್ ರೋಲ್‌ನಲ್ಲಿ ಕಾಣಿಸಿಕೊಳ್ತಿದ್ದಾರೆ. ಆದರೆ ಕಥೆಯ ಬಗ್ಗೆ ಎಲ್ಲೂ ರಿವೀಲ್ ಆಗಿಲ್ಲ. ಆದರೆ ಈ ಸಿನಿಮಾದ ಮೂಲಕ ಪ್ರೇಕ್ಷಕರಿಗೆ ಉತ್ತಮ ಸಂದೇಶ ಸಿಗಲಿದೆಯಂತೆ.

ತಂಡದ ಜೊತೆ ವಿಜಯ್ ಸಕಲೇಶಪುರದಲ್ಲಿರುವ ಫೋಟೋವನ್ನು ವಿಜಯ್ ಶೇರ್ ಮಾಡಿದ್ದರು. ಎರಡು ಹೊಸ ಸಿನಿಮಾಗಳಿಗೆ ತಯಾರಿ ಮಾಡಿಕೊಳ್ಳತ್ತಿದ್ದು, ಅವರೇ ಕಥೆ ರೆಡಿ ಮಾಡುತ್ತಿದ್ದಾರೆ ಎಂದು ತಿಳಿಸಿದ್ದರು. ಈ ಬೆನ್ನಲ್ಲೇ 'ವಿಕೆ 30' ಚಿತ್ರದ ಅಧಿಕೃತ ಘೋಷಣೆ ಮಾಡಿರೋದು ಅಭಿಮಾನಿಗಳಿಗೆ ಕುತೂಹಲ ಮೂಡಿಸಿದೆ.

ಶಿವಕಾರ್ತಿಕೇಯನ್‌ಗೆ ಶ್ರೀಲೀಲಾ ಜೋಡಿ

ಕನ್ನಡತಿ ಶ್ರೀಲೀಲಾಗೆ ಪರಭಾಷೆಗಳಲ್ಲಿ ಬೇಡಿಕೆ ಹೆಚ್ಚಾಗಿದೆ. ಬಾಲಿವುಡ್ ಸ್ಟಾರ್ ನಟನಿಗೆ ನಾಯಕಿಯಾದ ಬೆನ್ನಲ್ಲೇ ಕಾಲಿವುಡ್‌ಗೂ ಪಾದಾರ್ಪಣೆ ಮಾಡೋಕೆ ನಟಿ ಸಜ್ಜಾಗಿದ್ದಾರೆ. ಶಿವಕಾರ್ತಿಕೇಯನ್‌ಗೆ ನಾಯಕಿಯಾಗಿ 'ಕಿಸ್' ನಟಿ ತಮಿಳಿಗೆ ಎಂಟ್ರಿ ಕೊಡ್ತಿದ್ದಾರೆ.

ತೆಲುಗಿನಲ್ಲಿ ಇತ್ತೀಚೆಗೆ ಶ್ರೀಲೀಲಾ ನಟಿಸಿದ ಸಿನಿಮಾಗಳು ಫ್ಲಾಪ್ ಆದರೂ ಅವರಿಗೆ ಡಿಮ್ಯಾಂಡ್ ಏನು ಕಮ್ಮಿಯಾಗಿಲ್ಲ. ನಟಿಯ ಪ್ರತಿಭೆ ಮತ್ತು ಬ್ಯೂಟಿಗೆ ಪ್ರೇಕ್ಷಕರು ಫಿದಾ ಆಗಿದ್ದಾರೆ. ಇನ್ನೂ ದಿನಗಳಿಂದ ನಟಿಯ ತಮಿಳು ಡೆಬ್ಯೂ ಕುರಿತು ಭಾರೀ ಚರ್ಚೆ ಶುರುವಾಗಿತ್ತು. ಈಗ ಸ್ಟಾರ್ ನಿರ್ದೇಶಕಿ ಸುಧಾ ಕೊಂಗರ ಸಿನಿಮಾಗೆ ಶ್ರೀಲೀಲಾ ಆಯ್ಕೆಯಾಗಿದ್ದಾರೆ ಎಂದು ಸೋಶಿಯಲ್ ಮೀಡಿಯಾದಲ್ಲಿ ಚರ್ಚೆಗೆ ಗ್ರಾಸವಾಗಿದೆ. ಶಿವಕಾರ್ತಿಕೇಯನ್ ನಟನೆಯ 'ಪುರಾಣನೂರು' ಚಿತ್ರಕ್ಕೆ 'ಸೂರರೈ ಪೊಟ್ರು' ಡೈರೆಕ್ಟರ್ ಸುಧಾ ಕೊಂಗರ ನಿರ್ದೇಶನ ಮಾಡುತ್ತಿದ್ದಾರೆ. ಕನ್ನಡತಿ ಶ್ರೀಲೀಲಾ ಡ್ಯಾನ್ಸ್ ಸ್ಕಿಲ್ ಮತ್ತು ನಟನೆ ಮೆಚ್ಚಿ ಈ ಚಿತ್ರಕ್ಕೆ ನಾಯಕಿಯಾಗಿ ಆಯ್ಕೆ ಮಾಡಿದ್ದಾರೆ ಎನ್ನಲಾಗಿದೆ. ಈಗಾಗಲೇ ಶಿವಕಾರ್ತಿಕೇಯನ್ ಜೊತೆ ಶ್ರೀಲೀಲಾ ಫೋಟೋಶೂಟ್ ಕೂಡ ಆಗಿದೆ ಎಂಬುದು ಸದ್ಯ ಹರಿದಾಡುತ್ತಿರುವ ವಿಚಾರ. ಈ ಸಂಗತಿ ನಿಜನಾ ಈ ಪ್ರಾಜೆಕ್ಟ್ ಕುರಿತು ಸದ್ಯದಲ್ಲೇ ಅಧಿಕೃತ ಘೋಷಣೆ ಆಗುವವರೆಗೂ ಕಾದುನೋಡಬೇಕಿದೆ. ಅಂದಹಾಗೆ, ಬಾಲಿವುಡ್‌ನಲ್ಲಿ ಕಿಯಾರಾ ಪತಿ ಸಿದ್ಧಾರ್ಥ್ ಮಲ್ಹೋತ್ರಾಗೆ ಹೀರೋಯಿನ್ ಆಗಿ ಶ್ರೀಲೀಲಾ ಆಯ್ಕೆಯಾಗಿದ್ದಾರೆ. ಅಕ್ಟೋಬರ್‌ನಿಂದ ಶೂಟಿಂಗ್ ಶುರುವಾಗಲಿದೆ. ಇದರೊಂದಿಗೆ ನಿತಿನ್ ಜೊತೆ 'ರಾಬಿನ್‌ಹುಡ್' ಸಿನಿಮಾ, ಪವನ್ ಕಲ್ಯಾಣ್ ಜೊತೆಗಿನ ಚಿತ್ರ ಸೇರಿದಂತೆ ಪ್ರಾಜೆಕ್ಟ್‌ಗಳಿವೆ.

ರಾಮ್ ಪೋತಿನೇನಿಗೆ ರುಕ್ಮಿಣಿ ವಸಂತ್ ನಾಯಕಿ

ಕನ್ನಡದ ಬ್ಯೂಟಿ ರುಕ್ಮಿಣಿ ವಸಂತ್‌ಗೆ ಪರಭಾಷೆಯಲ್ಲಿ ಬೇಡಿಕೆಹಲವು ಹೆಚ್ಚಾಗಿದೆ. ತಮಿಳಿನ ಬಿಗ್ ಸ್ಟಾರ್‌ಗಳ ನಟಿಸಿದ ಮೇಲೆ ತೆಲುಗಿನಲ್ಲಿ ರುಕ್ಮಿಣಿಗೆ ಅದೃಷ್ಟ ಒಲಿದು ಬಂದಿದೆ. ವಿಜಯ್ ದೇವರಕೊಂಡ ಅಲ್ಲ, ರಾಮ್ ಪೋತಿನೇನಿಗೆ ಕನ್ನಡದ ನಟಿ ಜೋಡಿಯಾಗ್ತಿದ್ದಾರೆ. ವಿಜಯ್ ಸೇತುಪತಿ, ಶಿವ ಕಾರ್ತಿಕೇಯನ್‌ಗೆ ಹೀರೋಯಿನ್ ಆಗಿ ನಟಿಸಿದ ನಂತರ ತೆಲುಗಿನಿಂದ ನಟಿಗೆ ಬುಲಾವ್ ಬಂದಿದೆ. ವಿಜಯ್ ದೇವರಕೊಂಡಗೆ ಅಲ್ಲ, ಬದಲಾಗಿ ರಾಮ್ ಪೋತಿನೇನಿ ಮುಂಬರುವ ಚಿತ್ರಕ್ಕೆ ರುಕ್ಮಿಣಿ ವಸಂತ್ ಸಹಿ ಹಾಕಿದ್ದಾರೆ ಎಂಬ ಸುದ್ದಿ ಸೋಶಿಯಲ್ ಮೀಡಿಯಾದಲ್ಲಿ ಚರ್ಚೆಗೆ ಗ್ರಾಸವಾಗಿದೆ. ತೆಲುಗಿನಿಂದ ಸಾಕಷ್ಟು ಸಿನಿಮಾ ತಂಡದಿಂದ ನಟಿಗೆ ಆಫರ್ ಸಿಕ್ಕಿದೆ. ಆದರೆ ಕಥೆ ಮತ್ತು ಪಾತ್ರಕ್ಕೆ ಹೆಚ್ಚು ಪ್ರಾಮುಖ್ಯತೆ ಕೊಡುವ ನಟಿ ಈಗ ರಾಮ್ ನಟಿಸಲಿರುವ ಚಿತ್ರ ಕಥೆ ಇಷ್ಟವಾಗಿ ಓಕೆ ಎಂದಿದ್ದಾರೆ ಎಂಬುದು ಇನ್‌ಸೈಡ್ ನ್ಯೂಸ್. ಚಿತ್ರತಂಡ ಕಡೆಯಿಂದ ಅಫಿಷಿಯಲ್ ಅನೌನ್ಸ್‌ಮೆಂಟ್ ಬರುವವರೆಗೂ ಕಾಯಬೇಕಿದೆ.

ಅಲ್ಲಿಗೆ ಕೆಲ ತಿಂಗಳುಗಳಿಂದ ವಿಜಯ್ ದೇವರಕೊಂಡಗೆ ರುಕ್ಮಿಣಿ ನಾಯಕಿ ಎಂದು ಹರಿದಾಡುತ್ತಿದ್ದ ಸುದ್ದಿಗೆ ಈಗ ಸ್ಪಷ್ಟನೆ ಸಿಕ್ಕಿದೆ.

ಅಂದಹಾಗೆ, ಕನ್ನಡದಲ್ಲಿ ಶಿವಣ್ಣ ಜೊತೆ ಭೈರತಿ ರಣಗಲ್, ಶ್ರೀಮುರಳಿ ಜೊತೆ ಬಘೀರ ಸೇರಿದಂತೆ ಹಲವು ಚಿತ್ರಗಳನ್ನು ರುಕ್ಮಿಣಿ ವಸಂತ್ ಒಪ್ಪಿಕೊಂಡಿದ್ದಾರೆ.

ಬಿಗ್ ಬ್ಯಾಷ್ ಲೀಗ್ ಡ್ರಾಫ್ಟ್ ಪಟ್ಟಿಯಲ್ಲಿ 19 ಭಾರತೀಯರು

ಆಸ್ಟ್ರೇಲಿಯಾ ಕ್ರಿಕೆಟ್ ಬೋರ್ಡ್ ಆಯೋಜಿಸುವ ವುಮೆನ್ಸ್ ಬಿಗ್ ಬ್ಯಾಷ್ ಲೀಗ್‌ನ 10ನೇ ಸೀಸನ್‌ಗಾಗಿ ಸಿದ್ಧತೆಗಳು ಶುರುವಾಗಿದೆ. ಇದರ ಮೊದಲ ಹೆಜ್ಜೆ ಎಂಬಂತೆ ಇದೀಗ ಎಲ್ಲಾ ಫ್ರಾಂಚೈಸಿಗಳು ಆಟಗಾರ್ತಿಯರ ಆಯ್ಕೆಗೆ ಮುಂದಾಗಿದೆ. ಅದರಂತೆ ಇದೀಗ ಟೀಮ್ ಇಂಡಿಯಾದ ಉಪನಾಯಕಿ ಸ್ಮೃತಿ ಮಂಧಾನ ಅಡಿಲೇಡ್ ಸ್ಟ್ರೈಕರ್ಸ್ ತಂಡವನ್ನು ಸೇರಿಕೊಂಡಿದ್ದಾರೆ.

ಈ ಹಿಂದೆ ಸ್ಮೃತಿ ಮಂಧಾನ ಬ್ರಿಸ್ಬೇನ್ ಹೀಟ್, ಹೋಬರ್ಟ್ ಹರಿಕೇನ್ಸ್ ಮತ್ತು ಸಿಡ್ನಿ ಥಂಡರ್ ತಂಡಗಳ ಪರ ಕಣಕ್ಕಿಳಿದಿದ್ದರು. ಈ ಬಾರಿ ಟೀಮ್ ಇಂಡಿಯಾ ಆಟಗಾರ್ತಿಯನ್ನು ಖರೀದಿಸುವಲ್ಲಿ ಅಡಿಲೇಡ್ ಸ್ಟ್ರೈಕರ್ಸ್ ತಂಡ ಯಶಸ್ವಿಯಾಗಿದೆ. ಇನ್ನು ವುಮೆನ್ಸ್ ಬಿಗ್ ಬ್ಯಾಷ್ ಲೀಗ್‌ಗೆ ಪ್ರಕಟಿಸಲಾದ ಡ್ರಾಫ್ಟ್ ಪಟ್ಟಿಯಲ್ಲಿ ಭಾರತದ 19 ಆಟಗಾರ್ತಿಯರ ಹೆಸರು ಕಾಣಿಸಿಕೊಂಡಿದೆ. ಈ ಪಟ್ಟಿಯಲ್ಲಿ ಟೀಮ್ ಇಂಡಿಯಾದ ನಾಯಕಿ ಹರ್ಮನ್‌ಪ್ರೀತ್ ಕೌರ್, ಜೆಮಿಮಾ ರೊಡ್ರಿಗಸ್‌ನಂತಹ ಸ್ಟಾರ್ ಆಟಗಾರ್ತಿಯರು ಇರುವುದು ವಿಶೇಷ. ಅದರಂತೆ 2024 ಡ್ರಾಫ್ಟ್ ಪಟ್ಟಿಯಲ್ಲಿ ಸ್ಥಾನ ಪಡೆದಿರುವ ಭಾರತೀಯ ಆಟಗಾರ್ತಿಯರ ಹೆಸರು ಈ ಕೆಳಗಿನಂತಿದೆ...

10ನೇ ಸೀಸನ್ ಸಿದ್ಧತೆ

ಹರ್ಮನ್‌ಪ್ರೀತ್ ಕೌರ್, ಜೆಮಿಮಾ ರೊಡ್ರಿಗಸ್, ದೀಪ್ತಿ ಶರ್ಮಾ, ಶ್ರೇಯಾಂಕಾ ಪಾಟೀಲ್, ಟಿಟಾಸ್ ಸಾಧು, ಆಶಾ ಸೋಭಾನ, ರಾಧಾ ಯಾದವ್, ಅಮನ್‌ಜೋತ್ ಕೌರ್, ಯಾಸ್ತಿಕಾ ಭಾಟಿಯಾ, ಶಿಖಾ ಪಾಂಡೆ, ಸ್ನೇಹ ರಾಣಾ, ಹೇಮಲತಾ ದಯಾಳನ್, ಸಜನಾ ಸಜೀವನ್, ಮನ್ನತ್ ಕಶ್ಯಪ್, ಮೇಘನಾ ಸಬ್ಬಿನೇನಿ, ವೇದಾ ಕೃಷ್ಣಮೂರ್ತಿ, ಮೋನಾ ಮೇಶ್ರಮ್, ಮೇಘನಾ ಸಿಂಗ್. ವುಮೆನ್ಸ್ ಬಿಗ್ ಬ್ಯಾಷ್ ಲೀಗ್ ಟಿ20 ಟೂರ್ನಿಯು ಅಕ್ಟೋಬರ್ 27 ರಿಂದ ಶುರುವಾಗಲಿದೆ. ಈ ಟೂರ್ನಿಯಲ್ಲಿ ಒಟ್ಟು 8 ತಂಡಗಳು ಕಣಕ್ಕಿಳಿಯುತ್ತಿದ್ದು, ಅದರಂತೆ ಅಡಿಲೇಡ್ ಸ್ಟ್ರೈಕರ್ಸ್, ಬ್ರಿಸ್ಬೇನ್ ಹೀಟ್, ಹೊಬಾರ್ಟ್ ಹರಿಕೇನ್ಸ್, ಮೆಲ್ಬೋರ್ನ್ ರೆನೆಗೇಡ್ಸ್, ಮೆಲ್ಬೋರ್ನ್ ಸ್ಟಾರ್ಸ್, ಪರ್ತ್ ಸ್ಕಾರ್ಚರ್ಸ್, ಸಿಡ್ನಿ ಸಿಕ್ಸರ್ಸ್ ಮತ್ತು ಸಿಡ್ನಿ ಥಂಡರ್ ತಂಡಗಳ ನಡುವೆ ಕದನ ನಡೆಯಲಿದೆ.

ಕುತೂಹಲ ಮೂಡಿಸಿದ ಕೆಎಲ್ ರಾಹುಲ್ ನಡೆ..!

ಐಪಿಎಲ್ 2025ರ ಮೆಗಾ ಹರಾಜಿಗೂ ಮುನ್ನ ಕೆಎಲ್ ರಾಹುಲ್ ಲಕ್ನೋ ಸೂಪರ್ ಜೈಂಟ್ಸ್ ತಂಡದ ಮಾಲೀಕರಾದ ಸಂಜೀವ್ ಗೊಯೆಂಕಾ ಅವರನ್ನು ಭೇಟಿಯಾಗಿದ್ದಾರೆ. ಕೊಲ್ಕತ್ತಾದಲ್ಲಿರುವ ತಮ್ಮ ಕಚೇರಿಗೆ ರಾಹುಲ್ ಅವರನ್ನು ಕರೆಸಿಕೊಂಡು ಎಲ್‌ಎಸ್‌ಜಿ ತಂಡದ ಮಾಲೀಕರು ಮಾತುಕತೆ ನಡೆಸಿದ್ದಾರೆ.

ಈ ಮಾತುಕತೆಯ ಬೆನ್ನಲ್ಲೇ ಕೆಎಲ್ ರಾಹುಲ್ ಅವರ ಮುಂದಿನ ನಡೆಯೇನು ಎಂಬ ಪ್ರಶ್ನೆ ಹುಟ್ಟಿಕೊಂಡಿದೆ. ಏಕೆಂದರೆ ಸಂಜೀವ್ ಗೊಯೆಂಕಾ ರಾಹುಲ್ ಅವರನ್ನು ಕರೆಸಿಕೊಂಡು ಮಾತನಾಡಬೇಕಿದ್ದರೆ, ಇಲ್ಲಿ ಎಲ್ಲಾವೂ ಸರಿಯಿಲ್ಲ ಎಂಬುದು ಸ್ಪಷ್ಟ. ಅದರಲ್ಲೂ ಕೆಎಲ್‌ಆರ್ ಲಕ್ನೋ ಸೂಪರ್ ಜೈಂಟ್ಸ್ ತಂಡವನ್ನು ತೊರೆಯಲು ಮುಂದಾಗಿದ್ದು, ಇದೇ ಕಾರಣದಿಂದಾಗಿ ಅವರ ಮನವೊಲಿಸಲು ಇದೀಗ ಎಲ್‌ಎಸ್‌ಜಿ ಮಾಲೀಕರು ಮುಂದಾಗಿದ್ದಾರೆ ಎನ್ನಲಾಗುತ್ತಿದೆ.

ಇನ್ನು ಭೇಟಿಯ ವೇಳೆ ತಮ್ಮನ್ನು ತಂಡದಲ್ಲೇ ಉಳಿಸಿಕೊಳ್ಳಲು ಲಕ್ನೋ ಸೂಪರ್ ಜೈಂಟ್ಸ್ ಫ್ರಾಂಚೈಸಿ ಬಯಸುತ್ತಿರುವುದಾಗಿ ಸಂಜೀವ್ ಗೊಯೆಂಕಾ ತಿಳಿಸಿದ್ದಾರೆ. ಇದಾಗ್ಯೂ ಕೆಎಲ್ ರಾಹುಲ್ ಅಂತಿಮ ನಿರ್ಧಾರವನ್ನು ತಿಳಿಸಿಲ್ಲ. ಹೀಗಾಗಿ ಕೆಎಲ್ ಆರ್ ಲಕ್ನೋ ಸೂಪರ್ ಜೈಂಟ್ಸ್ ತಂಡದಲ್ಲೇ ಉಳಿಯಲಿದ್ದಾರಾ ಅಥವಾ ಮೆಗಾ ಹರಾಜಿನಲ್ಲಿ ಕಾಣಿಸಿಕೊಳ್ಳಲಿದ್ದಾರಾ ಎಂಬುದು ಇನ್ನಷ್ಟೇ ನಿರ್ಧಾರವಾಗಲಿದೆ.

ಒಂದು ವೇಳೆ ಲಕ್ನೋ ಸೂಪರ್ ಜೈಂಟ್ಸ್ ತಂಡದಿಂದ ಹೊರಬಂದರೆ ರಾಹುಲ್ ಖರೀದಿಗೆ ಕೆಲ ಫ್ರಾಂಚೈಸಿಗಳು ಮುಂದಾಗಲಿದೆ.

ಅದರಲ್ಲೂ ಹೊಸ ನಾಯಕ ಹಾಗೂ ವಿಕೆಟ್ ಕೀಪರ್‌ನ ಹುಡುಕಾಟದಲ್ಲಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿ ಕೆಎಲ್ ರಾಹುಲ್ ಖರೀದಿಗೆ ಹೆಚ್ಚಿನ ಆಸಕ್ತಿ ಹೊಂದಿದೆ.

ಹೀಗಾಗಿ ರಾಹುಲ್ ಮೆಗಾ ಹರಾಜಿನಲ್ಲಿ ಕಾಣಿಸಿಕೊಂಡರೆ ಆರ್‌ಸಿಬಿ ಖರೀದಿಸುವುದು ಬಹುತೇಕ ಖಚಿತ ಎನ್ನಲಾಗುತ್ತಿದೆ. ಆದರೆ ಇದೀಗ ಲಕ್ನೋ ಸೂಪರ್ ಜೈಂಟ್ಸ್ ಮಾಲೀಕರನ್ನು ಭೇಟಿಯಾಗಿರುವ ಕಾರಣ ಕೆಎಲ್ ರಾಹುಲ್ ಅವರ ಮುಂದಿನ ನಡೆಯೇನು ಎಂಬುದನ್ನು ಹಲವು ಫ್ರಾಂಚೈಸಿಗಳು ಎದುರು ನೋಡುತ್ತಿದೆ.

ದೇಶೀಯ ಆಟಗಾರರಿಗೆ ಗುಡ್ ನ್ಯೂಸ್

ಬಿಸಿಸಿಐ ಕಾರ್ಯದರ್ಶಿ ಜಯ್ ಶಾ ಶೀಘ್ರದಲ್ಲೇ ತಮ್ಮ ಹುದ್ದೆಗೆ ರಾಜೀನಾಮೆ ನೀಡುವ ಸಾಧ್ಯತೆಯಿದೆ. ಏಕೆಂದರೆ ಮುಂಬರುವ ಐಸಿಸಿ ಚುನಾವಣೆಯಲ್ಲಿ ಜಯ್ ಶಾ ಸ್ಪರ್ಧಿಸಲಿದ್ದು, ಈ ಮೂಲಕ ವಿಶ್ವ ಕ್ರಿಕೆಟ್‌ನ ಮುಖ್ಯಸ್ಥರಾಗುವ ಹಂಬಲದಲ್ಲಿದ್ದಾರೆ. ಆದರೆ ಇದಕ್ಕೂ ಮುನ್ನ ಜಯ್ ಶಾ ದೇಶೀಯ ಕ್ರಿಕೆಟ್‌ನಲ್ಲಿ ಮಹತ್ವದ ಬದಲಾವಣೆ ತಂದಿರುವುದು ವಿಶೇಷ. ದೇಶೀಯ ಟೂರ್ನಿಗಳಲ್ಲಿ ಅತ್ಯುತ್ತಮ ಪ್ರದರ್ಶನ ನೀಡುವ ಆಟಗಾರರಿಗೆ ಪಂದ್ಯ ಶ್ರೇಷ್ಠ ಮತ್ತು ಸರಣಿ ಶ್ರೇಷ್ಠ ಪ್ರಶಸ್ತಿಗಳ ಜೊತೆ ಬಹುಮಾನ ಮೊತ್ತ ನೀಡುವುದಾಗಿ ಬಿಸಿಸಿಐ ಕಾರ್ಯದರ್ಶಿ ಜಯ್ ಶಾ ಘೋಷಿಸಿದ್ದಾರೆ. ಈ ಮೂಲಕ ದೇಶೀಯ ಕ್ರಿಕೆಟ್‌ನಲ್ಲಿ ಅತ್ಯುತ್ತಮ ಪ್ರದರ್ಶನ ನೀಡುವ ಆಟಗಾರರನ್ನು ಪ್ರೋತ್ಸಾಹಿಸಲು ಬಿಸಿಸಿಐ ಮುಂದಾಗಿದೆ. ಈ ಅನುಕ್ರಮವು ಎಲ್ಲಾ ಮಹಿಳಾ ಮತ್ತು ಜೂನಿಯರ್ ಕ್ರಿಕೆಟ್ ಪಂದ್ಯಾವಳಿಗಳಿಗೂ ಅನ್ವಯವಾಗಲಿದೆ. ಹಾಗೆಯೇ ವಿಜಯ್ ಹಝಾರೆ ಮತ್ತು ಸೈಯದ್ ಮುಷ್ತಾಕ್ ಅಲಿ ಪಂದ್ಯಾವಳಿಗಳಲ್ಲೂ ಪಂದ್ಯ ಶ್ರೇಷ್ಠ, ಸರಣಿ ಶ್ರೇಷ್ಠ ಪ್ರಶಸ್ತಿಗಳೊಂದಿಗೆ ಬಹುಮಾನ ಮೊತ್ತವಾಗಿ ಹಣವನ್ನು ನೀಡಲಿದ್ದೇವೆ ಎಂದು ಜಯ್ ಶಾ ಎಕ್ಸ್ ಮೂಲಕ ತಿಳಿಸಿದ್ದಾರೆ.

ಈ ಬಗ್ಗ